23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 310 | ನವದೆಹಲಿ | ಬೆಲೆ ₹10 | ಮೇ 16 2026, ಶನಿವಾರ


Share to Shine

Art of Giving

Share to Shine

KISS
KALINGA INSTITUTE OF SOCIAL SCIENCES

# Celebration of International 'Art of Giving' Day

The true essence of peace and happiness lies in awakening the spirit of giving within every individual. **Art of Giving** is a non-profit initiative devoted to inspiring, nurturing, and promoting the culture of giving across the world. We warmly invite you, along with your family and friends, to be a part of the 13th Anniversary Celebration of AoG.

13th Anniversary of
**Art Of Giving**

## Chief Guests



**HON'BLE. JUSTICE N. SANTOSH HEGDE**
Retd. Judge, Supreme Court of India
Karnataka Lokayukta (Retd)



**HON'BLE. JUSTICE SHRI KRISHNA S. DIXIT**
Judge, High Court of Odisha



**SHRI RAKESH SINGH, IAS (Retd)**
Chairman, Karnataka Real Estate Regulatory Authority,
Government of Karnataka




**Dr. VENKATESH M V IAS**
Secretary to Government, Planning,
ProgrammeMonitoring & Statistics
Department, Government of Karnataka



**Dr. WOODAY P. KRISHNA**
President, Gandhi Smaraka Nidhi



**Smt. SAVITHAKKA**
International Folk singer



**P.SHESHADRI**
Film Producer & Director

### Honouring Impactful Change-Makers

**Dr. A. M. Suresh –** for excellence in education, skill development, entrepreneurship, and youth empowerment.
**Mr. Pranab K Pani –** for leadership in corporate strategy, branding, start-up mentoring, and business transformation.
**Mrs. H. V. Hemalatha –** for nurturing young talent through dance education and promoting cultural values.
**Mr. Maruthesh –** for excellence as a voice artist, presenter, writer, and cultural communicator in Kannada media.
**Mr. Raghavendra T. V. –** for devoted temple service and preservation of spiritual and rural traditions.
**Mr. K. Rakesh –** for pioneering Singing Bowl Therapy and promoting holistic sound healing.
**Mrs. Seema Muralidhar –** for achievements in arts, dance, entrepreneurship, and women empowerment.
**Mr. Shashidhar Y. B –** for work in land surveying, property awareness, and public knowledge sharing.

### PROGRAM HIGHLIGHTS

- Special Video Message by AOG Founder Dr. Achyuta Samanta
- Grand folk music concert by Savithakka
- Captivating and thought-provoking dance performance
- Healing of body and mind through Singing Bowl therapy
- Inspiring talks by eminent guests

With Blessings from



**Prof. ACHYUTA SAMANTA**
**Founder - KIIT, KISS, KIMS & AOG**

Date:
**Sunday, May 17, 2026**

Venue:
**Gandhi Bhavana,**
Kumara Krupa road,
near Shivananda circle,
Bengaluru.

Timings:
**10.00am 11.30am** Cultural program
**11.30am1.30pm** Main events
Event followed by Lunch

For more details,
**R. GURU PRASAD**
President,AOG Karnataka
M: 9844176792

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮೇ 16 2026, ಶನಿವಾರ

## ಒಳಪುಟಗಳಲ್ಲಿ

3 ವರ್ಷಗಳಲ್ಲಿ ಎಸಿ ನ್ಯಾಯಾಲಯದ ಶೇ.90ಕ್ಕೂ ಪ್ರಕರಣಗಳ ಇತ್ಯರ್ಥ - ಪು.4

ಉಪಲೋಕಾಯುಕ್ತ ನೇತೃತ್ವದಲ್ಲಿ 229 ಕೆರೆ ಒತ್ತುವರಿ ತೆರವು - ಪು.5

ಭೋಜಶಾಲಾ ಇನ್ನು ದೇವಸ್ಥಾನ: ಮಧ್ಯಪ್ರದೇಶ ಹೈಕೋರ್ಟ್ ಐತಿಹಾಸಿಕ ತೀರ್ಪು - ಪು.7

# ಪೆಟ್ರೋಲ್, ಡಿಸೇಲ್ ಪ್ರತಿ ಲೀಟರ್‌ಗೆ 3 ರೂಪಾಯಿ ಏರಿಕೆ

**ನವದೆಹಲಿ, ಮೇ 15:** ಮಧ್ಯಪ್ರಾಚ್ಯದಲ್ಲಿ ಮುಂದುವರಿದಿರುವ ಯುದ್ಧ ಹಾಗೂ ಹಾರ್ಮುಜ್ ಜಲಸಂಧಿ ಬಂದ್ ಪರಿಣಾಮ ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಭಾರೀ ಅಸ್ಥಿರತೆ ಉಂಟಾಗಿದ್ದು, ಭಾರತದಲ್ಲೂ ಪೆಟ್ರೋಲ್, ಡೀಸೆಲ್ ಬಳಿಕ ಇದೀಗ ಸಿಎನ್‌ಜಿ ದರವೂ ಹೆಚ್ಚಳ ಕಂಡಿದೆ. ಸಿಎನ್‌ಜಿ ದರವನ್ನು ಕೆಜಿಗೆ ರೂ.2ರಷ್ಟು ಹೆಚ್ಚಿಸಲಾಗಿದೆ.

ಇದಕ್ಕೂ ಮೊದಲು ಕೇಂದ್ರ ಸರ್ಕಾರ ಪೆಟ್ರೋಲ್ ದರವನ್ನು ಲೀಟರ್‌ಗೆ ರೂ.3.14 ಮತ್ತು ಡೀಸೆಲ್ ದರವನ್ನು ರೂ.3.11ರಷ್ಟು ಹೆಚ್ಚಿಸಿತ್ತು. ಈ ಏರಿಕೆಯ ಬಳಿಕ ದೆಹಲಿಯಲ್ಲಿ ಪ್ರತಿ ಲೀಟರ್ ಪೆಟ್ರೋಲ್ ದರ ರೂ.97.77 ಹಾಗೂ ಡೀಸೆಲ್ ದರ ರೂ.90.67ಕ್ಕೆ ತಲುಪಿದೆ.

ಹಾರ್ಮುಜ್ ಜಲಸಂಧಿ ಜಾಗತಿಕ ತೈಲ ಮತ್ತು ಅನಿಲ ಸಾಗಣೆಯ ಪ್ರಮುಖ ಮಾರ್ಗವಾಗಿದ್ದು, ವಿಶ್ವದ ಒಟ್ಟು ತೈಲ-ಅನಿಲ ವ್ಯಾಪಾರದ ಸುಮಾರು ಐದನೇ ಭಾಗ ಇದೇ ಮಾರ್ಗದ ಮೂಲಕ ಸಾಗುತ್ತದೆ. ಅಮೆರಿಕಾ, ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ ತೀವ್ರಗೊಂಡ ಹಿನ್ನೆಲೆಯಲ್ಲಿ ಈ ಮಾರ್ಗದಲ್ಲಿ ಉಂಟಾದ ಅಡಚಣೆ ಜಾಗತಿಕ ಇಂಧನ ಸರಬರಾಜಿನ ಮೇಲೆ ದೊಡ್ಡ ಪರಿಣಾಮ ಬೀರಿದೆ.

### ಸಿಎನ್‌ಜಿ ದರವೂ ಕೆ.ಜಿ.ಗೆ 2 ರೂ. ಹೆಚ್ಚಳ




ಭಾರತ ತನ್ನ ಕಚ್ಚಾ ತೈಲ ಅವಶ್ಯಕತೆಯ ಸುಮಾರು 90 ಶೇಕಡಾವನ್ನು ಆಮದು ಮಾಡಿಕೊಳ್ಳುವುದರಿಂದ ಜಾಗತಿಕ ಮಾರುಕಟ್ಟೆಯ ಬೆಲೆ ಬದಲಾವಣೆ ದೇಶದ ಆರ್ಥಿಕತೆಗೆ ನೇರ ಪರಿಣಾಮ ಬೀರುತ್ತದೆ. ಹೀಗಾಗಿ ಹಾರ್ಮುಜ್ ಜಲಸಂಧಿ ಬಂದ್ ಮತ್ತು ಮಧ್ಯಪ್ರಾಚ್ಯ ಸಂಘರ್ಷದಿಂದ ಭಾರತವೂ ಸಂಕಷ್ಟಕ್ಕೆ ಸಿಲುಕಿದೆ.

ಸಿಎನ್‌ಜಿ ದರ ಏರಿಕೆಯಿಂದಾಗಿ ಸಾರ್ವಜನಿಕ ಸಾರಿಗೆಯನ್ನು ಅವಲಂಬಿಸಿರುವ ಜನಸಾಮಾನ್ಯರಿಗೆ ಸಂಕಷ್ಟ ಎದುರಾಗಿದ್ದು, ನಗರ ಪ್ರದೇಶಗಳಲ್ಲಿ ಆಟೋ ಮತ್ತು ಕ್ಯಾಬ್ ದರಗಳು ಶೀಘ್ರದಲ್ಲೇ ಏರಿಕೆಯಾಗುವ ಸಾಧ್ಯತೆಯಿದೆ.

### ಎಲ್ಲೆಲ್ಲಿ ಎಷ್ಟು ಬೆಲೆ?

ದೆಹಲಿಯಲ್ಲಿ ರೂ.97.77, ಕೋಲ್ಕತ್ತಾದಲ್ಲಿ ರೂ.108.74, ಮುಂಬೈನಲ್ಲಿ ರೂ.106.68, ಚೆನ್ನೈನಲ್ಲಿ ರೂ.103.67 ಹಾಗೂ ಬೆಂಗಳೂರಿನಲ್ಲಿ ರೂ.106.17 ಏರಿಕೆಯಾಗಿದೆ. ಹಾಗೆಯೇ ಡೀಸೆಲ್ ದರ ದೆಹಲಿಯಲ್ಲಿ ರೂ.90.67, ಕೋಲ್ಕತ್ತಾದಲ್ಲಿ ರೂ.95.13, ಮುಂಬೈನಲ್ಲಿ ರೂ.93.14, ಚೆನ್ನೈನಲ್ಲಿ ರೂ.95.25 ಹಾಗೂ ಬೆಂಗಳೂರಿನಲ್ಲಿ ರೂ.94.10ಕ್ಕೆ ಏರಿಕೆಯಾಗಿದೆ.

# ಚುನಾವಣಾ ಆಯೋಗಕ್ಕೆ ಸರ್ಕಾರದ ಮರ್ಜಿ ಬೇಡ: ಸುಪ್ರೀಂ ಕೋರ್ಟ್



■ ಚುನಾವಣಾ ಪ್ರಕ್ರಿಯೆಗಳು ಪಾರದರ್ಶಕ, ನಿಷ್ಪಕ್ಷಪಾತವಾಗಿರುವ ಜತೆಗೆ ಪ್ರಭಾವದಿಂದ ಮುಕ್ತವಾಗಿರಬೇಕು

**ನವದೆಹಲಿ, ಮೇ 15:** ಚುನಾವಣಾ ಆಯೋಗವು ಸಂಪೂರ್ಣವಾಗಿ ಸ್ವತಂತ್ರವಾಗಿರಬೇಕು. ಮುಕ್ತ ಮತ್ತು ನ್ಯಾಯಯುತ ಚುನಾವಣೆಗಳು ಭಾರತೀಯ ಸಂವಿಧಾನದ ಮೂಲಸಂರಚನೆಯ ಅವಿಭಾಜ್ಯ ಅಂಗವಾಗಿವೆ ಎಂದು ಸುಪ್ರೀಂ ಕೋರ್ಟ್ ಅತ್ಯಂತ ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿದೆ. ಪ್ರಜಾಪ್ರಭುತ್ವದ ಉಳಿವಿಗಾಗಿ ಚುನಾವಣಾ ಪ್ರಕ್ರಿಯೆಗಳು ಪಾರದರ್ಶಕ, ನಿಷ್ಪಕ್ಷಪಾತ ಹಾಗೂ ಯಾವುದೇ ಪ್ರಭಾವದಿಂದ ಮುಕ್ತವಾಗಿರಬೇಕಾದ ಅಗತ್ಯವನ್ನು ಸರ್ವೋಚ್ಚ ನ್ಯಾಯಾಲಯ ದೃಢವಾಗಿ ಪ್ರತಿಪಾದಿಸಿದೆ.

ಕೇಂದ್ರ ಸರ್ಕಾರ ಹೊಸದಾಗಿ ಜಾರಿಗೆ ತಂದಿರುವ ಮುಖ್ಯ ಚುನಾವಣಾ ಆಯುಕ್ತರು ಮತ್ತು ಇತರ ಚುನಾವಣಾ ಆಯುಕ್ತರ ನೇಮಕಾತಿ ಕಾಯ್ದೆ-2023ನ್ನು ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿಗಳ ವಿಚಾರಣೆ ವೇಳೆ ಸುಪ್ರೀಂ ಕೋರ್ಟ್ ಅಭಿಪ್ರಾಯ ವ್ಯಕ್ತಪಡಿಸಿದೆ ಪ್ರಜಾಪ್ರಭುತ್ವದಲ್ಲಿ ಜನತೆಯೇ ಪ್ರಭುಗಳು. ಅವರ ಮತದಾನದ ಹಕ್ಕನ್ನು ಚಲಾಯಿಸಲು ಮತ್ತು ತಮ್ಮ ನೈಜ ಪ್ರತಿನಿಧಿಗಳನ್ನು ಆಯ್ಕೆ ಮಾಡಲು ಮುಕ್ತ ವಾತಾವರಣ ಕಲ್ಪಿಸುವುದು ಅತ್ಯಗತ್ಯ. ಚುನಾವಣಾ ಆಯೋಗವು ಕಾರ್ಯಾಂಗದ (ಸರ್ಕಾರದ) ಯಾವುದೇ ಹಸ್ತಕ್ಷೇಪ ಅಥವಾ ಒತ್ತಡಕ್ಕೆ ಒಳಗಾಗದೆ, ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು. ಆಯೋಗದ ಸ್ವಾಯತ್ತೆಗೆ ಅಥವಾ ತಟಸ್ಥೆಗೆ ಧಕ್ಕೆಯಾದರೆ, ಅದು ಇಡೀ ಪ್ರಜಾಪ್ರಭುತ್ವ ವ್ಯವಸ್ಥೆಯ ಬುಡವನ್ನೇ ಅಲುಗಾಡಿಸುತ್ತದೆ ಮತ್ತು ಪ್ರಜೆಗಳು ವ್ಯವಸ್ಥೆಯ ಮೇಲಿಟ್ಟಿರುವ ನಂಬಿಕೆಯನ್ನು ಹುಸಿಗೊಳಿಸುತ್ತದೆ ಎಂದು ನ್ಯಾಯಾಲಯ ವಿವರಿಸಿದೆ.

ಭಾರತೀಯ ಸಂವಿಧಾನದ 324ನೇ ವಿಧಿಯು ಚುನಾವಣಾ ಆಯೋಗಕ್ಕೆ ದೇಶದಲ್ಲಿ ಚುನಾವಣೆಗಳನ್ನು ನಡೆಸುವ, ನಿಯಂತ್ರಿಸುವ ಮತ್ತು ನಿರ್ದೇಶಿಸುವ ವಿಶಾಲ ಹಾಗೂ ಮಹತ್ವದ ಅಧಿಕಾರವನ್ನು ನೀಡಿದೆ. ಈ ಅಧಿಕಾರದ ಹಿಂದಿನ ಮೂಲ ಉದ್ದೇಶವೇ ಆಯೋಗವು ಯಾವುದೇ ರಾಜಕೀಯ ಮರ್ಜಿಗೆ ಒಳಗಾಗದೆ, ಸ್ವತಂತ್ರವಾಗಿ ಕಾರ್ಯನಿರ್ವಹಿಸುವುದು. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ಎನ್ನುವುದು ಕೇವಲ ತೋರಿಕೆಯ ಪ್ರಕ್ರಿಯೆಯಲ್ಲ, ಅದು ಸಂವಿಧಾನದ ಮೂಲಸಂರಚನೆಯ ಒಂದು ಪ್ರಮುಖ ಭಾಗವಾಗಿದೆ. ಸರ್ಕಾರಗಳು ಇದನ್ನು ದುರ್ಬಲಗೊಳಿಸಲು ಸಾಧ್ಯವಿಲ್ಲ ಎಂದು ಪೀಠವು ಸ್ಪಷ್ಟ ಮಾತುಗಳಲ್ಲಿ ಉಲ್ಲೇಖಿಸಿದೆ.

ದೇಶದಲ್ಲಿ ಬಲಿಷ್ಠ ಪ್ರಜಾಪ್ರಭುತ್ವದ ನಿರ್ಮಾಣಕ್ಕೆ ದೃಢವಾದ ಮತ್ತು ರಾಜಿರಹಿತ ಚುನಾವಣಾ ಆಯೋಗದ ಅವಶ್ಯಕತೆ ಇದೆ. ಚುನಾವಣಾ ಪ್ರಕ್ರಿಯೆಯ ಪ್ರತಿಯೊಂದು ಹಂತದಲ್ಲೂ ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಆಡಳಿತಾರೂಢ ಸರ್ಕಾರದ ಪರವಾಗಿ ವಾಲುವುದಾಗಲೀ ಅಥವಾ ಯಾವುದೇ ರಾಜಕೀಯ ಪಕ್ಷಗಳ ಬಗ್ಗೆ ತಾರತಮ್ಯ ಮಾಡುವುದಾಗಲೀ ಸಾಂವಿಧಾನಿಕ ಸಂಸ್ಥೆಯಾದ ಚುನಾವಣಾ ಆಯೋಗದ ಘನತೆಗೆ ತಕ್ಕುದಲ್ಲ. ಆಯೋಗವು ಕೇವಲ ಸ್ವತಂತ್ರವಾಗಿರುವುದಷ್ಟೇ ಅಲ್ಲ, ಅದು ಸ್ವತಂತ್ರವಾಗಿ ಕಾರ್ಯನಿರ್ವಹಿಸುತ್ತಿದೆ ಎಂಬುದು ಜನರಿಗೂ ಮನವರಿಕೆಯಾಗಬೇಕು ಎಂದು ಎಚ್ಚರಿಸಿದೆ.

# ತೆರಿಗೆ ಮೂಲಕ ಪೆಟ್ರೋಲ್, ಡೀಸೆಲ್‌ನಿಂದ 43 ಲಕ್ಷ ಕೋಟಿ ರೂ. ಲೂಟಿ

**ಬೆಂಗಳೂರು, ಮೇ 15:** ಕಳೆದ 11 ವರ್ಷಗಳಲ್ಲಿ ಮೋದಿ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ತೆರಿಗೆ ವಿಧಿಸುವ ಮೂಲಕ 43 ಲಕ್ಷ ಕೋಟಿ ರೂ. ಸಂಗ್ರಹಿಸಿದೆ. ಇದು 2014ರಿಂದ ಪ್ರತಿದಿನ 1,000 ಕೋಟಿ ರೂ. ವಂಚಿಸುತ್ತಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಟೀಕಿಸಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕಳೆದ 11 ವರ್ಷಗಳಲ್ಲಿ ಮೋದಿ ಸರ್ಕಾರವು ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ನಡೆಸುತ್ತಿರುವ ತೆರಿಗೆ ಸುಲಿಗೆ ಈಗ ಬಹಿರಂಗಗೊಂಡಿದೆ. ಮೇ 26, 2014ರಂದು (ಕಾಂಗ್ರೆಸ್-ಯುಪಿಎ ಅವಧಿಯಲ್ಲಿ) ಪೆಟ್ರೋಲ್ ಬೆಲೆ ಪ್ರತಿ ಲೀಟರ್‌ಗೆ 71.41 ರೂ. ಮತ್ತು ಡೀಸೆಲ್ ಬೆಲೆ ಪ್ರತಿ ಲೀಟರ್‌ಗೆ 56.71 ರೂ. ಇತ್ತು. ಇಂದು, ಪೆಟ್ರೋಲ್ ಪ್ರತಿ ಲೀಟರ್‌ಗೆ 107 ರೂ. ಮತ್ತು ಡೀಸೆಲ್ ಪ್ರತಿ ಲೀಟರ್‌ಗೆ 94 ರೂ.ಗೆ ಮಾರಾಟವಾಗುತ್ತಿದೆ. 2014ರ ಕಚ್ಚಾ ತೈಲ ಬೆಲೆಗಳಿಗೆ ಬ್ಯಾರೆಲ್‌ಗೆ 108 ಡಾಲರ್‌ಗೆ ಹೋಲಿಸಿದರೆ, ಪಶ್ಚಿಮ ಏಷ್ಯಾದ ಯುದ್ಧದ ಮೊದಲಿನ ಬೆಲೆಗಳ ಪ್ರಕಾರ ಬ್ಯಾರೆಲ್‌ಗೆ 70 ಡಾಲರ್, ಪೆಟ್ರೋಲ್ ಬೆಲೆ 61.60 ರೂ. ಮತ್ತು ಡೀಸೆಲ್ ಬೆಲೆ 56.99 ರೂ. ಇರಬೇಕಿತ್ತು. ಉಳಿದದ್ದೆಲ್ಲವೂ ಬಿಜೆಪಿಯ ಲೂಟಿ ಎಂದರು. ಇಂದು ಸಿಎನ್‌ಜಿ ಬೆಲೆಯನ್ನು ಸಹ ಕೆಜಿಗೆ 2 ರೂ. ಹೆಚ್ಚಿಸಲಾಗಿದ್ದು, ಅದು 90.00 ರೂ. ತಲುಪಿದೆ. 2014ರಿಂದ 2025 ರವರೆಗೆ, ಮೋದಿ ಸರ್ಕಾರವು ಪೆಟ್ರೋಲ್ ಮೇಲೆ ಸರಾಸರಿ 21.60 ರೂ. ಮತ್ತು ಡೀಸೆಲ್ ಮೇಲೆ 12.80 ರೂ. ಅಬಕಾರಿ ಸುಂಕವನ್ನು ವಿಧಿಸಿದೆ. ಇದು ಸಾಮಾನ್ಯ ಭಾರತೀಯರು ಪೆಟ್ರೋಲ್ ಬೆಲೆಯ 23.3% ಮತ್ತು ಡೀಸೆಲ್ ಬೆಲೆಯ 21.4% ರಷ್ಟಿದೆ. ಮೋದಿ ಸರ್ಕಾರದ ಬೊಕ್ಕಸಕ್ಕೆ ನೀಡುವಂತೆ ಮಾಡಿದೆ, ಅಂದರೆ ಅಗತ್ಯ ಇಂಧನವನ್ನು ಲಾಭ ಗಳಿಸುವ ಸಾಧನವಾಗಿ ಪರಿವರ್ತಿಸಲಾಗಿದೆ. ಅಬಕಾರಿ ಸುಂಕವನ್ನು 21 ಬಾರಿ



**ಮೋದಿ ಸರ್ಕಾರದಿಂದ ಪ್ರತಿದಿನ ಒಂದು ಸಾವಿರ ಕೋಟಿ ವಂಚನೆ: ರಣದೀಪ್‌ಸಿಂಗ್ ಸುರ್ಜೇವಾಲಾ**

ಪರಿಷ್ಕರಿಸಿದ್ದು, ಅದರಲ್ಲಿ 12 ಬಾರಿ ಹೆಚ್ಚಳ ಮಾಡಲಾಗಿದೆ. ಇದು "ಬೆಲೆ ಇಳಿಕೆ" ಮಾಡುವ ನೆಪದಲ್ಲಿ ಸಾಮಾನ್ಯ ಜನರಿಂದ ಹಣವನ್ನು ಕಬಳಿಸುವ ಮಾದರಿಯನ್ನು ಪ್ರತಿಬಿಂಬಿಸುತ್ತದೆ ಎಂದಿದ್ದಾರೆ. ಮಾರ್ಚ್ 27 ರಂದು, ಮೋದಿ ಸರ್ಕಾರವು ಪೆಟ್ರೋಲ್ ಮೇಲಿನ ಅಬಕಾರಿ ಸುಂಕವನ್ನು 13 ರೂ. ನಿಂದ 10 ರೂ.ಗೆ ಮತ್ತು ಡೀಸೆಲ್ ಮೇಲಿನ ಸುಂಕವನ್ನು 10 ರಿಂದ 0ಕ್ಕೆ ಇಳಿಸುವುದಾಗಿ ಘೋಷಿಸಿತು. ಇದು ತೈಲ ಕಂಪನಿಗಳಿಗೆ ಲಾಭ ಮಾಡಿಕೊಡುವ ಕೈಚಳಕವೇ ಹೊರತು ಬೇರೇನಲ್ಲ. ಸಾಮಾನ್ಯ ಜನರಿಗೆ ಇದರಿಂದ ಒಂದು ರೂಪಾಯಿ ಲಾಭವೂ ಸಿಗಲಿಲ್ಲ. ಈ ಪ್ರಯೋಜನದ ಸುಮಾರು 20%ರಷ್ಟು ಎರಡು ಖಾಸಗಿ ತೈಲ ಕಂಪನಿಗಳಾದ ನಯಾರಾ ಎನರ್ಜಿ ಮತ್ತು ರಿಲಯನ್ಸ್‌ಗೆ ವರ್ಗಾಯಿಸಲ್ಪಟ್ಟಿದೆ.

ಪ್ರತಿ ಬಾರಿ ಚುನಾವಣೆಗಳು ಮುಗಿದ ತಕ್ಷಣ ಪೆಟ್ರೋಲ್-ಡೀಸೆಲ್-ಅಡುಗೆ ಅನಿಲ ಬೆಲೆಗಳನ್ನು ಏರಿಸುವುದು ಬಿಜೆಪಿ ಸರ್ಕಾರದ ಕುತಂತ್ರದ ಯೋಜನೆಯಾಗಿದೆ. 2014 ರ ಸಾರ್ವತ್ರಿಕ ಚುನಾವಣೆ ಮತ್ತು 2015 ರ ದೆಹಲಿ ವಿಧಾನಸಭಾ ಚುನಾವಣೆ ಮುಗಿದ ನಂತರ ಬೆಲೆ ಏರಿಸಿತು. 2019 ರ ಸಾರ್ವತ್ರಿಕ ಚುನಾವಣೆ ಮುಗಿದ ಮರುದಿನವೇ ಬೆಲೆ ಏರಿಕೆ ಮಾಡಲಾಯಿತು. 2022 ರಲ್ಲಿ ಉತ್ತರ ಪ್ರದೇಶದ ಚುನಾವಣೆ ಮುಗಿದ ನಂತರ ಕೇವಲ 16 ದಿನಗಳಲ್ಲಿ 14 ಬಾರಿ ಬೆಲೆ ಏರಿಸಲಾಯಿತು. ಈಗ ಮತ್ತೆ ಚುನಾವಣೆಗಳು ಮುಗಿದ ಬೆನ್ನಲ್ಲೇ, ಮೇ 15 ರಂದು ಪೆಟ್ರೋಲ್, ಡೀಸೆಲ್ ಮತ್ತು ಸಿಎನ್‌ಜಿ ಬೆಲೆಗಳನ್ನು ಹೆಚ್ಚಿಸಲಾಗಿದೆ ಎಂದು ಟೀಕಿಸಿದ್ದಾರೆ

### ಎಲ್‌ಪಿಜಿ ಬೆಲೆಯೂ ಏರಿಕೆ

ಎಲ್‌ಪಿಜಿ ಸಿಲಿಂಡರ್ ಬೆಲೆ ಮೇ 2014 ರಲ್ಲಿ (ಯುಪಿಎ ಆಡಳಿತದಲ್ಲಿ) 414 ರೂ. ಇದ್ದದ್ದು, ಮಾರ್ಚ್ 2026 ರಲ್ಲಿ (ಎನ್‌ಡಿಎ ಅಡಿಯಲ್ಲಿ) 915.5 ರೂ.ಗೆ ಏರಿದೆ. ಅಂದರೆ ಕಳೆದ 12 ವರ್ಷಗಳಲ್ಲಿ 501.5 ರೂ. (121.6%) ಹೆಚ್ಚಳವಾಗಿದೆ. ಅಂತಾರಾಷ್ಟ್ರೀಯ ಎಲ್‌ಪಿಜಿ ಬೆಲೆ 2013-14 ರಲ್ಲಿ ಸುಮಾರು 880.5 ಡಾಲರ್ ಇದ್ದರೆ, ಮಾರ್ಚ್ 2026 ರಲ್ಲಿ ಅದು 542.5 ಯುಎಸ್ ಡಾಲರ್‌ಗೆ ಕುಸಿದಿದೆ. ಅಂದರೆ ಬೆಲೆ 38.5%ರಷ್ಟು ಕಡಿಮೆಯಾಗಿದ್ದರೂ ಭಾರತದಲ್ಲಿ ಮಾತ್ರ ಬೆಲೆ ಗಗನಕ್ಕೇರಿದೆ. 2014ರಲ್ಲಿ 1241 ರೂ. ಇದ್ದ ವಾಣಿಜ್ಯ ಎಲ್‌ಪಿಜಿ (19 ಕೆಜಿ) ಬೆಲೆ ಈಗ 2026 ರಲ್ಲಿ 3152 ರೂ. ಆಗಿದೆ. ಅಂದರೆ 1911 ರೂ.ನಷ್ಟು ಭಾರಿ ಏರಿಕೆ ಕಂಡಿದೆ. ಬೆಂಗಳೂರಿನಲ್ಲಿ 5 ಕೆಜಿ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ಮೇ 1, 2026 ರಿಂದ ಜಾರಿಗೆ ಬರುವಂತೆ 21.50 ರೂ. ಹೆಚ್ಚಿಸಲಾಗಿದ್ದು, ಅದು 318.50 ರಿಂದ 340 ರೂ.ಗಳಿಗೆ ಏರಿದೆ ಎಂದು ಸುರ್ಜೇವಾಲಾ ಹೇಳಿದ್ದಾರೆ.

# ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ ದರ್ಶನ್‌ಗೆ ಜಾಮೀನು ನೀಡಲು ಸುಪ್ರೀಂ ನಕಾರ



**ನವದೆಹಲಿ, ಮೇ 15:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್‌ಗೆ ಸುಪ್ರೀಂಕೋರ್ಟ್ ಜಾಮೀನು ನಿರಾಕರಿಸಿದೆ. ದರ್ಶನ್ ಜಾಮೀನು ಅರ್ಜಿ ವಿಚಾರಣೆ ನಡೆಸಿದ ನ್ಯಾ. ಪರ್ದಿವಾಲ ನೇತೃತ್ವದ ದ್ವಿಸದಸ್ಯ ಪೀಠ ಜಾಮೀನು ನೀಡಲು ನಿರಾಕರಿಸಿದ್ದು ವರ್ಷದೊಳಗೆ ವಿಚಾರಣೆ ಪೂರ್ಣಗೊಳಿಸಲು ನಿರ್ದೇಶನ ನೀಡಿದೆ.

ಜೈಲಿನಲ್ಲಿ ಉತ್ತಮ ವ್ಯವಸ್ಥೆಗಳಿಲ್ಲ, ಅಗತ್ಯ ಸೌಕರ್ಯಗಳನ್ನು ನೀಡುತ್ತಿಲ್ಲ, ವಿಚಾರಣೆ ವಿಳಂಬವಾಗುತ್ತಿದ್ದು ಎಂಟು ತಿಂಗಳಲ್ಲಿ ಹತ್ತು ಸಾಕ್ಷಿಗಳ ವಿಚಾರಣೆ ಮಾತ್ರವಾಗಿವೆ ಈ ಹಿನ್ನೆಲೆ ಜಾಮೀನು ನೀಡಬೇಕು ಎಂದು ಮನವಿ ಮಾಡಿದ್ದರು. ರಾಜ್ಯ ಸರ್ಕಾರ ಅಗತ್ಯ ವ್ಯವಸ್ಥೆ ನೀಡಿದೆ, ಟ್ರಯಲ್ ನಡೆಯುತ್ತಿದ್ದು ವಾರಕ್ಕೆ ಎರಡು ಬಾರಿ ನಿಯಮಿತವಾಗಿ ವಿಚಾರಣೆ ನಡೆಸಲಾಗುತ್ತಿದೆ ಎಂದು ವಿವರಿಸಿದರು. ವಿಚಾರಣೆ ಬಳಿಕ ದರ್ಶನ ಪ್ರಭಾವಿ ವ್ಯಕ್ತಿಯಾದ ಹಿನ್ನಲೆ ಸಾಕ್ಷ್ಯಗಳ ಹಿತ ಮತ್ತು ರಕ್ಷಣೆಯನ್ನು ಕಾಯ್ದುಕೊಳ್ಳಲು ಕೋರ್ಟ್ ಜಾಮೀನು ನಿರಾಕರಿಸಿತು. ಸಾಕ್ಷ್ಯಗಳ ವಿಚಾರಣೆಯನ್ನು ವೇಗಗೊಳಿಸಲು ಸೂಚಿಸಿದ ಕೋರ್ಟ್ ಒಂದು ವರ್ಷದೊಳಗೆ ವಿಚಾರಣೆ ಪೂರ್ಣಗೊಳಿಸಬೇಕು, ಒಂದು ವರ್ಷದಲ್ಲಿ ವಿಚಾರಣೆ ಅಂತ್ಯವಾಗದಿದ್ದರೆ ಜಾಮೀನಿಗೆ ಅರ್ಜಿ ಸಲ್ಲಿಸಬಹುದು ಎಂದು ಹೇಳಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ 262 ಸಾಕ್ಷಿಗಳಿದೆ ಅದರಲ್ಲಿ ಕೇವಲ ಹತ್ತು ಸಾಕ್ಷಿಗಳ ವಿಚಾರಣೆ ಮಾತ್ರ ಆಗಿದೆ ವಿಚಾರಣಾಧೀನ ನ್ಯಾಯಲಯದಲ್ಲಿ ನಿಧಾನವಾಗಿ ವಿಚಾರಣೆ ನಡೆಯುತ್ತಿದೆ, ಜೈಲಿನಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ನೀಡುತ್ತಿಲ್ಲ, ಕ್ವಾರಂಟೈನ್ ಸೆಲ್‌ನಲ್ಲಿ ಇಟ್ಟಿದ್ದಾರೆ ಎಂದು ದರ್ಶನ ಪರ ಹಿರಿಯ ವಕೀಲ ಮುಕುಲ್ ರೊಹ್ತಗಿ ವಾದ ಮಂಡಿಸಿದರು.

ಒಂಭತ್ತು ತಿಂಗಳಿಂದ ಜೈಲಿನಲ್ಲಿದ್ದೇನೆ ಐವತ್ತು ಭಾರಿ ಭೇಟಿಗೆ ಅನುಮತಿ ನೀಡಿದ್ದಾರೆ ಎಂದು ದರ್ಶನ ಪರ ವಕೀಲರು ಹೇಳಿದರು. ಇದಕ್ಕೆ ಉತ್ತರಿಸಿದ ಪೀಠ ಐವತ್ತು ಸಲ ಹೆಚ್ಚೇ ಆಯ್ತಲ್ವ ಎಂದರು, ಅಲ್ಲದೇ ಜಾಮೀನಿಗೆ ಇನ್ನಷ್ಟು ದಿನ ಕಾಯಬಹುದಲ್ವ ಎಂದಿತು.

ಒಂದು ವರ್ಷದಲ್ಲಿ ವಿಚಾರಣೆ ಮುಗಿಯದಿದ್ದರೆ ಜಾಮೀನಿಗೆ ಅರ್ಜಿ ಸಲ್ಲಿಸಿ, ಮೇಲ್ನೋಟಕ್ಕೆ ವಿಚಾರಣೆ ವಿಳಂಬ ಅನಿಸಿದೆ, ಆದರೆ ಸರ್ಕಾರದ ಮಾಹಿತಿ ಪ್ರಕಾರ ಎಲ್ಲ ಸೌಲಭ್ಯ ನೀಡಿದ್ದಾರೆ, ಜೈಲು ನಿಯಮದಂತೆ ಸೌಲಭ್ಯ ನೀಡಲು ಸೂಚಿಸುತ್ತಿದ್ದೇನೆ, ಜಾಮೀನು ನೀಡುವುದಿಲ್ಲ ಎಂದು ಕೋರ್ಟ್ ಆದೇಶ ನೀಡಿತು.

# ಜೂ.21ಕ್ಕೆ ನೀಟ್-ಯುಜಿ ಮರುಪರೀಕ್ಷೆ



■ ಮುಂದಿನ ವರ್ಷದಿಂದ ಕಂಪ್ಯೂಟರ್ ಆಧಾರಿತ (ಸಿಬಿಟಿ) ಪರೀಕ್ಷೆ: ಧರ್ಮೇಂದ್ರ ಪ್ರಧಾನ್

**ನವದೆಹಲಿ, ಮೇ 15:** ನೀಟ್-ಯುಜಿ 2026 ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಬೆನ್ನಲ್ಲೇ ರದ್ದುಗೊಂಡಿದ್ದ ಮೇ 3ರಂದು ನಡೆದಿದ್ದ ಪರೀಕ್ಷೆಯನ್ನು ಜೂನ್ 21ರಂದು ಮತ್ತೆ ನಡೆಸಲು ದಿನಾಂಕ ನಿಗದಿಯಾಗಿದೆ. ಪರೀಕ್ಷೆಯನ್ನು ನ್ಯಾಯಯುತ ಮತ್ತು ದೋಷವಿಲ್ಲದಂತೆ ನಡೆಸಲು ಸರ್ಕಾರವು ಹಲವು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ನೀಟ್-ಯುಜಿ 2026 ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಬೆನ್ನಲ್ಲೇ, ಶಿಕ್ಷಣ ಸಚಿವರ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆಸಲಾಗಿತ್ತು. ಅದರ ನಂತರ ನಡೆದ ಸುದ್ದಿಗೋಷ್ಠಿಯಲ್ಲಿ ಧರ್ಮೇಂದ್ರ ಪ್ರಧಾನ್ ಮಾತನಾಡಿ ತೆಗೆದುಕೊಂಡ ಕ್ರಮಗಳ ಬಗ್ಗೆ ವಿವರಿಸಿದರು. ಪ್ರಶ್ನೆಪತ್ರಿಕೆ ಲೀಕ್ ತಡೆಯಲು ಮುಂದಿನ ವರ್ಷದಿಂದ ಕಂಪ್ಯೂಟರ್ ಆಧಾರಿತ ಪರೀಕ್ಷೆ ಅಂದರೆ ಸಿಬಿಟಿ ಮಾದರಿಯಲ್ಲಿ ನೀಟ್ ಪರೀಕ್ಷೆ ನಡೆಸಲಾಗುವುದು ಎಂದು ಧಮೇಂದ್ರ ಪ್ರಧಾನ್ ತಿಳಿಸಿದ್ದಾರೆ.

**ಏನಿದು ಸಿಬಿಟಿ ಪರೀಕ್ಷೆ?:** ಅಭ್ಯರ್ಥಿಗೆ ಕಂಪ್ಯೂಟರ್ ಅಥವಾ ಲ್ಯಾಪ್‌ಟಾಪ್ ನೀಡಲಾಗುತ್ತದೆ. ಪ್ರಶ್ನೆಗಳು ಪರದೆಯಲ್ಲಿ ಕಾಣಿಸುತ್ತವೆ. ಉತ್ತರಗಳನ್ನು ಮೌಸ್ ಅಥವಾ ಕೀಬೋರ್ಡ್ ಮೂಲಕ ಆಯ್ಕೆ ಮಾಡಬೇಕು. ಬಹು ಆಯ್ಕೆ ಪ್ರಶ್ನೆಗಳು (MCQ) ಹೆಚ್ಚು ಇರುತ್ತವೆ. ಸಮಯ ಮುಗಿದ ಕೂಡಲೇ ಪರೀಕ್ಷೆ ಸ್ವಯಂ ಸಲ್ಲಿಕೆಯಾಗುತ್ತದೆ. ಇದರಿಂದ ವೇಗವಾಗಿ ಫಲಿತಾಂಶ ಪ್ರಕಟಿಸಲು ಸಹಾಯಕ, ಪ್ರಶ್ನೆಪತ್ರಿಕೆ ಸೋರಿಕೆ ಸಾಧ್ಯತೆ ಕಡಿಮೆ. ಎಲ್ಲಾ ಅಭ್ಯರ್ಥಿಗಳಿಗೆ ಒಂದೇ ರೀತಿ ವ್ಯವಸ್ಥೆ, ಪರೀಕ್ಷಾ ಕೇಂದ್ರಗಳಲ್ಲಿ ಆನ್‌ಲೈನ್ ಅಥವಾ ಸುರಕ್ಷಿತ ಸಾಫ್ಟ್‌ವೇರ್ ಮೂಲಕ ನಡೆಸಲಾಗುತ್ತದೆ. ಈಗಾಗಲೇ ಬ್ಯಾಂಕ್ ಪರೀಕ್ಷೆಗಳು, SSC ಪರೀಕ್ಷೆಗಳು, ರೈಲ್ವೆ ನೇಮಕಾತಿ ಪರೀಕ್ಷೆಗಳು ಇದೇ ಮಾದರಿಯಲ್ಲಿ ನಡೆಯುತ್ತಿವೆ.

# ಬೆಲೆ ಏರಿಕೆಯಿಂದ ಜನಸಾಮಾನ್ಯರ ಬದುಕು ಅಸ್ತವ್ಯಸ್ತ: ಸಿದ್ದರಾಮಯ್ಯ



■ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಗೆ ಖಂಡನೆ, ನಿರ್ಧಾರ ಹಿಂಪಡೆಯುವಂತೆ ಆಗ್ರಹ

**ಬೆಂಗಳೂರು, ಮೇ 15:** ಕೇಂದ್ರ ಸರ್ಕಾರ ಪೆಟ್ರೋಲ್ ಡೀಸೆಲ್ ಬೆಲೆ ಏರಿಸಿರುವುದನ್ನು ರಾಜ್ಯ ಸರ್ಕಾರ ಖಂಡಿಸಿ, ಬೆಲೆ ಏರಿಕೆಯನ್ನು ಹಿಂಪಡೆಯಲು ಒತ್ತಾಯಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳ ನಂತರ ನಿರೀಕ್ಷಿಸದಂತೆಯೇ ಕೇಂದ್ರ ಸರ್ಕಾರ ಪೆಟ್ರೋಲ್ ಡೀಸೆಲ್ ದರ ಏರಿಕೆ ಮಾಡಿದೆ. ಆದರೆ ಇತರ ರಾಜ್ಯಗಳಿಗಿಂತ ಕರ್ನಾಟಕದಲ್ಲಿ ಗಣನೀಯವಾಗಿ ಕಡಿಮೆಯಿರುವ ಪೆಟ್ರೋಲ್ ಬೆಲೆಯನ್ನು ಹೆಚ್ಚಿಸಿದ್ದರ ಬಗ್ಗೆ ಬಿಜೆಪಿಯವರು ಟೀಕೆ ಮಾಡಿದ್ದರು. ನರೇಂದ್ರ ಮೋದಿಯವರು ದೇಶದ ಪ್ರಧಾನಿಯಾದ ನಂತರ ಹಲವು ಬಾರಿ ಪೆಟ್ರೋಲ್ ಡೀಸೆಲ್ ದರಗಳನ್ನು ಹೆಚ್ಚಿಸಿದ್ದಾರೆ. ಈ ಬೆಲೆಏರಿಕೆ ಜನಸಾಮಾನ್ಯರ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದ್ದು, ವಿಶೇಷವಾಗಿ ಕಾರ್ಮಿಕರು, ರೈತರು, ಬಡವರ ಮೇಲೆ ಹೆಚ್ಚಿನ ಪರಿಣಾಮ ಬೀರಲಿದೆ. ಕೇಂದ್ರ ಸರ್ಕಾರದ ಈ ಬೆಲೆಏರಿಕೆಯ ಕ್ರಮವನ್ನು ರಾಜ್ಯ ಸರ್ಕಾರ ಖಂಡಿಸುವುದಲ್ಲದೇ, ಈ ನಿರ್ಣಯವನ್ನು ಹಿಂದಕ್ಕೆ ಪಡೆಯಬೇಕೆಂದು ಒತ್ತಾಯಿಸುತ್ತೇವೆ. ಈ ಬೆಲೆಏರಿಕೆ ದಿನ ಬಳಕೆ ವಸ್ತುಗಳ ಬೆಲೆ ಹೆಚ್ಚಳಕ್ಕೂ ಕಾರಣವಾಗಲಿದೆ ಎಂದರು. **ಎಸ್‌ಐಆರ್ ಪ್ರಕ್ರಿಯೆ:** ಕರ್ನಾಟಕದಲ್ಲಿ ಎಸ್‌ಐಆರ್ ಪ್ರಕ್ರಿಯೆ ಪ್ರಾರಂಭವಾಗಲಿರುವ ಬಗ್ಗೆ ಮಾತನಾಡಿ, ರಾಜ್ಯದಲ್ಲಿ ಚುನಾವಣಾ ಆಯೋಗದಿಂದ ಎಸ್‌ಐಆರ್ ಪ್ರಕ್ರಿಯೆಯು ಪ್ರಾರಂಭವಾಗಿದ್ದು, ಇದಕ್ಕೆ ಬೇಕಾದ ಸಿದ್ದತೆಯನ್ನು ಸರ್ಕಾರ ಮಾಡಿಕೊಳ್ಳುತ್ತಿದೆ ಎಂದರು.

# ಯುಎಇ ಜತೆ ದ್ವಿಪಕ್ಷೀಯ ಸಂಬಂಧ ವೃದ್ಧಿಗೆ ಉತ್ಸುಕನಾಗಿದ್ದೇನೆ: ಪ್ರಧಾನಿ ನರೇಂದ್ರ ಮೋದಿ

**ಅಬುಧಾಬಿ/ನವದೆಹಲಿ, ಮೇ 15:** ನನ್ನ ಸಹೋದರ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರು ನನ್ನನ್ನು ಅಬುಧಾಬಿ ವಿಮಾನ ನಿಲ್ದಾಣದಲ್ಲಿ ಆತ್ಮೀಯವಾಗಿ ಸ್ವಾಗತಿಸಿದ್ದಕ್ಕೆ ಧನ್ಯವಾದಗಳು. ಇಂಧನ, ಹೂಡಿಕೆ ಮತ್ತು ಪೂರೈಕೆ ಸರಪಳಿಯಂತಹ ಪ್ರಮುಖ ಕ್ಷೇತ್ರಗಳಲ್ಲಿ ಭಾರತ-ಯುಎಇ ಸಂಬಂಧಗಳನ್ನು ಮತ್ತಷ್ಟು ವೃದ್ಧಿಸುವ ಬಗ್ಗೆ ಚರ್ಚಿಸಲು ಉತ್ಸುಕನಾಗಿದ್ದೇನೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದರು.

ವಿವಿಧ ದೇಶಗಳಿಗೆ ಪ್ರವಾಸ ಕೈಗೊಂಡಿರುವ ಅವರು ಶುಕ್ರವಾರದಂದು ಯುಎಇಗೆ ಬಂದಿಳಿದ ನಂತರ ಮಾತನಾಡಿ, ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಅಸ್ಥಿರತೆ ಇರುವ ಈ ಸಮಯದಲ್ಲಿ ಯುಎಇ ಜತೆಗಿನ ಒಪ್ಪಂದಗಳು ಭಾರತಕ್ಕೆ ಹೈಡ್ರೋಕಾರ್ಬನ್ ಪೂರೈಕೆಯಲ್ಲಿ ಸ್ಥಿರತೆಯನ್ನು ನೀಡಲಿವೆ. ವಿಶ್ವದ ಮೂರನೇ ಅತಿದೊಡ್ಡ ಇಂಧನ ಗ್ರಾಹಕ ರಾಷ್ಟ್ರವಾದ ಭಾರತಕ್ಕೆ, ಯುಎಇ ಈಗ ಕಚ್ಚಾ ತೈಲ ಮತ್ತು ನೈಸರ್ಗಿಕ ಅನಿಲದ ಅತ್ಯಂತ ವಿಶ್ವಾಸಾರ್ಹ ಪೂರೈಕೆದಾರರಲ್ಲಿ ಒಂದಾಗಿ ಹೊರಹೊಮ್ಮಿದೆ ಎಂದು ತಿಳಿಸಿದರು.



### ಇಂಧನ ಭದ್ರತೆ, ರಕ್ಷಣೆ, ವ್ಯಾಪಾರ, ತಂತ್ರಜ್ಞಾನ ಸೇರಿ ಹಲವಾರು ಒಪ್ಪಂದಗಳಿಗೆ ಸಹಿ

ಇಂಧನ ಭದ್ರತೆ, ರಕ್ಷಣೆ, ವ್ಯಾಪಾರ, ತಂತ್ರಜ್ಞಾನ ಮತ್ತು ಪೂರೈಕೆ ಸರಪಳಿಗಳಲ್ಲಿ ಸಹಕಾರವನ್ನು ವೃದ್ಧಿಸುವ ಗುರಿಯೊಂದಿಗೆ ಹಲವಾರ ದ್ವಿಪಕ್ಷೀಯ ಒಪ್ಪಂದಗಳಿಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಯುನೈಟೆಡ್ ಅರಬ್ ಎಮಿರೆಟ್ಸ್ (ಯುಎಇ) ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದದ ಅಲ್ ನಹ್ಯಾನ್ ಶುಕ್ರವಾರ ಸಾಕ್ಷಿಯಾದರು.

**ಒಪ್ಪಂದದ ಪ್ರಮುಖ ಅಂಶಗಳು ಈ ಕೆಳಕಂಡತಿವೆ.** ಪೆಟ್ರೋಲಿಯಂ ಮೀಸಲು, ದೀರ್ಘಕಾಲೀನ ಎಲ್‌ಪಿಜಿ ಪೂರೈಕೆ, ಗುಜರಾತ್‌ನ ವಾದಿನಾರ್‌ನಲ್ಲಿ ಹಡಗು ದುರಸ್ತಿ ಕ್ಲಸ್ಟರ್ ಸ್ಥಾಪನೆ, ಕೃಷಿ ಸಂಶೋಧನೆ, ಎಂಎಸ್‌ಎಂಇ ಕ್ಷೇತ್ರಕ್ಕೆ ಉತ್ತೇಜನ ಮತ್ತು ಡಿಜಿಟಲ್ ಪಾವತಿಗಳ ಏಕೀಕರಣದ ಕ್ಷೇತ್ರಗಳಲ್ಲಿಯೂ ಒಪ್ಪಂದಗಳಾಗಿವೆ. ಆರ್ಥಿಕ ಉತ್ತೇಜನದ ಭಾಗವಾಗಿ ಮೂಲಸೌಕರ್ಯ ಯೋಜನೆಗಳು, ಆರ್‌ಬಿಎಲ್ (ಖಃಐ) ಬ್ಯಾಂಕ್ ಮತ್ತು ಸಮ್ಮಾನ್ ಕ್ಯಾಪಿಟಲ್‌ನಲ್ಲಿ 5 ಬಿಲಿಯನ್ ಯುಎಸ್ ಡಾಲರ್ ಹೂಡಿಕೆಯ ಬದ್ಧತೆಯನ್ನು ಘೋಷಿಸಲಾಗಿದೆ.

ಎರಡೂ ದೇಶಗಳು ಮುಂದಿನ ಆರು ವರ್ಷಗಳಲ್ಲಿ ದ್ವಿಪಕ್ಷೀಯ ವ್ಯಾಪಾರವನ್ನು 200 ಬಿಲಿಯನ್ ಯುಎಸ್ ಡಾಲರ್‌ಗೆ ದ್ವಿಗುಣಗೊಳಿಸಲು ನಿರ್ಧರಿಸಿವೆ. ಪ್ರಸ್ತುತ ಯುಎಇ ಭಾರತದ ಮೂರನೇ ಅತಿದೊಡ್ಡ ವ್ಯಾಪಾರ ಪಾಲುದಾರ ರಾಷ್ಟ್ರವಾಗಿದೆ. 2022ರಲ್ಲಿ ಜಾರಿಗೆ ಬಂದ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದವು ವ್ಯಾಪಾರ ಮತ್ತು ಮಾರುಕಟ್ಟೆ ಪ್ರವೇಶವನ್ನು ಸುಲಭಗೊಳಿಸಿದೆ. ರಕ್ಷಣಾ ಸಹಕಾರ, ಕೃತಕ ಬುದ್ಧಿಮತ್ತೆ, ಆಹಾರ ಭದ್ರತೆ ಮತ್ತು ನವೀಕರಿಸಬಹುದಾದ ಇಂಧನ ಕ್ಷೇತ್ರಗಳಲ್ಲಿಯೂ ಎರಡೂ ದೇಶಗಳ ಸಂಬಂಧ ವಿಸ್ತರಿಸುತ್ತಿದೆ. ಪಶ್ಚಿಮ ಏಷ್ಯಾ, ಆಫ್ರಿಕಾ ಮತ್ತು ಯುರೋಪ್‌ಗೆ ಭಾರತದ ವ್ಯಾಪಾರ ಮತ್ತು ಹೂಡಿಕೆಗೆ ಯುಎಇ ಈಗ ಒಂದು ಪ್ರಮುಖ ಗೇಟ್‌ವೇ ಆಗಿ ಕಾರ್ಯನಿರ್ವಹಿಸುತ್ತಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಗ್ರೇಟರ್ ಬೆಂಗಳೂರು ಪ್ರಾಧಿಕಾರ

## ಬೆಂಗಳೂರು ನಗರ ಪಾಲಿಕೆಗಳು

• ಉತ್ತರ • ದಕ್ಷಿಣ • ಪೂರ್ವ • ಪಶ್ಚಿಮ • ಕೇಂದ್ರ



**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು
ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರು
ಕರ್ನಾಟಕ ಸರ್ಕಾರ

# ನನ್ನ ಇ-ಖಾತಾ ನನ್ನ ಹಕ್ಕು

**ಅಭಿಯಾನ** 16ನೇ ಮೇ, 2026 ರಿಂದ

## ಬೆಂಗಳೂರು ನಗರದ ಭೂಮಾಲೀಕರ ಹಿತಕ್ಕಾಗಿ
## ಸರ್ಕಾರದ 6ನೇ ಗ್ಯಾರಂಟಿ - "ಭೂ ಗ್ಯಾರಂಟಿ" ಯೋಜನೆ

## 'ಬಿ' ಖಾತಾದಿಂದ 'ಎ' ಖಾತಾ ಪರಿವರ್ತನೆ ಅಭಿಯಾನ

( ಪ್ರತಿ ಶನಿವಾರ ಬೆಂಗಳೂರಿನ ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ತಲಾ 10 ರಂತೆ 50 ಸ್ಥಳಗಳಲ್ಲಿ )

ಮಾರ್ಗಸೂಚಿ ಬೆಲೆ **5%** ಬದಲಿಗೆ ಈಗ **2%** ಮಾತ್ರ ಪಾವತಿಸಿ.

ಈ ಅವಕಾಶ **ಕೇವಲ 100 ದಿನಗಳು ಮಾತ್ರ,** ಸದುಪಯೋಗಪಡಿಸಿಕೊಳ್ಳಿ.


ನಿಮ್ಮ 'ಬಿ' ಖಾತೆಯನ್ನು **'ಎ' ಖಾತೆಯಾಗಿ** ಪರಿವರ್ತಿಸಿಕೊಳ್ಳಿ.

ಬೆಂಗಳೂರು ನಗರವು ವಿಶ್ವಮಟ್ಟದಲ್ಲಿ ಪ್ರಖ್ಯಾತಿ ಪಡೆದಿದ್ದರೂ ನಾಗರಿಕರ ಆಸ್ತಿ ದಾಖಲೆಗಳ ನಿರ್ವಹಣೆ ಕಾಗದ ಪತ್ರಗಳ ಮೂಲಕವೇ ನಡೆಯುತ್ತಿತ್ತು. ಜೊತೆಗೆ ನಕಲಿ ದಾಖಲೆಗಳ ಸೃಷ್ಟಿ, ವಂಚನೆ ಯಥೇಚ್ಛವಾಗಿ ನಡೆಯುತ್ತಿತ್ತು. ಇದನ್ನು ಮನಗಂಡು ನಿಮ್ಮ ಆಸ್ತಿ ದಾಖಲೆಗಳನ್ನು ಡಿಜಿಟಲೀಕರಣ ಮಾಡಿ, ಉಚಿತವಾಗಿ ನಿಮ್ಮ ಮನೆ ಬಾಗಿಲಿಗೆ ತಲುಪಿಸುವುದಾಗಿ ಹಾಗೂ ಆ ಮೂಲಕ ವಂಚನೆ ತಪ್ಪಿಸುವುದಾಗಿ ಭರವಸೆ ನೀಡಲಾಗಿತ್ತು.

ಬೆಂಗಳೂರಿನಲ್ಲಿದ್ದ 23 ಲಕ್ಷಕ್ಕೂ ಅಧಿಕ ಆಸ್ತಿ ದಾಖಲೆಗಳನ್ನು ಸ್ಕ್ಯಾನ್ ಹಾಗೂ ಡಿಜಿಟಲೀಕರಣ ಮಾಡಲಾಗಿದೆ. ಅವುಗಳಿಗೆ ಇ-ಖಾತೆಗಳನ್ನು ಸಿದ್ಧಪಡಿಸಿ, ವಿತರಿಸಲಾಗುತ್ತಿದೆ.


ಜಿಬಿಎ ಅಧಿಕಾರಿಗಳು ಅಥವಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸದಸ್ಯರು ನಿಮ್ಮ ಮನೆ ಬಾಗಿಲಿಗೆ ಬಂದು ಇ-ಖಾತೆಗಳನ್ನು ಉಚಿತವಾಗಿ ವಿತರಿಸಲಿದ್ದಾರೆ.

**ಬೆಂಗಳೂರಿನ 23 ಲಕ್ಷಕ್ಕೂ ಅಧಿಕ ಇ-ಖಾತೆಗಳು ನಿಮ್ಮ ಮನೆ ಬಾಗಿಲಿಗೆ ಉಚಿತವಾಗಿ ತಲುಪಲಿವೆ.**



ಯಾವುದೇ ಇ-ಖಾತಾ ದೂರುಗಳಿದ್ದಲ್ಲಿ, ಇಲ್ಲಿ ಸಂಪರ್ಕಿಸಿ:

'ನನ್ನ ಖಾತಾ ನನ್ನ ಹಕ್ಕು' ಅಭಿಯಾನದ ಸ್ಥಳಗಳ ವಿವರಗಳಿಗೆ ಸಂಪರ್ಕಿಸಿ:



ರಾಷ್ಟ್ರೀಯ ಇ-ಆಡಳಿತ ಪ್ರಶಸ್ತಿ (ಚಿನ್ನ) ವಿಜೇತ - 2025

*'ಬೆಂಗಳೂರಿನ ಅಭಿವೃದ್ಧಿಯ ಹೊಸಯುಗಕ್ಕೆ ಮುನ್ನುಡಿ'*

ಇ-ಖಾತಾ ಸಹಾಯವಾಣಿ: **94806 83695**

## ನಿತ್ಯ ಪಂಚಾಂಗ 16.05.2026 ಶನಿವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

ವೈಶಾಖ ಬಹುಳ, ಅಮಾವಾಸ್ಯೆ, ಭರಣಿ ನಕ್ಷತ್ರ, ಬಾದಾಮಿ ಅಮಾವಾಸ್ಯೆ, ಸಿಂಧಗಿ । ಅಮೋಘ ಸಿದ್ಧೇಶ್ವರ ಜಾತ್ರೆ, ತರೀಕೆರೆ । ಕಲ್ಲತ್ತಗಿರಿ ಲಿಂಗದಹಳ್ಳಿ ವೀರಭದ್ರ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಭವಿಷ್ಯದ ಆರೋಗ್ಯ ವಲಯ ಎಐ, ಕ್ವಾಂಟಮ್ ಕಂಪ್ಯೂಟಿಂಗ್ ತಂತ್ರಜ್ಞಾನ ಅವಲಂಬಿಸಿದೆ ಸಚಿವ ಎನ್.ಎಸ್. ಭೋಸರಾಜು




**ಬೆಂಗಳೂರು, ಮೇ 15:** ಭವಿಷ್ಯದ ಆರೋಗ್ಯ ವಲಯವು ಕೃತಕ ಬುದ್ಧಿಮತ್ತೆ (ಎಐ), ಕ್ವಾಂಟಮ್ ಕಂಪ್ಯೂಟಿಂಗ್ ಮತ್ತು ಡೇಟಾ ಸೈನ್ಸ್‌ನಂತಹ ಅತ್ಯಾಧುನಿಕ ತಂತ್ರಜ್ಞಾನಗಳನ್ನು ಅವಲಂಬಿಸಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಬೆಂಗಳೂರಿನಲ್ಲಿ 'ಕ್ವಾಂಟಮ್ ಸಿಟಿ' ನಿರ್ಮಿಸುವ ಮಹತ್ವಾಕಾಂಕ್ಷೆ ಹೊಂದಿದ್ದು, ಗ್ರಾಮೀಣ ಭಾಗದ ಜನರಿಗೂ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ಬದ್ಧವಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ತಿಳಿಸಿದ್ದಾರೆ.


ನಗರದಲ್ಲಿ ಆಯೋಜಿಸಲಾಗಿದ್ದ ಖಾಸಗಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಆರೋಗ್ಯವೇ ಭಾಗ್ಯ. ರೋಗಮುಕ್ತ ಹಾಗೂ ಆರೋಗ್ಯವಂತ ಸಮಾಜ ಮಾತ್ರ ಆರ್ಥಿಕವಾಗಿ ಪ್ರಗತಿ ಸಾಧಿಸಲು ಸಾಧ್ಯ. ಇಂದು ಭಾರತವು ಏಷ್ಯಾ ಮಾತ್ರವಲ್ಲದೆ ಜಗತ್ತಿನ ಪ್ರಮುಖ ಆರೋಗ್ಯ ಸೇವಾ ಕೇಂದ್ರವಾಗಿ ಹೊರಹೊಮ್ಮಿದೆ. ನಮ್ಮ ವೈದ್ಯರು, ವಿಜ್ಞಾನಿಗಳು ಮತ್ತು ಫಾರ್ಮಾ ವಲಯದ ಪರಿಣತಿಯಿಂದಾಗಿ ಮಧ್ಯಪ್ರಾಚ್ಯ ಮತ್ತು ಆಫ್ರಿಕಾ ರಾಷ್ಟ್ರಗಳ ರೋಗಿಗಳು ಚಿಕಿತ್ಸೆಗಾಗಿ ನಮ್ಮ ಆಸ್ಪತ್ರೆಗಳಿಗೆ ಬರುತ್ತಿದ್ದಾರೆ. ಕೋವಿಡ್ ಸಮಯದಲ್ಲಿ ಜಗತ್ತಿಗೆ ಲಸಿಕೆ ಹಾಗೂ ಔಷಧಿಗಳನ್ನು ಪೂರೈಸುವ ಮೂಲಕ ಭಾರತ ತನ್ನ ಸಾಮರ್ಥ್ಯವನ್ನು ಜಾಗತಿಕವಾಗಿ ಸಾಬೀತುಪಡಿಸಿದೆ," ಎಂದು ಸಚಿವರು ಶ್ಲಾಘಿಸಿದರು.

"ಕ್ಯಾನ್ಸರ್‌ನಂತಹ ಮಾರಕ ಕಾಯಿಲೆಗಳ ಲಕ್ಷಣಗಳು ಕಾಣಿಸಿಕೊಳ್ಳುವ ಮುನ್ನವೇ, ಆರಂಭಿಕ ಹಂತದಲ್ಲೇ ಪತ್ತೆಹಚ್ಚಲು ಮತ್ತು ಶಸ್ತ್ರಚಿಕಿತ್ಸೆಗಳ ಯಶಸ್ಸಿನ ಪ್ರಮಾಣವನ್ನು ಹೆಚ್ಚಿಸಲು ಎಐ ಹಾಗೂ ರೊಬೊಟಿಕ್ಸ್ ನೆರವಾಗುತ್ತಿವೆ. ಔಷಧಿಗಳ ಸಂಶೋಧನೆಯನ್ನು ವೇಗಗೊಳಿಸಲು ಮತ್ತು ರೋಗಿಗಳಿಗೆ ಪ್ರತ್ಯೇಕ ಚಿಕಿತ್ಸಾ ವಿಧಾನ ಒದಗಿಸಲು ಕ್ವಾಂಟಮ್ ಕಂಪ್ಯೂಟಿಂಗ್ ನಿರ್ಣಾಯಕ ಪಾತ್ರ ವಹಿಸಲಿದೆ. ಔಷಧ ಸಂಶೋಧನೆಗಾಗಿ ದೇಶದ ಮೊದಲ ಸ್ವದೇಶಿ ಕ್ವಾಂಟಮ್ ಕಂಪ್ಯೂಟರ್ ಹೊಂದಿರುವ ಹೆಗ್ಗಳಿಕೆ ಬೆಂಗಳೂರಿನದ್ದಾಗಿದೆ. ಕ್ಯುಪಿಐ–ಎಐ (QpiAi) ಮತ್ತು ಕ್ವಾಂಟಮ್ ಬಯೋಸೈನ್ಸ್‌ನಂತಹ ನವೋದ್ಯಮಗಳು ಈ ನಿಟ್ಟಿನಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ," ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

"ತಂತ್ರಜ್ಞಾನ ಕೇವಲ ನಗರಗಳಿಗೆ ಸೀಮಿತವಾಗಬಾರದು. ಗ್ರಾಮೀಣ ಭಾಗದಲ್ಲಿ ಈಗಲೂ ಅಪೌಷ್ಟಿಕತೆ, ಟಿಬಿ, ಮಲೇರಿಯಾ ಮತ್ತು ರಕ್ತಹೀನತೆಯಂತಹ ಸಮಸ್ಯೆಗಳಿವೆ. ನನ್ನ ತವರು ಜಿಲ್ಲೆ ರಾಯಚೂರಿನಲ್ಲಿ ಕ್ಯಾನ್ಸರ್ ರೋಗಿಗಳಿಗೆ ನೆರವಾಗಲು 'ಪೆರಿಫೆರಲ್ ಕ್ಯಾನ್ಸರ್ ಸೆಂಟರ್' (Peripheral Cancer Centre) ಪ್ರಾರಂಭಿಸಿದ್ದೇವೆ. ಅಪೌಷ್ಟಿಕತೆ ಕುರಿತು ಅಧ್ಯಯನ ನಡೆಸಲು ರಾಯಚೂರು ವಿಶ್ವವಿದ್ಯಾಲಯದಲ್ಲಿ 'ಜೀನೋಮ್ ಲ್ಯಾಬ್' (Genome Lab) ಸ್ಥಾಪಿಸಲಾಗಿದೆ.

ಇಡೀ ಕಲ್ಯಾಣ ಕರ್ನಾಟಕ ಭಾಗದ ಆರೋಗ್ಯ ವಲಯದ ಚಿತ್ರಣವನ್ನೇ ಬದಲಿಸಬಲ್ಲ 'ಏಮ್ಸ್' (AIIMS) ಆಸ್ಪತ್ರೆಯನ್ನು ರಾಯಚೂರಿನಲ್ಲಿ ಸ್ಥಾಪಿಸಲು ನಮ್ಮ ಸರ್ಕಾರ ನಿರಂತರ ಪ್ರಯತ್ನ ನಡೆಸುತ್ತಿದೆ. ಹಿಂದುಳಿದ ಜಿಲ್ಲೆಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ," ಎಂದು ಅವರು ಮಾಹಿತಿ ನೀಡಿದರು. ವೈದ್ಯಕೀಯ ಕ್ಷೇತ್ರದ ಗಣ್ಯರು, ತಂತ್ರಜ್ಞಾನ ತಜ್ಞರು, ಉದ್ಯಮಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.

# 3 ವರ್ಷಗಳಲ್ಲಿ ಎಸಿ ನ್ಯಾಯಾಲಯದ ಶೇ.90ಕ್ಕೂ ಪ್ರಕರಣಗಳ ಇತ್ಯರ್ಥ



### ಬಾಕಿಯಿದ್ದ 73,624 ಅವಧಿ ಮೀರಿದ ಪ್ರಕರಣಗಳ ಸಂಖ್ಯೆ 7,490ಕ್ಕೆ ಇಳಿಕೆ

**ಬೆಂಗಳೂರು, ಮೇ 15:** ರಾಜ್ಯದ ಉಪವಿಭಾಗಾಧಿಕಾರಿಗಳ (ಎಸಿ) ನ್ಯಾಯಾಲಯದಲ್ಲಿ ಬಾಕಿಯಿದ್ದ ತಕರಾರು ಪ್ರಕರಣಗಳ ಪೈಕಿ ಶೇ.90ಕ್ಕೂ ಹೆಚ್ಚು ಪ್ರಕರಣಗಳನ್ನು ಕಳೆದ ಮೂರು ವರ್ಷದಲ್ಲಿ ಇತ್ಯರ್ಥಪಡಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಹೇಳಿದ್ದಾರೆ.

ಶುಕ್ರವಾರ ವಿಕಾಸಸೌಧದಿಂದ ವೀಡಿಯೊ ಸಂವಾದ ಮೂಲಕ ರಾಜ್ಯದ ಎಲ್ಲ ಉಪ ವಿಭಾಗಾಧಿಕಾರಿಗಳ ಜೊತೆ ಶುಕ್ರವಾರ ಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಮೂರು ವರ್ಷದ ಹಿಂದೆ ಕಂದಾಯ ಇಲಾಖೆ ಜವಾಬ್ದಾರಿ ಸ್ವೀಕರಿಸಿದ್ದಾಗ ರಾಜ್ಯಾದ್ಯಂತ ಸುಮಾರು 73,624 ಅವಧಿ ಮೀರಿದ ತಕರಾರು ಪ್ರಕರಣಗಳು ಬಾಕಿ ಇದ್ದವು. ಪರಿಣಾಮ ಜನ ಸಾಮಾನ್ಯರು ಅನಗತ್ಯವಾಗಿ ಸರಕಾರಿ ಕಚೇರಿ ಅಲೆಯುವಂತಾಗಿತ್ತು. ಆದರೆ, ಆ ಸಂಖ್ಯೆಯನ್ನು ಇದೀಗ ಕೇವಲ 7,490ಕ್ಕೆ ಇಳಿಸಿದಂತಾಗಿದೆ. ಆ ಮೂಲಕ ಶೇ.90ಕ್ಕೂ ಹೆಚ್ಚು ಪ್ರಕರಣಗಳಿಗೆ ಮುಕ್ತಿ ನೀಡಿದಂತಾಗಿದೆ. ಮುಂದಿನ ದಿನಗಳಲ್ಲಿ ಈ ಪ್ರಕರಣಗಳನ್ನೂ ಶೀಘ್ರ ಇತ್ಯರ್ಥಪಡಿಸಬೇಕು ಎಂದು ಸೂಚಿಸಿದರು.

ನಾವು ಇಲಾಖೆಯ ಜವಾಬ್ದಾರಿ ಸ್ವೀಕರಿಸಿದ ಸಂದರ್ಭದಲ್ಲಿ, ಸರಕಾರಿ ಕಚೇರಿಗಳಿಗೆ ಜನರ ಅನಗತ್ಯ ಓಡಾಟಕ್ಕೆ ತಡೆ ನೀಡುವ ಸಲುವಾಗಿಯೇ ಮೊದಲು ಈ ಎಲ್ಲ ಬಾಕಿ ಪ್ರಕರಣಗಳ ಇತ್ಯರ್ಥಕ್ಕೆ ಮೊದಲ ಆದ್ಯತೆ ನೀಡಲಾಗಿತ್ತು. ಅಧಿಕಾರಿಗಳ ಸಹಕಾರ ಇಲ್ಲದಿದ್ದರೆ ಈ ಕೆಲಸ ಸಾಧ್ಯವಾಗುತ್ತಿರಲಿಲ್ಲ. ಹೀಗಾಗಿ ಅತ್ಯುತ್ತಮವಾಗಿ ಕೆಲಸ ನಿರ್ವಹಿಸುತ್ತಿರುವ ಎಲ್ಲ ಅಧಿಕಾರಿಗಳಿಗೂ ಧನ್ಯವಾದಗಳು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅತಿಹೆಚ್ಚು ಪ್ರಕರಣಗಳು ಬಾಕಿ ಇದ್ದ ತುಮಕೂರು, ದೊಡ್ಡಬಳ್ಳಾಪುರ, ತರೀಕೆರೆ, ಕೋಲಾರ ಸೇರಿದಂತೆ ಹಲವು ಎಸಿ ವಲಯಗಳು ಪ್ರಸ್ತುತ ಸುಧಾರಣೆ ಕಂಡಿವೆ. ಆದರೆ, ಸ್ವತಃ ನಾನು ಪ್ರತಿನಿಧಿಸುವ ಬೆಂಗಳೂರು ಉತ್ತರ ಜಿಲ್ಲೆಯಲ್ಲಿ ಸಾಕಷ್ಟು ಪ್ರಕರಣಗಳು ಬಾಕಿ ಇವೆ ಎಂದು ಇದೇ ವೇಳೆ ಸಭೆಯಲ್ಲಿ ಸಚಿವರು ಅಸಮಾಧಾನ ಹೊರಹಾಕಿದರು.ಉತ್ತರ ಜಿಲ್ಲೆಯ ವಿಶೇಷ ಉಪ ವಿಭಾಗಾಧಿಕಾರಿಗಳು ನಿಜಕ್ಕೂ ತಮಗೆ ನೀಡಿದ ಜವಾಬ್ದಾರಿಯನ್ನು ಅತ್ಯುತ್ತಮವಾಗಿ ನಿರ್ವಹಿಸುತ್ತಿದ್ದಾರೆ. ಆದರೆ, ಉಪವಿಭಾಗಾಧಿಕಾರಿ ಕಿರಣ್ ಅವರು ಆದೇಶಕ್ಕಾಗಿ ಕಾಯ್ದಿರಿಸಿದ ಪ್ರಕರಣಗಳನ್ನೂ ವಿಲೇ ಮಾಡುತ್ತಿಲ್ಲ. ಪರಿಣಾಮ ಜನ ಸಾಮಾನ್ಯರು ಪ್ರತಿನಿತ್ಯ ನನ್ನ ಗೃಹ ಕಚೇರಿಗೆ ಆಗಮಿಸಿ ನನ್ನನ್ನು ಪ್ರಶ್ನಿಸುತ್ತಿದ್ದಾರೆ. ಯಾರೋ ಒಬ್ಬ ಅಧಿಕಾರಿ ಮಾಡುವ ತಪ್ಪಿಗೆ ಜನರ ಎದುರು ನಾನು ತಲೆ ತಗ್ಗಿಸುವಂತಾಗಿದೆ ಎಂದರು.ಸಭೆಯಲ್ಲಿ ಸರಕಾರದ ಅಪರ ಮುಖ್ಯ ಕಾರ್ಯದರ್ಶಿ (ಕಂದಾಯ ಇಲಾಖೆ) ರಾಜೇಂದ್ರ ಕುಮಾರ್ ಕಟಾರಿಯಾ, ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತ ಆಮ್ಲನ್ ಆದಿತ್ಯ ಬಿಸ್ವಾಸ್ ಸೇರಿದಂತೆ ಪ್ರಮುಖರಿದ್ದರು.

# ಎಸ್‌ಐಆರ್ ಮೂಲಕ ಪರಿಶಿಷ್ಟ ಅಲ್ಪಸಂಖ್ಯಾತ ಮತ ಕಡಿತಕ್ಕೆ ಯತ್ನ



**ಬೆಂಗಳೂರು, ಮೇ 15:** ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ ಮೂಲಕ ಪರಿಶಿಷ್ಟ, ಹಿಂದುಳಿದವರ್ಗ ಹಾಗೂ ಅಲ್ಪಸಂಖ್ಯಾತ ಮತಗಳನ್ನು ಕಡಿತಗೊಳಿಸುವ ಯತ್ನ ನಡೆಯುತ್ತಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ. ಕೆ.ಶಿವಕುಮಾರ್ ಆರೋಪಿಸಿದ್ದಾರೆ.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿ, ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ ಮೂಲಕ ಎಸ್ಸಿ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ಮತಗಳನ್ನು ಕಡಿತಗೊಳಿಸುವ ಯತ್ನ ನಡೆಯುತ್ತಿದ್ದು, ನಮ್ಮ ಸರ್ಕಾರ ಅವರ ಮತ ಹಕ್ಕನ್ನು ರಕ್ಷಿಸಲು ಬದ್ಧವಾಗಿದೆ ಎಂದಿದ್ದಾರೆ.

ಎಸ್‌ಐಆರ್ ಬಗ್ಗೆ ನಮಗೆ ಎಲ್ಲಾ ಮಾಹಿತಿ ಇದೆ. ನಾವು ಪಕ್ಷದ ಎಲ್ಲಾ ನಾಯಕರಿಗೆ ಇದರ ಬಗ್ಗೆ ಜಾಗೃತಿ ಮೂಡಿಸುತ್ತಿದ್ದೇವೆ. ಬಿಜೆಪಿ ಮತ್ತು ಜೆಡಿಎಸ್ ಕೂಡ ತಮ್ಮ ಮತಗಳನ್ನು ರಕ್ಷಿಸಿಕೊಳ್ಳಲಿ ಎಂದು ತಿಳಿಸಿದರು. ಎಸ್ಸಿ, ಬಿಸಿ ಮತ್ತು ಅಲ್ಪಸಂಖ್ಯಾತರ ಮತಗಳನ್ನು ಕಡಿತಗೊಳಿಸುವ ಉದ್ದೇಶ ಇದಾಗಿದ್ದು, ನಾವು ಪ್ರತಿಯೊಬ್ಬ ಅರ್ಹ ಮತದಾರರ ಹಕ್ಕನ್ನು ರಕ್ಷಿಸುತ್ತೇವೆ. ಭಾರತದಲ್ಲಿ ಜನಿಸಿದ ಪ್ರತಿಯೊಬ್ಬರಿಗೂ ಮತದ ಹಕ್ಕಿದೆ. ಕರ್ನಾಟಕದಲ್ಲಿ ಈಗಾಗಲೇ ಶೇಕಡಾ 88ರಿಂದ 90ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣ ಗೊಂಡಿದೆ. ಉಳಿದವರಿಗೂ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

# ಎಷ್ಟೋ ವರ್ಷಗಳಿಂದ ಇದ್ದ ಪದ್ಧತಿಗೆ ತಡೆ ತಂದಿದ್ದೇ ಬಿಜೆಪಿ



**ಬೆಂಗಳೂರು, ಮೇ 15:** ಬಿಜೆಪಿ ಅಧಿಕಾರದಲ್ಲಿದ್ದಾಗ ನೀತಿ ನಿರೂಪಣೆಗಳನ್ನು ಮಾಡುತ್ತಿರಲಿಲ್ಲವೇ, ಜನರು ಚೆನ್ನಾಗಿರಬೇಕೆಂದು ಕಾನೂನು, ನೀತಿಗಳನ್ನು ಅವರು ಮಾಡಿದ್ದಾರಾ ಎಂದು ಗೃಹ ಸಚಿವ ಡಾ ಜಿ ಪರಮೇಶ್ವರ್ ಪ್ರಶ್ನಿಸಿದ್ದಾರೆ. ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನರಿಗೆ ಪ್ರಚೋದನೆ ಮಾಡುವ ರೀತಿಯಲ್ಲಿ ಸರ್ಕಾರ ನೀತಿ, ಕಾನೂನುಗಳನ್ನು ತರಬಾರದು. ಕರ್ನಾಟಕದಲ್ಲಿ ಹಿಜಾಬ್ ಹಿಂದಿನಿಂದಲೂ ಇದ್ದ ಧಾರ್ಮಿಕ ಪದ್ಧತಿ, ಹೊಸದಾಗಿ ನಾವು ನೀತಿ ತಂದಿಲ್ಲ. ಬಿಜೆಪಿಯವರೇ ಮಧ್ಯದಲ್ಲಿ ಹಿಜಾಬ್ ಧರಿಸಬಾರದು ಎಂದು ಕಾನೂನು ತಂದರು. ಎಷ್ಟೋ ವರ್ಷಗಳಿಂದ ಇದ್ದ ಪದ್ಧತಿಗೆ ತಡೆ ತಂದಿದ್ದೇ ಅವರು. ಜನಿವಾರ ಹಾಕಿ ಎಂದು ನಾವು ಹೊಸದಾಗಿ ಹೇಳುತ್ತಿಲ್ಲ, ಈಗಾಗಲೇ ಧರಿಸುವವರಿಗೆ ಬೇಡ ಅಂದಿಲ್ಲ, ಬಿಜೆಪಿಯವರು ಏನೇ ಟೀಕೆ ಮಾಡಲಿ ಎಂದರು.

# ಬಿಜೆಪಿಯವರು ದೇಶವನ್ನು ಅದಾನಿ, ಅಂಬಾನಿಗೆ ಮಾರಿದ್ದಾರೆ: ಸಚಿವ ಈಶ್ವರ ಖಂಡ್ರೆ ಟೀಕೆ



**ಬೆಂಗಳೂರು, ಮೇ 15:** ಉದ್ಯಮಿ ಗೌತಮ್ ಅದಾನಿ ಆದಾಯ 10 ವರ್ಷಗಳ ಹಿಂದೆ ಏನೂ ಇರಲಿಲ್ಲ. ಬಿಜೆಪಿಯವರು ಲಕ್ಷಾಂತರ ಕೋಟಿ ರೂಪಾಯಿ ಕೊಟ್ಟು ಇಡೀ ದೇಶವನ್ನು ಅದಾನಿ, ಅಂಬಾನಿಗೆ ಮಾರಾಟ ಮಾಡಿದ್ದಾರೆ. ಬಿಜೆಪಿಯವರಿಗೆ ಕಾಂಗ್ರೆಸ್ ಅನ್ನು ಟೀಕಿಸುವ ಪ್ರಶ್ನಿಸುವ ನೈತಿಕತೆ ಇಲ್ಲ ಎಂದು ಅರಣ್ಯ ಖಾತೆ ಸಚಿವ ಈಶ್ವರ್ ಖಂಡ್ರೆ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಾಂಧಿ ಪರಿವಾರ ಈ ದೇಶಕ್ಕಾಗಿ ತ್ಯಾಗ ಮಾಡಿದ್ದಾರೆ, ಜೀವ ಬಲಿದಾನ ಮಾಡಿದ್ದಾರೆ. ಮೋದಿಯವರು ಧರಿಸುವ ಡ್ರೆಸ್ ಎಷ್ಟು ಬೆಲೆಬಾಳುತ್ತದೆ, ಅವರ ವಿದೇಶ ಪ್ರಯಾಣದ ಖರ್ಚನ್ನು ದೇಶದ ಜನತೆ ಮುಂದಿಡಲಿ ಎಂದರು.

ಸುಳ್ಳು, ಮೋಸ, ವಂಚನೆ ಬಿಜೆಪಿಯರ ಅಭ್ಯಾಸ, ವಿದೇಶದಿಂದ ಕಪ್ಪು ಹಣ ತಂದರಾ, ರೈತರ ಆಧಾಯ ದುಪ್ಪಟ್ಟಾಯಿತಾ, ಜನತೆಗೆ ಕೊಟ್ಟ ಭರವಸೆಗಳನ್ನು ಈಡೇರಿಸಿದ್ದಾರಾ, ಎಲ್ಲಾ ಬಡವರಿಗೆ ಮನೆ ಕೊಡುತ್ತೇವೆ ಎಂದು ಭರವಸೆ ಕೊಟ್ಟರೇ ಹೊರತು ಅದು ನಿಜವಾಗಲಿಲ್ಲ. ಈಗ ಪೆಟ್ರೋಲ್–ಡೀಸೆಲ್ ದರ ಹೆಚ್ಚಿಸಿದ್ದಾರೆ, ಯುದ್ಧದ ಕಷ್ಟದ ಪರಿಸ್ಥಿತಿಗೆ ಏನು ಸಿದ್ಧತೆ ಮಾಡಿಕೊಂಡಿದ್ದಾರೆ ಎಂದು ಪ್ರಶ್ನಿಸಿದರು.

ಭ್ರಷ್ಟಾಚಾರ ಆರೋಪಿಗಳಿಗೆ ಬಿಜೆಪಿ ಮಣೆ

ಅಜಿತ್ ಪವಾರ್ 75 ಸಾವಿರ ಕೋಟಿ ರೂಪಾಯಿ ಲೂಟಿ ಹೊಡೆದರು ಎಂದು ಹೇಳಿದಿರಿ, ನಂತರ ಅವರನ್ನೇ ಡಿಸಿಎಂ ಮಾಡಿದರು. ಸುವೇಂದು ಅಧಿಕಾರಿ ಭ್ರಷ್ಟಾಚಾರ ಮಾಡಿದ್ದಾರೆ ಎಂದು ಬಹಿರಂಗವಾಗಿಯೇ ಆರೋಪ ಮಾಡಿದ್ದಿರಿ, ಇಂದು ಅವರನ್ನೇ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಾಡಿದರು, ಅಸ್ಸಾಂ ಮುಖ್ಯಮಂತ್ರಿ ಮೇಲೆ ಭ್ರಷ್ಟಾಚಾರ ಆರೋಪ ಮಾಡಿ ನಂತರ ಮುಖ್ಯಮಂತ್ರಿ ಮಾಡಿದರು, ನೀವು ಮಾಧ್ಯಮದವರು ಬಿಜೆಪಿಯವರನ್ನು ಪ್ರಶ್ನೆ ಮಾಡಬೇಕೆಂದರು. ಕೇರಳದಲ್ಲಿ ಕೆ ಸಿ ವೇಣುಗೋಪಾಲ್ ಹಿರಿಯ ನಾಯಕರು, ಎಲ್ಲರನ್ನೂ ಕೂಡಿ ಚರ್ಚಿಸಿ ಮುಖ್ಯಮಂತ್ರಿ ಆಯ್ಕೆ ನಡೆದಿದೆ ಎಂದರು. ಕರ್ನಾಟಕ ಬಿಜೆಪಿ ನಾಯಕರ ತಟ್ಟೆಯಲ್ಲಿ ಹೆಗ್ಗಣ ಬಿದ್ದಿದೆ, ಸಂಪೂರ್ಣ ನಾಶವಾಗಿದೆ, ಅದನ್ನು ಸುಧಾರಣೆ ಮಾಡುವ ಬದಲು ಕಾಂಗ್ರೆಸ್ ಅನ್ನು ಟೀಕಿಸುತ್ತಿದ್ದಾರೆ ಎಂದರು.

# ಮಧ್ಯಪ್ರಾಚ್ಯ ದೇಶಗಳಲ್ಲಿರುವ ರಾಜ್ಯದ ಕಾರ್ಮಿಕರಿಗೆ ಅವಕಾಶ

### ಕಾರ್ಯಸಾಧ್ಯತಾ ವರದಿ ನೀಡುವಂತೆ ಅಧಿಕಾರಿಗಳಿಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಸೂಚನೆ



**ಬೆಂಗಳೂರು, ಮೇ 15:** ಪರಿಣತ ಕಾರ್ಮಿಕರ ಕೊರತೆ ಎದುರಿಸುತ್ತಿರುವ ಮಧ್ಯಪ್ರಾಚ್ಯದ ಕೆಲವು ದೇಶಗಳಲ್ಲಿ ಕೆಲಸ ಮಾಡುವ ಕ್ಷಮತೆಯಿರುವ ರಾಜ್ಯದ ಕಾರ್ಮಿಕರಿಗೆ ಅವಕಾಶ ಕಲ್ಪಿಸುವ ಸಂಬಂಧ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ವಿಧಾನಸೌಧದಲ್ಲಿ ಶುಕ್ರವಾರ ಮಹತ್ವದ ಸಭೆ ನಡೆಸಿದ್ದಾರೆ.

ರಾಜ್ಯದ ಕಟ್ಟಡ ಕಾರ್ಮಿಕರು ಸೇರಿದಂತೆ ವಿವಿಧ ವಲಯಗಳ ಕಾರ್ಮಿಕರಿಗೆ ಇಸ್ರೇಲ್ ಸೇರಿದಂತೆ ವಿವಿಧ ಮಧ್ಯಪ್ರಾಚ್ಯ ದೇಶಗಳಲ್ಲಿ ಲಭ್ಯವಿರುವ ಗುತ್ತಿಗೆ ಕೆಲಸಗಳ ಅವಕಾಶಗಳ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಸಲಾಯಿತು.ಈ ಬಗ್ಗೆ ನಡೆದ ಆರಂಭಿಕ ಹಂತದ ಸಭೆ ಇದಾಗಿದ್ದು, ಇದರ ಕಾರ್ಯಸಾಧ್ಯತೆ ಬಗ್ಗೆ ವಿವರವಾದ ವರದಿ ನೀಡುವಂತೆ ಅಧಿಕಾರಿಗಳಿಗೆ ಸಂತೋಷ್ ಲಾಡ್ ಸೂಚಿಸಿದ್ದಾರೆ. ಕಾರ್ಮಿಕ ಕಲ್ಯಾಣಕ್ಕಾಗಿ ಸದಾ ಹೊಸದನ್ನೇನಾದರೂ ಯೋಚಿಸುವ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು, ಸದ್ಯ ಇಸ್ರೇಲ್ ಸೇರಿದಂತೆ ಇತರ ಮುಂದುವರಿದ ಮಧ್ಯಪ್ರಾಚ್ಯ ದೇಶಗಳಲ್ಲಿ ಕೌಶಲ್ಯಯುತ ಕಾರ್ಮಿಕರಿಗೆ ಭಾರೀ ಬೇಡಿಕೆ ಇದ್ದು, ಅದರಲ್ಲೂ ಕನ್ಸ್ಟ್ರಕ್ಷನ್ ವಲಯದಲ್ಲಂತೂ ನುರಿತ ಕಾರ್ಮಿಕರಿಗೆ ತುಸು ಹೆಚ್ಚೇ ಬೇಡಿಕೆ ಇರುವುದನ್ನು ಮನಗಂಡು ಇಲ್ಲಿನ ನುರಿತ ಕಟ್ಟಡ ಕಾರ್ಮಿಕರನ್ನು ಇಸ್ರೇಲ್‌ಗೆ ಗುತ್ತಿಗೆ ಆಧಾರದಲ್ಲಿ ಕಳುಹಿಸುವ ಮಹತ್ವದ ಪರಿಕಲ್ಪನೆಯೊಂದಿಗೆ ಮುಂದಡಿಯಿಟ್ಟಿದ್ದಾರೆ. ಕೌಶಲ್ಯಪೂರ್ಣತೆ, ಅತ್ಯಂತ ಕಡಿಮೆ ಕ್ರೈಮ್ ರೇಟ್, ಬೇರೆ ಪ್ರದೇಶಗಳಲ್ಲಿ ಹೊಂದಿಕೊಂಡು ಕೆಲಸ ಮಾಡುವ ಸ್ವಭಾವ ಸೇರಿದಂತೆ ಹಲವು ವಿಷಯಗಳಲ್ಲಿ ರಾಜ್ಯದ ಕಾರ್ಮಿಕ ವರ್ಗಕ್ಕೆ ತನ್ನದೇ ಆದ ಹೆಸರಿದೆ. ಹೀಗಾಗಿ ಬೇಡಿಕೆಯೂ ಸಹಜವಾಗಿದೆ. ಆದರೆ ಮಾಹಿತಿ ಕೊರತೆ, ಏಜನ್ಸಿಗಳ ಹಾವಳಿಯಿಂದ ವಿದೇಶಕ್ಕೆ ತೆರಳಿ ಕೆಲಸ ಮಾಡಲು ಕಾರ್ಮಿಕರಿಗೆ ಸಾಧ್ಯವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ, ಸಂತೋಷ್ ಲಾಡ್ ಅವರು ಇಸ್ರೇಲ್ ಕಾನ್ಸುಲೇಟ್ ಅಧಿಕಾರಿಗಳೊಂದಿಗೆ ಇಂದು ನಡೆಸಿದ ಆರಂಭಿಕ ಹಂತದ ಸಭೆ ಮಹತ್ವ ಪಡೆದುಕೊಂಡಿದೆ. ಶ್ರಮಿಕರ ಹಿತಕ್ಕಾಗಿ ಹಲವು ದಿಟ್ಟ ಹೆಜ್ಜೆಗಳನ್ನಿಡುತ್ತಿರುವ ಸಚಿವ ಸಂತೋಷ್ ಲಾಡ್ ಅವರು ಈ ಹೊಸ ಪರಿಕಲ್ಪನೆಯನ್ನು ಹೇಗೆ ಕಾರ್ಯರೂಪಕ್ಕೆ ತರಲಿದ್ದಾರೆ ಎಂಬುದನ್ನು ಕಾದುನೋಡಬೇಕಿದೆ.

# ಅಚ್ಚೇದಿನ್ ಹೆಸರಲ್ಲಿ ದುಬಾರಿ ಬದುಕು: ಹರಿಪ್ರಸಾದ್ ಟೀಕೆ



**ಬೆಂಗಳೂರು, ಮೇ 15:** ದೇಶದ ಜನರು ಮೋದಿ ಸರಕಾರದ ಅಚ್ಚೇದಿನ್ ನೋಡಲೂ ಇಲ್ಲ, ಅಮೃತಕಾಲದಲ್ಲಿ ಬದುಕಲೂ ಆಗುತ್ತಿಲ್ಲ. ದಿನೇದಿನೆ ಏರುತ್ತಿರುವ ಪೆಟ್ರೋಲ್, ಡಿಸೇಲ್, ಗ್ಯಾಸ್ ಬೆಲೆಯಿಂದಾಗಿ ದೇಶದ ಜನರ ಜೀವನವೇ ಬರ್ಬಾದ್ ಆಗುತ್ತಿದೆ. 'ಅಚ್ಚೇ ದಿನ್' ಹೆಸರಿನಲ್ಲಿ ದೇಶದ ಜನರನ್ನು ಮೋಸ ಮಾಡಿದ ಬಿಜೆಪಿ ಸರಕಾರ, ಇಂದು ಜನರಿಗೆ ಕೊಟ್ಟಿರುವುದು ದುಬಾರಿ ಬದುಕು, ತೆರಿಗೆ ದರೋಡೆ ಮತ್ತು ಯುವಜನತೆಗೆ ನಿರುದ್ಯೋಗದ ನರಕ' ಎಂದು ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಟೀಕಿಸಿದ್ದಾರೆ.

ಶುಕ್ರವಾರ ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಅವರು, 'ಜಾಗತಿಕ ಮಟ್ಟದಲ್ಲಿ ಕಚ್ಚಾತೈಲ ಬೆಲೆ ಏರಿಕೆಯಿಂದ ಪೆಟ್ರೋಲ್, ಡಿಸೇಲ್ ಬೆಲೆ ಏರಿಕೆಯಾಗಿದೆ ಎಂದು ಸಬೂಬು ಹೇಳುತ್ತಿರುವ ಕೇಂದ್ರ ಸರಕಾರ, ಅದೇ ಜಾಗತಿಕ ಮಟ್ಟದಲ್ಲಿ ಕಚ್ಚಾ ತೈಲಬೆಲೆ ಇಳಿಕೆಯಲ್ಲಿದ್ದಾಗ ಯಾಕೆ ಪೆಟ್ರೋಲ್, ಡಿಸೇಲ್ ದರ ಕಡಿಮೆ ಮಾಡಲಿಲ್ಲ. ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಇಳಿದರೂ ದೇಶದ ಜನರಿಗೆ ಲಾಭ ಸಿಗಲಿಲ್ಲ ಯಾಕೆ. ಅದಾನಿ–ಅಂಬಾನಿ ತೈಲ ಕಂಪೆನಿಗಳ ಲಾಭಕ್ಕಾಗಿ ಜನಸಾಮಾನ್ಯರ ಮೇಲೆ ತೆರಿಗೆ ಹೇರಿದ್ದು ಕೇಂದ್ರ ಸರಕಾರ ಅಲ್ಲವೇ' ಎಂದು ಪ್ರಶ್ನಿಸಿದ್ದಾರೆ.

'ಪೆಟ್ರೋಲ್, ಡೀಸೆಲ್ ತೈಲ ದರ ಏರಿದರೆ ಅದರ ಪರಿಣಾಮ ಕೇವಲ ವಾಹನಗಳಿಗೆ ಮಾತ್ರ ಸೀಮಿತವಾಗುವುದಿಲ್ಲ. ದೇಶದ ಬೆನ್ನೆಲುಬು ರೈತನ ಹೊಲದಿಂದ ಮಾರುಕಟ್ಟೆಗೆ ಬರುವ ಪ್ರತಿಯೊಂದು ಆಹಾರ ವಸ್ತುವಿನ ಮೇಲೂ ಅದರ ಹೊರೆ ಬೀಳುತ್ತದೆ. ಸಾರಿಗೆ ವೆಚ್ಚ ಹೆಚ್ಚುತ್ತದೆ, ಅದರ ಪರಿಣಾಮವಾಗಿ ತರಕಾರಿ, ಅಕ್ಕಿ, ಹಣ್ಣು, ಹಾಲು ದಿನಬಳಕೆಯ ಪ್ರತಿಯೊಂದು ವಸ್ತುವಿನ ದರವೂ ಏರುತ್ತದೆ. ಅಂತಿಮವಾಗಿ ಸಾಮಾನ್ಯ ಜನರ ಅಡಿಗೆ ಮನೆಯೇ ಕುಸಿದು ಬೀಳುತ್ತದೆ' ಎಂದು ಅವರು ಟೀಕಿಸಿದ್ದಾರೆ.'ಜನರಿಗೆ ಅಚ್ಚೇ ದಿನ್ ಭ್ರಮೆ ಸೃಷ್ಟಿಸಿ, ಅದಾನಿ–ಅಂಬಾನಿಗಳಂತಹ ಕಾರ್ಪೊರೇಟ್ ಸಾಮ್ರಾಜ್ಯಗಳಿಗೆ 'ಅಮೃತಕಾಲ'ವನ್ನೇ ಮೋದಿ ಸರಕಾರ ಧಾರೆ ಎರೆದಿದೆ. ಚುನಾವಣೆ ಮುಗಿಯುವವರೆಗೆ 'ಧರ್ಮ ಅಪಾಯದಲ್ಲಿದೆ, ಹಿಂದೂಗಳು ಅಪಾಯದಲ್ಲಿದ್ದಾರೆ, ಪಾಕಿಸ್ತಾನ, ಮಂದಿರ, ಮಂಗಲಸೂತ್ರ' ಎಂಬ ಭಾವನಾತ್ಮಕ ನಾಟಕ. ಚುನಾವಣೆ ಮುಗಿದ ತಕ್ಷಣ ಜನರಿಗೆ ಸಿಗೋದು ಪೆಟ್ರೋಲ್, ಗ್ಯಾಸ್ ಬೆಲೆ ಏರಿಕೆ, ತೆರಿಗೆ ಹೊಡೆತ ಮತ್ತು ಬದುಕಿನ ಉಸಿರುಗಟ್ಟುವ ಸಂಕಷ್ಟ' ಎಂದು ಅವರು ಲೇವಡಿ ಮಾಡಿದ್ದಾರೆ.'ಜನರ ಜೇಬು ಖಾಲಿ ಮಾಡಿ, ಕಾರ್ಪೊರೇಟ್ ಖಜಾನೆ ತುಂಬಿಸುವ ರಾಜಕಾರಣಕ್ಕೆ ದೇಶ ಎಷ್ಟು ದಿನ ಬಲಿಯಾಗಬೇಕು. ಜನರನ್ನು ಮತ್ತಷ್ಟು ಸಂಕಷ್ಟಕ್ಕೆ ದೂಡುತ್ತಿರುವ ಕೇಂದ್ರ ಬಿಜೆಪಿ ಸರಕಾರದ ದುರಾಡಳಿತಕ್ಕೆ ಜನರು ಭಾರಿ ಬೆಲೆ ತೇರಬೇಕಿದೆ. ದೇಶದ ಆರ್ಥಿಕ ವ್ಯವಸ್ಥೆ ಮತ್ತಷ್ಟು ಕುಸಿಯುವ ದಿನಗಳು ದೂರವಿಲ್ಲ' ಎಂದು ಹರಿಪ್ರಸಾದ್ ಎಚ್ಚರಿಕೆ ನೀಡಿದ್ದಾರೆ.

# ಬೇಡ ಸಮಾಜದ ಅರ್ಜಿ ಪುರಸ್ಕರಿಸಿದ ಸುಪ್ರೀಂ

### ಕರ್ನಾಟಕ ಸರ್ಕಾರ ಹಾಗೂ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೆ ಆದೇಶ

**ನವದೆಹಲಿ, ಮೇ 15:** ಕಲಬುರಗಿಯ ರವೀಂದ್ರ ಸ್ವಾಮಿ ಪ್ರಕರಣದಲ್ಲಿ ಕರ್ನಾಟಕ ಹೈಕೋರ್ಟ್ ನೀಡಿರುವ ತೀರ್ಪಿಗೆ ತಡೆಯಾಜ್ಞೆ ನೀಡುವ ಸಂಬಂಧ ಕರ್ನಾಟಕ ಸರ್ಕಾರ ಹಾಗೂ ಎಲ್ಲ ಪ್ರತಿವಾದಿಗಳಿಗೆ ನೋಟಿಸ್ ಮಾಡುವಂತೆ ಸುಪ್ರೀಂ ಕೋರ್ಟ್ ಮಹತ್ವದ ಆದೇಶ ನೀಡಿದೆ. ಸುಪ್ರೀಂ ಕೋರ್ಟ್ ನ್ಯಾಯಾಲಯದಲ್ಲಿ ಕರ್ನಾಟಕ ಬೇಡ ಸಮಾಜ ಸಂಸ್ಥೆಯಿಂದ ಸಲ್ಲಿಸಲಾದ ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಾಧೀಶರುಗಳಾದ ವಿಕ್ರಮನಾಥ ಮತ್ತು ಸಂದೀಪ ಮೆಹತಾ ಇವರನ್ನೊಳಗೊಂಡ ವಿಭಾಗೀಯ ಪೀಠ ವಿಚಾರಣೆ ನಡೆಸಿ ಈ ಆದೇಶ ಹೊರಡಿಸಿದೆ. ವಿಚಾರಣೆಯಲ್ಲಿ ಸಮಾಜದ ಪರವಾಗಿ ಸರ್ವೋಚ್ಚ ನ್ಯಾಯಾಲಯದ ಹಿರಿಯ ನ್ಯಾಯವಾದಿಗಳಾದ ಗುರು ಕೃಷ್ಣ ಕುಮಾರ್ ಹಾಗೂ ಮಹಾಲಕ್ಷ್ಮಿ ಪಾವನಿ ವಾದ ಮಂಡಿಸಿದರು. ಟಾಮಿ ಚಾಕೋ ನ್ಯಾಯವಾದಿ ಪ್ರಕರಣ ದಾಖಲು ಮಾಡಿದ್ದರು.



■ ಬೆಂಗಳೂರಿನ ಮಲ್ಲತ್ತಹಳ್ಳಿಯ ಕಲಾಗ್ರಾಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂತ ಕನಕದಾಸ ಮತ್ತು ತತ್ವ ಪದಕಾರರ ಅಧ್ಯಯನ ಕೇಂದ್ರ ವತಿಯಿಂದ ಶುಕ್ರವಾರ ಆಯೋಜಿಸಲಾಗಿದ್ದ ಕನಕದಾಸರ ಸಮಗ್ರ ಸಾಹಿತ್ಯ ಅನುವಾದ ಸಂಪುಟಗಳ 40 ಕೃತಿಗಳ ಬಿಡುಗಡೆ ಮತ್ತು ಕನಕ ಶಿಲ್ಪವನ ಅನಾವರಣ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಭಾಗವಹಿಸಿದ್ದರು. ಸಚಿವ ಶಿವರಾಜ್ ತಂಗಡಗಿ, ಶಾಸಕರಾದ ಮುನಿರತ್ನ, ಸಲೀಂ ಅಹ್ಮದ್, ಎಚ್.ಎಂ. ರೇವಣ್ಣ ಮತ್ತಿತರರು ಭಾಗವಹಿಸಿದ್ದರು.




# ಉದ್ಯೋಗ, ಗೌರವದ ಬದುಕಿಗೆ ಶಿಕ್ಷಣ ದಾರಿಯಾಗಬೇಕು
## ಕೆರಿಯರ್ ಶೃಂಗಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು, ಮೇ 15:** ಕಲಿಕೆಯು ಯುವಜನತೆಗೆ ಕೌಶಲ್ಯ, ಅವಕಾಶ ಮತ್ತು ಗೌರವಯುತ ಜೀವನೋಪಾಯವನ್ನು ಒದಗಿಸುವಂತಿರಬೇಕು. ಶಿಕ್ಷಣ ಮತ್ತು ಉದ್ಯೋಗದ ನಡುವಿನ ಅಂತರವನ್ನು ಕಡಿಮೆ ಮಾಡಲು ರಾಜ್ಯ ಸರ್ಕಾರ ಶ್ರಮಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಉನ್ನತ ಶಿಕ್ಷಣ ಇಲಾಖೆಯ ಆಶ್ರಯದಲ್ಲಿ ಆಯೋಜಿಸಲಾದ ಎರಡು ದಿನಗಳ 'ಕ್ಯಾಂಪಸ್ ಟು ಕೆರಿಯರ್' ಶೃಂಗಸಭೆಯನ್ನು ಶುಕ್ರವಾರ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣವನ್ನು ಆರ್ಥಿಕತೆಯ ಅಗತ್ಯಗಳಿಗೆ ಅನುಗುಣವಾಗಿ ರೂಪಿಸಲು ವಿಶ್ವವಿದ್ಯಾಲಯಗಳು, ಕೈಗಾರಿಕೆಗಳು ಮತ್ತು ಸರ್ಕಾರದ ನಡುವೆ ಬಲವಾದ ಸಹಯೋಗದ ಅಗತ್ಯವಿದೆ ಎಂದು ಒತ್ತಿ ಹೇಳಿದರು.

"ಕರ್ನಾಟಕದ ಬೆಳವಣಿಗೆಯನ್ನು ಉಳಿಸಿಕೊಳ್ಳಲು ಈ ಮೂರು ಸ್ತಂಭಗಳು ಒಟ್ಟಾಗಿ ಕೆಲಸ ಮಾಡಬೇಕು. ಆಗ ಮಾತ್ರ ಶಿಕ್ಷಣವು ಮಾರುಕಟ್ಟೆಯ ನೈಜ ಅಗತ್ಯಗಳನ್ನು ಪ್ರತಿಬಿಂಬಿಸಲು ಸಾಧ್ಯ," ಎಂದು ಅವರು ಹೇಳಿದರು.




### ಸಿಎಂ ಭಾಷಣದ ಪ್ರಮುಖ ಅಂಶಗಳು

**ಸಾಮಾಜಿಕ ಬದಲಾವಣೆಯ ಸಾಧನ:** ಬಿ.ಆರ್. ಅಂಬೇಡ್ಕರ್ ಅವರು ಶಿಕ್ಷಣವನ್ನು ಸಾಮಾಜಿಕ ಬದಲಾವಣೆ ಮತ್ತು ಸಬಲೀಕರಣದ ಪ್ರಬಲ ಸಾಧನ ಹಾಗೂ ಮೂಲಭೂತ ಹಕ್ಕು ಎಂದು ಪರಿಗಣಿಸಿದ್ದರು ಎಂಬುದನ್ನು ಮುಖ್ಯಮಂತ್ರಿಗಳು ಸ್ಮರಿಸಿದರು.

**ಆರ್ಥಿಕ ಪ್ರಗತಿ:** ಕರ್ನಾಟಕವು ಇಂದು 30.7 ಲಕ್ಷ ಕೋಟಿ ಜಿಎಸ್‌ಡಿಪಿ ಹೊಂದಿದೆ. ಬೆಂಗಳೂರು 875 ಜಾಗತಿಕ ಸಾಮರ್ಥ್ಯ ಕೇಂದ್ರಗಳಿಗೆ ನೆಲೆಯಾಗಿದ್ದು, ವಿಶ್ವದ ಪ್ರಮುಖ ತಂತ್ರಜ್ಞಾನ ತಾಣಗಳಲ್ಲಿ ಒಂದಾಗಿದೆ.

**ಶೈಕ್ಷಣಿಕ ಪರಿಸರ:** ಪ್ರತಿ ಲಕ್ಷ ಜನಸಂಖ್ಯೆಗೆ 66 ಕಾಲೇಜುಗಳನ್ನು ಹೊಂದುವ ಮೂಲಕ ಕರ್ನಾಟಕವು ದೇಶದಲ್ಲೇ ಮುಂಚೂಣಿಯಲ್ಲಿದೆ. ಕೇವಲ ಪ್ರವೇಶಾತಿ ಸಂಖ್ಯೆಗಿಂತ ವಿದ್ಯಾರ್ಥಿಗಳ ಉದ್ಯೋಗಾರ್ಹತೆಯ ಫಲಿತಾಂಶ ಮುಖ್ಯ ಎಂದು ಅವರು ಹೇಳಿದರು.

**ಸರ್ಕಾರಿ ಉಪಕ್ರಮಗಳು:** 'ಯುವ ನಿಧಿ' ಯೋಜನೆಯ ಮೂಲಕ ಪದವೀಧರರಿಗೆ ಆರ್ಥಿಕ ನೆರವು ಮತ್ತು ಆಧುನಿಕ ಕೌಶಲ್ಯ ತರಬೇತಿಯನ್ನು ನೀಡಲಾಗುತ್ತಿದೆ.

**ಭವಿಷ್ಯದ ಯೋಜನೆಗಳು:** ರಾಜ್ಯದ ಕೈಗಾರಿಕಾ ನೀತಿಯು 20 ಲಕ್ಷ ಉದ್ಯೋಗಗಳನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ. ಅಲ್ಲದೆ, ಬೆಂಗಳೂರಿನ ಸಮೀಪ 40,000 ಕೋಟಿ ರೂ. ವೆಚ್ಚದ 'ಕ್ವಿನ್ ಸಿಟಿ' ಜ್ಞಾನ, ಕ್ಷೇಮ ಮತ್ತು ನಾವೀನ್ಯತೆಗಳನ್ನು ಸಂಯೋಜಿಸಿ ಭವಿಷ್ಯದ ಅವಕಾಶಗಳನ್ನು ಸೃಷ್ಟಿಸಲಿದೆ. ಸಮಾವೇಶದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ್, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹಾಗೂ ಐಟಿ ಸಚಿವ ಪ್ರಿಯಾಂಕ್ ಖರ್ಗೆ ಉಪಸ್ಥಿತರಿದ್ದರು.

# ನಿವಾಸದಲ್ಲೇ 67ನೇ ಜನ್ಮದಿನ ಆಚರಿಸಿಕೊಂಡ ಡಿಸಿಎಂ ಡಿಕೆಶಿ

**ಬೆಂಗಳೂರು, ಮೇ 15:** ನಾಯಕತ್ವ ಬದಲಾವಣೆ ವದಂತಿಗಳ ನಡುವೆ ಡಿಸಿಎಂ ಡಿ.ಕೆ. ಶಿವಕುಮಾರ್ ಇಂದು ಮೇ 15 ಶುಕ್ರವಾರ 64ನೇ ಹುಟ್ಟುಹಬ್ಬ ಆಚರಿಸಿಕೊಂಡಿದ್ದಾರೆ. ಬೆಂಗಳೂರಿನ ಸದಾಶಿವನಗರದಲ್ಲಿರುವ ಅವರ ನಿವಾಸದ ಹೊರಗೆ ಅರ್ಚಕರು ವೇದ ಮಂತ್ರಗಳನ್ನು ಘೋಷಿಸಿ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಿ.ಕೆ. ಶಿವಕುಮಾರ್, ನನಗೆ ಇಂದು ಹುಟ್ಟುಹಬ್ಬ ಆಚರಿಸುವ ಇಚ್ಛೆಯಿರಲಿಲ್ಲ. ತಪ್ಪಿಸಲು ಬಯಸಿದ್ದೆ. ಅದಕ್ಕಾಗಿಯೇ ನಿನ್ನೆ ಮುಂಬೈನಲ್ಲಿ ಊರಿನ ಹೊರಗಿದ್ದೆ. ಇಂದೂ ಇದನ್ನು ತಪ್ಪಿಸಲು ಪ್ರಯತ್ನಿಸಿದ್ದೆ. ಆದರೆ ರಾತ್ರಿಯಿಂದಲೇ ಕಾರ್ಯಕರ್ತರು ಕಾಯುತ್ತಿದ್ದರು. ನನ್ನ ಸ್ನೇಹಿತರು, ನಾಯಕರು, ಶಾಸಕರು, ಸಚಿವರು – ಎಲ್ಲರೂ ಕಾಯುತ್ತಿದ್ದರು. ಅವರ ಪ್ರೀತಿ, ವಿಶ್ವಾಸ, ಶುಭಾಶಯಗಳು ಮತ್ತು ಆಶೀರ್ವಾದಗಳನ್ನು ನಿರಾಕರಿಸಲು ಸಾಧ್ಯವಾಗಲಿಲ್ಲ ಎಂದರು.

ನನ್ನ ಪೋಸ್ಟರ್‌ಗಳನ್ನು ಹಾಕಬಾರದೆಂದು ನನ್ನ ಬೆಂಬಲಿಗರಿಗೆ ಸೂಚಿಸಿದ್ದೇನೆ ಹಾಗೂ ಅವನ್ನು ತೆರವುಗೊಳಿಸುವಂತೆ ಪಾಲಿಕೆಗೆ ತಿಳಿಸಿದ್ದೇನೆ ಎಂದರು. ನಾಯಕತ್ವ ಬದಲಾವಣೆ ಬಗ್ಗೆ ಪ್ರತಿಕ್ರಿಯಿಸಿದ ಡಿಕೆಶಿ, ಅಂತಹ ನಿರ್ಧಾರಗಳು ಪಕ್ಷದ ಹೈಕಮಾಂಡ್‌ಗೆ ಸೇರಿದ್ದು, ಯಾವುದೇ ಅಧಿಕೃತ ಘೋಷಣೆ ಇನ್ನೂ ಆಗಿಲ್ಲ ಎಂದು ಸ್ಪಷ್ಟಪಡಿಸಿದರು.



### ಬೆಲೆ ಏರಿಕೆ ಮೋದಿ ಕೊಡುಗೆ

ಬೆಲೆ ಏರಿಕೆ ಮೋದಿ ಅವರ ಕೊಡುಗೆ. ಅವರು ಬೇರೆ ರಾಷ್ಟ್ರಗಳ ಜೊತೆ ಉತ್ತಮ ಸಂಬಂಧ ಉಳಿಸಿಕೊಂಡು ಬಂದಿಲ್ಲ. ಅಂತರರಾಷ್ಟ್ರೀಯ ಬಿಕ್ಕಟ್ಟಿನ ಪರಿಸ್ಥಿತಿಯನ್ನು ಮೋದಿ ಅವರು ನಿಭಾಯಿಸುವಲ್ಲಿ ವಿಫಲರಾಗಿದ್ದಾರೆ. ಅದಕ್ಕೆ ಅವರು ವಿದ್ಯುತ್ ಉಳಿಸಿ, ಪೆಟ್ರೋಲ್ ಬಳಸಬೇಡಿ ಎಂದು ಹೇಳುತ್ತಿದ್ದಾರೆ. ಇಂಧನಗಳನ್ನು ಬಳಸದೇ ದಿನನಿತ್ಯ ಜೀವನ ಮಾಡುವುದು ಹೇಗೆ. ಅನೇಕರು ತಮ್ಮ ಬೆಂಗಾವಲು ಪಡೆ ವಾಹನಗಳನ್ನು ಕಡಿತ ಮಾಡಿದ್ದಾರೆ. ಇದು ಆಗಬಹುದು. ಆದರೆ ಜನಸಾಮಾನ್ಯ ಓಡಾಟ ಮಾಡದೇ ಇರಲು ಹೇಗೆ ಸಾಧ್ಯ. ಬದುಕಿಗಾಗಿ ಪ್ರಯಾಣ ಮಾಡಬೇಕಲ್ಲವೇ. ಚಿನ್ನ ಖರೀದಿ ಮಾಡಬೇಡಿ ಎಂದಿದ್ದಾರೆ ಇದು ಹೇಗೆ ಸಾಧ್ಯ. ವಿವಾಹಿತ ಮಹಿಳೆಯರಿಗೆ ಮಾಂಗಲ್ಯ ಸರ ಬೇಕು. ಹೀಗಿದ್ದಾಗ ಚಿನ್ನ ಕೊಂಡುಕೊಳ್ಳಬೇಡಿ ಎಂಬುದು ಹೇಗೆ ಸಾಧ್ಯ" ಎಂದರು.

### ನನ್ನ ಬಗ್ಗೆ ಟೀಕೆ ಮಾಡದಿದ್ದರೆ ಎಚ್‌ಡಿಕೆಗೆ ನೆಮ್ಮದಿ ಇಲ್ಲ

ಕುಮಾರಸ್ವಾಮಿ ಅವರು ನಮ್ಮ ಬಗ್ಗೆ ಟೀಕೆ ಮಾಡಲಿಲ್ಲ ಎಂದರೆ ರಾಜಕೀಯವಾಗಿ ಬದುಕಲು ಆಗುವುದಿಲ್ಲ. ನಾವು ಒಳ್ಳೆಯ ಕೆಲಸ ಮಾಡುತ್ತೇವೆ, ಅವರು ವಿರೋಧ ಮಾಡುತ್ತಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಕುಮಾರಸ್ವಾಮಿ ಮಾಡಿದ ಯೋಜನೆಯನ್ನೇ ನಾವು ಮುಂದುವರಿಸುತ್ತಿದ್ದೇವೆ. ರೈತರ ಬಳಿ ಮಾತನಾಡಲು ಸಮಯ, ದಿನಾಂಕ ನಿಗದಿ ಮಾಡಿಕೊಂಡು ಹೋಗುತ್ತೇನೆ. ರೈತರು ನನಗೆ ಎರಡೇಟು ಹೊಡೆಯಬಹುದು, ಬಟ್ಟೆ ಹರಿಯಬಹುದು, ಕಲ್ಲೆಸೆಬಹುದು, ಧಿಕ್ಕಾರ ಹಾಕಬಹುದು. ಅದಕ್ಕೆಲ್ಲಾ ಹೆದರಲು ಆಗುವುದಿಲ್ಲ. ಮುಂದೆ ಅವರ ಭವಿಷ್ಯ, ಮಕ್ಕಳ ಹಾಗೂ ಆಸ್ತಿಗಳ ಭವಿಷ್ಯ ಮುಖ್ಯ. ಇವತ್ತಲ್ಲ ಮುಂದಿನ 20 ವರ್ಷಗಳ ನಂತರ ಬಿಡದಿ, ಬೆಂಗಳೂರು ದಕ್ಷಿಣದ ಜನರು ನನ್ನನ್ನು ನೆನಪಿಸಿಕೊಳ್ಳುತ್ತಾರೆ ಎಂದರು. ಕುಮಾರಸ್ವಾಮಿ ಅವರೇ ಈ ಯೋಜನೆಯ ಭೂಮಿಯನ್ನು ಡಿನೊಟಿಫೈ ಮಾಡಬಹುದಿತ್ತಲ್ಲವೇ, ಯಾಕೆ ಮಾಡಲಿಲ್ಲ. ನಾನು ಡಿನೋಟಿಫೈ ಮಾಡಲು ತಯಾರಿಲ್ಲ. ಅವರು ಡಿನೋಟಿಫೈ ಮಾಡಿ ಎಷ್ಟು ಅನುಭವಿಸುತ್ತಿದ್ದಾರೆ ಎಂದು ಅವರಿಗೆ ಗೊತ್ತು.

**ಅನಧಿಕೃತ ಕಟ್ಟಡಗಳು ನೆಲಸಮ, ಅಕ್ರಮದಲ್ಲಿ ಭಾಗಿಯಾದ ಅಧಿಕಾರಿಗಳ ವಿರುದ್ಧ ದೂರು ದಾಖಲಿಸಲು ಸೂಚನೆ**

# ಉಪಲೋಕಾಯುಕ್ತ ನೇತೃತ್ವದಲ್ಲಿ 229 ಕೆರೆ ಒತ್ತುವರಿ ತೆರವು

**ಬೆಂಗಳೂರು, ಮೇ 15:** ದಾವಣಗೆರೆ ಜಿಲ್ಲೆಯ 508 ಎಕರೆ 38 ಗುಂಟೆ ವಿಸ್ತೀರ್ಣದ ಜಗಳೂರು ಕೆರೆಯ ಆರು ಎಕರೆಗಳಲ್ಲಿ ಹರಡಿಕೊಂಡಿದ್ದ 229 ಒತ್ತುವರಿಗಳನ್ನು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ ವೀರಪ್ಪ ಅವರು ಸ್ವಯಂಪ್ರೇರಿತವಾಗಿ ತೆರವುಗೊಳಿಸಿದ್ದು, ಅಧಿಕಾರಿಗಳು ಮನೆಗಳು, ಅಂಗಡಿಗಳು ಮತ್ತು ಇತರ ಅಕ್ರಮ ಕಟ್ಟಡಗಳನ್ನು ನೆಲಸಮ ಮಾಡಿದ್ದಾರೆ.

ಆರು ಎಕರೆ ಕೆರೆ ಭೂಮಿಯಲ್ಲಿ ಅಕ್ರಮವಾಗಿ ನಿವೇಶನಗಳನ್ನು ರಚಿಸಲು ಜಗಳೂರು ಪಟ್ಟಣ ಪಂಚಾಯತ್ನ ಯಾವ ಮುಖ್ಯ ಅಧಿಕಾರಿಗಳು ಕಾರಣ ಮತ್ತು ಕರ್ನಾಟಕ ಭೂ ಕಂದಾಯ ನಿಯಮಗಳು ಮತ್ತು ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಕಾಯ್ದೆಯನ್ನು ಉಲ್ಲಂಘಿಸಿ ಆ ನಿವೇಶನಗಳನ್ನು ಯಾರು ವಿತರಿಸಿದ್ದಾರೆ ಎಂಬುದನ್ನು ಗುರುತಿಸಿದ ಉಪ ಲೋಕಾಯುಕ್ತರು, ಭಾಗಿಯಾದ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಉಳಿದ 50 ಒತ್ತುವರಿಗಳಿಗೆ ಸಂಬಂಧಿಸಿದಂತೆ ಹೈಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಗಳನ್ನು ವಿಲೇವಾರಿ ಮಾಡಿದ ನಂತರ ಕ್ರಮ ಕೈಗೊಳ್ಳಬೇಕು. ಈ ಒತ್ತುವರಿದಾರರು ತಮ್ಮ ನಿವೇಶನಗಳನ್ನು ತೆರವುಗೊಳಿಸುವುದರ ವಿರುದ್ಧ ನ್ಯಾಯಾಲಯದ ಮೆಟ್ಟಿಲೇರಿ ಮಧ್ಯಂತರ ಆದೇಶ ಪಡೆದುಕೊಂಡಿದ್ದಾರೆ ಮತ್ತು 2026ರ ಜುಲೈ 28 ರೊಳಗೆ ಕ್ರಮ ಕೈಗೊಂಡ ವರದಿ ಸಲ್ಲಿಸಬೇಕು ಎಂದು ಉಪ ಲೋಕಾಯುಕ್ತರು ಆದೇಶದಲ್ಲಿ ತಿಳಿಸಿದ್ದಾರೆ.

ಜಗಳೂರು ಕೆರೆಯು ಒತ್ತುವರಿ ಮತ್ತು ಮಾಲಿನ್ಯದಿಂದ ನಾಶವಾಗುತ್ತಿದೆ ಎಂಬ ಮಾಧ್ಯಮ ವರದಿಯನ್ನು ಸ್ವಯಂಪ್ರೇರಿತವಾಗಿ ಸ್ವೀಕರಿಸಿದ್ದ ನ್ಯಾಯಮೂರ್ತಿ ವೀರಪ್ಪ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಸೆಕ್ಷನ್ 2(10) ರ ಅಡಿಯಲ್ಲಿ ಇದು ದುರಾಡಳಿತಕ್ಕೆ ಸಮನಾಗಿದ್ದು, ದಾವಣಗೆರೆ ಸಹಾಯಕ ಆಯುಕ್ತರಿಂದ ಹಿಡಿದು ಜಗಳೂರು ಪಟ್ಟಣ ಪಂಚಾಯತ್ ಮುಖ್ಯ ಅಧಿಕಾರಿಗಳವರೆಗೆ 11 ಅಧಿಕಾರಿಗಳ ವಿರುದ್ಧ 2025ರ ಜುಲೈನಲ್ಲಿ ಪ್ರಕರಣ ದಾಖಲಿಸಿದ್ದರು. ಆರೋಗ್ಯಕರ ವಾತಾವರಣದಲ್ಲಿ ವಾಸಿಸುವ ಹಕ್ಕನ್ನು ಜನರು ಹೊಂದಿದ್ದಾರೆ ಮತ್ತು ಕೆರೆಗಳು ಮತ್ತು ಜಲಮೂಲಗಳನ್ನು ರಕ್ಷಿಸುವ ಜವಾಬ್ದಾರಿಯನ್ನು ಪಂಚಾಯತ್ ಅಧಿಕಾರಿಗಳು ಹೊಂದಿದ್ದಾರೆ ಎನ್ನುವ ಸುಪ್ರೀಂ ಕೋರ್ಟ್ನ ತೀರ್ಪುಗಳನ್ನು ಉಲ್ಲೇಖಿಸಿದ ಅವರು, ಈ ಕರ್ತವ್ಯಗಳನ್ನು ಸರಿಯಾಗಿ ನಿರ್ವಹಿಸುವಲ್ಲಿ ವಿಫಲವಾಗಿರುವ ಪಟ್ಟಣ ಯೋಜನಾ ಅಧಿಕಾರಿಗಳನ್ನು ಟೀಕಿಸಿದರು.

ಸ್ವಯಂಪ್ರೇರಿತ ಪ್ರಕರಣ ಮತ್ತು ನಂತರದ ಆದೇಶಗಳಿಗೆ ಪ್ರತಿಯಾಗಿ ಅನುಸರಣಾ ವರದಿಯನ್ನು ಸಲ್ಲಿಸುವಾಗ, ಕೆರೆಯ ಒತ್ತುವರಿ ತೆರವುಗೊಳಿಸಲು ಹೈಕೋರ್ಟ್ ನೀಡಿದ ಆದೇಶದ ಬಗ್ಗೆ ಅಧಿಕಾರಿಗಳು ಉಪ ಲೋಕಾಯುಕ್ತಕ್ಕೆ ಮಾಹಿತಿ ನೀಡಿದ್ದಾರೆ ಮತ್ತು 50 ಒತ್ತುವರಿಗಳಿಗೆ ಸಂಬಂಧಿಸಿದ ಮಧ್ಯಂತರ ಆದೇಶವನ್ನು ತೆರವುಗೊಳಿಸಲು ಆಕ್ಷೇಪಣೆಗಳನ್ನು ಸಲ್ಲಿಸಿರುವುದಾಗಿ ತಿಳಿಸಿದ್ದಾರೆ.ಜಗಳೂರು ಪಟ್ಟಣ ಪಂಚಾಯತ್ ಮುಖ್ಯ ಅಧಿಕಾರಿ, ಕೆರೆಯ ಒತ್ತುವರಿ ಮತ್ತು ತ್ಯಾಜ್ಯ ಸುರಿಯುವುದನ್ನು ವಿರೋಧಿಸಿ ಫಲಕಗಳನ್ನು ಅಳವಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಅಲ್ಲದೆ, ಕೆರೆಗೆ ಕೊಳಚೆ ನೀರು ಸೇರುವುದನ್ನು ತಡೆಯಲು, ಕೊಳಚೆ ನೀರು ಸಂಸ್ಕರಣಾ ಘಟಕಕ್ಕೆ ಮೂರು ವೆಟ್‌ವೆಲ್‌ಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದ್ದು, ಮಲ ಕೆಸರು ಸಂಸ್ಕರಣಾ ಘಟಕದ ಕೆಲಸ ಪ್ರಾರಂಭವಾಗಿದೆ.

ಇದನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದ್ದಾರೆ. ಮತ್ತೊಂದೆಡೆ, ದಾವಣಗೆರೆಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಉಪ ವಿಭಾಗದ ಕಾರ್ಯನಿರ್ವಾಹಕ ಎಂಜಿನಿಯರ್, ಕೆರೆ ಪ್ರದೇಶದಲ್ಲಿ ಅಕ್ರಮವಾಗಿ ನಿರ್ಮಿಸಲಾದ ಮನೆಗಳನ್ನು ಕೆಡವಲು ಹೈಕೋರ್ಟ್ ಆದೇಶ ನೀಡಿದೆ ಎಂದು ಉಪ ಲೋಕಾಯುಕ್ತಕ್ಕೆ ಮಾಹಿತಿ ನೀಡಿದರು.

ಅದರಂತೆ, ಕಾನೂನುಬದ್ಧ ಕಾರ್ಯವಿಧಾನವನ್ನು ಅನುಸರಿಸಿದ ನಂತರ, ಮಾರ್ಚ್ 5, 2026 ರಂದು ಜಂಟಿ ಕಾರ್ಯಾಚರಣೆ ನಡೆಸಲಾಯಿತು ಮತ್ತು ಹೈಕೋರ್ಟ್‌ನಲ್ಲಿ ಬಾಕಿ ಇರುವ ವಿಷಯಗಳಿಗೆ ಸಂಬಂಧಿಸಿದಂತೆ 50 ಒತ್ತುವರಿಗಳನ್ನು ಹೊರತುಪಡಿಸಿ, 229 ಒತ್ತುವರಿಗಳನ್ನು ತೆರವುಗೊಳಿಸಲಾಗಿದೆ ಎಂದರು. ಬಾಕಿ ಇರುವ ವಿಷಯಗಳನ್ನು ಜುಲೈನಲ್ಲಿ ವಿಚಾರಣೆ ಕೈಗೆತ್ತಿಕೊಳ್ಳಲಿದೆ.

# ರೈಲು ನಿಲ್ದಾಣದಲ್ಲಿ 16 ಕೆ.ಜಿ.ಗಾಂಜಾ ಪತ್ತೆ

**ಬೆಂಗಳೂರು, ಮೇ 15:** ರಾಜ್ಯದಲ್ಲಿ ಮಾದಕ ವಸ್ತುಗಳ ವಿರುದ್ಧ ಪೊಲೀಸರು ಕಾರ್ಯಾಚಾರಣೆ ಚುರುಕುಗೊಳಿಸಿದ್ದಾರೆ. ಬೆಂಗಳೂರಿನ ಯಶವಂತಪುರ ರೈಲ್ವೆ ನಿಲ್ದಾಣದಲ್ಲಿ 13 ಕೆಜಿಗೂ ಅಧಿಕ ಗಾಂಜಾ ಪತ್ತೆಯಾಗಿದೆ. ಮತ್ತೊಂದೆಡೆ ಮಂಗಳೂರಿನಲ್ಲಿ ನಡೆದ ಪೊಲಿಸರ ಕಾರ್ಯಾಚರಣೆಯಲ್ಲಿ ಗಾಂಜಾ ಸಮೇತ ಆರೋಪಿಯೊಬ್ಬ ಸಿಕ್ಕಿ ಬಿದ್ದಿರುವ ಘಟನೆ ನಡೆದಿದೆ. ಎರಡೂ ಪ್ರಕರಣಗಳಲ್ಲಿ ಒಟ್ಟು 16 ಕೆಜಿ ಗಾಂಜಾ ಜಪ್ತಿ ಮಾಡಲಾಗಿದೆ. ಬೆಂಗಳೂರಿನ ಯಶವಂತಪುರ ರೈಲ್ವೆ ನಿಲ್ದಾಣದಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ರೈಲ್ವೆ ಪ್ಲಾಟ್‌ಫಾರ್ಮ್‌ನಲ್ಲಿ ಅನಾಮಧೇಯವಾಗಿ ಬಿಟ್ಟು ಹೋಗಿದ್ದ ಚೀಲವನ್ನು ತಪಾಸಣೆ ನಡೆಸಿದಾಗ 13.41 ಕೆಜಿ ಗಾಂಜಾ ಪತ್ತೆಯಾಗಿದೆ. ಇದರ ಮೌಲ್ಯ ಸುಮಾರು 25 ಲಕ್ಷ ರೂಪಾಯಿ ಎಂದು ಅಂದಾಜಿಸಲಾಗಿದೆ. ಅಬಕಾರಿ ಅಧಿಕಾರಿಗಳು ಸಾಮಾನ್ಯ ತಪಾಸಣೆ ನಡೆಸುತ್ತಿದ್ದ ವೇಳೆ ಸಿಕ್ಕಿಬೀಳುವ ಭೀತಿಯಿಂದ ಪೆಡ್ಲರ್‌ಗಳು ಗಾಂಜಾ ಚೀಲವನ್ನು ಅಲ್ಲಿಯೇ ಬಿಟ್ಟು ಪರಾರಿಯಾಗಿದ್ದಾರೆ ಎನ್ನಲಾಗಿದೆ. ಸದ್ಯ ಅಧಿಕಾರಿಗಳು ರೈಲ್ವೆ ನಿಲ್ದಾಣದ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುವ ಮೂಲಕ ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

ಮಂಗಳೂರಿನ ಮೇರಿಹಿಲ್ ಬಳಿ ಗಾಂಜಾ ಮಾರಾಟ ಮಾ ಡಲು ಯತ್ನಿಸುತ್ತಿದ್ದ ಆರೋಪಿಯನ್ನು ಕಾವೂರು ಠಾಣೆ ಪೊಲೀಸರು ಬಂಧಿಸಿದ್ದಾರೆ. ಉಳ್ಳಾಲ ಮುಕ್ಕಚೇರಿ ನಿವಾಸಿ ಇರ್ಷಾದ್ ಬಂಧಿತ ಆರೋಪಿ. ಬಂಧಿತನಿಂದ ಅಂದಾಜು 1.56 ಲಕ್ಷ ರೂ. ಮೌಲ್ಯದ 3.13 ಕೆಜಿ ಗಾಂಜಾ, ಕೃತ್ಯಕ್ಕೆ ಬಳಸಿದ್ದ ಸ್ಕೂಟರ್ ಹಾಗೂ ಮೊಬೈಲ್ ಫೋನ್ ಅನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕಾವೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಆರ್ಟ್ ಆಫ್ ಗಿವಿಂಗ್‌ನ 13ನೇ ವಾರ್ಷಿಕೋತ್ಸವ: ಸಾಧಕರಿಗೆ ಸನ್ಮಾನ

**ಬೆಂಗಳೂರು, ಮೇ 15:** ಆರ್ಟ್ ಆಫ್ ಗಿವಿಂಗ್‌ನ 13ನೇ ವಾರ್ಷಿಕೋತ್ಸವ ಇದೇ 17 ರಂದು ನಗರದ ಗಾಂಧಿ ಭವನದಲ್ಲಿ ನಡೆಯಲಿದೆ. ಸಾಧಕರಿಗೆ ಸನ್ಮಾನ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಡಿಶಾ ಭುವನೇಶ್ವರದ ಕಳಿಂಗಾ ಇನ್ಸ್‌ಟಿಟ್ಯೂಟ್ ಆಫ್ ಇಂಡಸ್ಟ್ರೀಯಲ್ ಟೆಕ್ನಾಲಜಿ, ಕಳಿಂಗಾ ಇನ್ಸ್‌ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸ್‌ನ ಸಂಸ್ಥಾಪಕರು ಹಾಗೂ ಸಂಸತ್ತಿನ ಮಾಜಿ ಸದಸ್ಯರಾದ ಡಾ.ಅಚ್ಯುತ ಸಮಂತಾ ಅವರು ಆರಂಭಿಸಿದ ಆರ್ಟ್ ಆಫ್ ಗಿವಿಂಗ್‌ನ ವಾರ್ಷಿಕೋತ್ಸವ ಕಳೆದ 13 ವರ್ಷಗಳಿಂದ ನಗರದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ದಾನದ ಮಹತ್ವವನ್ನು ತಿಳಿಸಲು, ದಾನವನ್ನು ಪ್ರೇರೇಪಿಸಲು ಆರಂಭಿಸಿದ ಈ ಉಪಕ್ರಮವು ವಿಶ್ವದ ಹಲವು ರಾಷ್ಟ್ರಗಳಿಗೆ ಹಬ್ಬಿದೆ. ವಿಶ್ವದಾದ್ಯಂತ ಮೇ 17 ರಂದು ಇದರ ಸಂಸ್ಥಾಪನಾ ದಿನವನ್ನು ಆಚರಿಸಲಾಗುತ್ತದೆ. ಪ್ರತಿ ವರ್ಷ ಒಂದೊಂದು ವಿಷಯದ ಮೇಲೆ ಆಚರಿಸಲಾಗುತ್ತದೆ. ಇದೇ ರೀತಿ ಈ ಬಾರಿ ಶೇರ್ ಟು ಶೈನ್ ಎಂಬ ಥೀಮ್‌ನಲ್ಲಿ ಆಚರಿಸಲಾಗುತ್ತದೆ.

ಶಾಂತಿ ಮತ್ತು ಸಂತೋಷದ ನಿಜವಾದ ಸಾರವು ಪ್ರತಿಯೊಬ್ಬ ವ್ಯಕ್ತಿಯೊಳಗಿನ ದಾನದ ಮನೋಭಾವವನ್ನು ಜಾಗೃತಗೊಳಿಸುವುದರಲ್ಲಿದೆ. ಆರ್ಟ್ ಆಫ್ ಗಿವಿಂಗ್ ಎನ್ನುವುದು ವಿಶ್ವದಾದ್ಯಂತ ದಾನದ ಸಂಸ್ಕೃತಿಯನ್ನು ಪ್ರೇರೇಪಿಸುವ, ಪೋಷಿಸುವ ಮತ್ತು ಉತ್ತೇಜಿಸಲು ಮೀಸಲಾದ ಒಂದು ಉಪಕ್ರಮವಾಗಿದೆ.




ಗಾಂಧಿ ಭವನದಲ್ಲಿ ಬೆಳಗ್ಗೆ 10.00 ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಬೆಳಗ್ಗೆ 11.30 ರಿಂದ ಮುಖ್ಯ ಕಾರ್ಯಕ್ರಮ ನಡೆಯಲಿವೆ. ಮೊದಲಿಗೆ ಎಒಜಿ ಸಂಸ್ಥಾಪಕರಾದ ಅಚ್ಯುತ ಸಮಂತ ಅವರ ವಿಶೇಷ ವೀಡಿಯೊ ಸಂದೇಶವಿರಲಿದೆ.

ನಂತರ ಖ್ಯಾತ ಗಾಯಕಿ ಸವಿತಕ್ಕ ಅವರಿಂದ ಜಾನಪದ ಸಂಗೀತ ಕಾರ್ಯಕ್ರಮ, ನೃತ್ಯ ಪ್ರದರ್ಶನ ಇರಲಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರಿಗೆ, ಸಮಾಜದ ಒಳಿತಿಗಾಗಿ ದುಡಿದವರಿಗೆ ಗೌರವ ಸಮರ್ಪಣೆ ನಡೆಯಲಿದೆ.

ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳು ಹಾಗೂ ನಿವೃತ್ತ ಲೋಕಾಯುಕ್ತರಾದ ಎನ್ ಸಂತೋಷ್ ಹೆಗ್ಡೆ, ಒಡಿಶಾ ಹೈಕೋರ್ಟ್‌ನ ಕೃಷ್ಣ ಎಸ್. ದೀಕ್ಷಿತ್, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ ಅಧ್ಯಕ್ಷರಾದ ರಾಕೇಶ್ ಸಿಂಗ್, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ. ವೆಂಕಟೇಶ್, ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷರಾದ ಡಾ. ವೋಡೇ ಪಿ. ಕೃಷ್ಣ, ಚಿತ್ರ ನಿರ್ಮಾಪಕರು ಹಾಗೂ ನಿರ್ದೇಶಕರಾದ ಪಿ ಶೇಷಾದ್ರಿ ಹಾಗೂ ಅಂತರರಾಷ್ಟ್ರೀಯ ಖ್ಯಾತಿಯ ಜಾನಪದ ಗಾಯಕಿ ಸವಿತಕ್ಕ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಈ ಸಮಾರಂಭದಲ್ಲಿ ಶಿಕ್ಷಣ, ವೃತ್ತಿ ಕೌಶಲ್ಯ ತರಬೇತಿ, ಉದ್ಯಮಶೀಲತೆಯ ಪರಿಣತರಾದ ಡಾ. ಎ. ಎಂ. ಸುರೇಶ್, ಕಾರ್ಪೊರೇಟ್ ವ್ಯವಹಾರ ಮತ್ತು ಬ್ರ್ಯಾಂಡಿಂಗ್ ತಂತ್ರಜ್ಞರು, ಸ್ಟಾರ್ಟ್ ಅಪ್ ಸಲಹೆಗಾರರಾದ ಪ್ರಣಬ್ ಕೆ ಪಣಿ, ಭರತನಾಟ್ಯ ಮತ್ತು ಶಿಕ್ಷಣದ ಮೂಲಕ ಯುವ ಪ್ರತಿಭೆಗಳ ಪ್ರೋತ್ಸಾಹಕಿ ಹೆಚ್. ವಿ. ಹೇಮಲತಾ, ಕಂಠದಾನ ಕಲಾವಿದ ಮಾರುತೇಶ್, ಗ್ರಾಮೀಣ ಪ್ರದೇಶದಲ್ಲಿ ದೇವಸ್ಥಾನ ಸಂಸ್ಕೃತಿಯ ಪೋಷಕ ರಾಘವೇಂದ್ರ ಟಿ ವಿ, ಸಿಂಗಿಂಗ್ ಬೌಲ್ ಥೆರಪಿ ಪರಿಣತರು ಮತ್ತು ಸೌಂಡ್ ಹೀಲಿಂಗ್ ಸಂಶೋಧಕ ಕೆ. ರಾಕೇಶ್, ಸೃಜನಶೀಲ ಮತ್ತು ವೃತ್ತಿಪರ ಕ್ಷೇತ್ರಗಳಲ್ಲಿ ಪರಿಣತೆ ಸೀಮಾ ಮುರಳೀಧರ್ ಹಾಗೂ ನಿವೃತ್ತ ಸರ್ವೆ ಸೂಪರ್ ವೈಜರ್ ಶಶಿಧರ್ ವೈ ಬಿ ಅವರನ್ನು ಸನ್ಮಾನಿಸಲಾಗುತ್ತದೆ.

# ಜನಗಣತಿ ಅಭಿಯಾನಕ್ಕೆ ಬೆಂಗಳೂರಿಗರಿಂದ ಸ್ಪಂದನೆ

**ಬೆಂಗಳೂರು, ಮೇ 15:** ಕೇಂದ್ರ ಸರ್ಕಾರದ ಜನಗಣತಿ ಅಭಿಯಾನಕ್ಕೆ ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ನಾಗರಿಕರಿಂದ ಭಾರೀ ಪ್ರಮಾಣದ ಸ್ಪಂದನೆ ವ್ಯಕ್ತವಾಗಿದ್ದು, ನಗರದ ಗಣತಿ ಕಾರ್ಯ ಶೇ.99.96ರಷ್ಟು ಪೂರ್ಣಗೊಂಡಿದೆ. ಕಳೆದ ತಿಂಗಳ 15ರಿಂದ ಆರಂಭವಾಗಿದ್ದ ಜನಗಣತಿ ಕಾರ್ಯ ಇಂದು ಅಂತಿಮ ಹಂತ ತಲುಪಿದ್ದು, ಸಂಜೆ ವೇಳೆಗೆ ಶೇ.100ರಷ್ಟು ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಅಧಿಕಾರಿಗಳು ತಿಳಿಸಿದ್ದಾರೆ. ದೇಶದ ಮಟ್ಟದಲ್ಲಿ ಶೇಕಡಾವಾರು ಆಧಾರದ ಮೇಲೆ ಅತ್ಯಧಿಕ ಜನಗಣತಿ ಪೂರ್ಣಗೊಳಿಸಿದ ರಾಜ್ಯವಾಗಿ ಕರ್ನಾಟಕ ಹೊರಹೊಮ್ಮಿದ್ದು, ಅದರಲ್ಲಿ ಬೆಂಗಳೂರಿನ ಪಾತ್ರ ಮಹತ್ವದ್ದಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿಯೂ ಜನರಿಂದ ಉತ್ತಮ ಸಹಕಾರ ದೊರೆತಿದ್ದು, ಇದುವರೆಗೆ ಶೇ.99.96ರಷ್ಟು ಮಂದಿ ಗಣತಿ ಕಾರ್ಯದಲ್ಲಿ ಭಾಗವಹಿಸಿ ಮಾಹಿತಿ ನೀಡಿದ್ದಾರೆ. ಮನೆಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ಕಾರ್ಯದ ಜೊತೆಗೆ ಸಾಮಾಜಿಕ ಜಾಲತಾಣಗಳ ಮೂಲಕ ನಡೆಸಿದ ಜಾಗೃತಿ ಅಭಿಯಾನವೂ ಪರಿಣಾಮಕಾರಿಯಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಆರಂಭದಲ್ಲಿ ಡೇಟಾ ಗೌಪ್ಯತೆ ಕುರಿತಾಗಿ ಕೆಲ ನಾಗರಿಕರಲ್ಲಿ ಆತಂಕ ವ್ಯಕ್ತವಾಗಿದ್ದರೂ, ಸರ್ಕಾರ ಹಾಗೂ ಜಿಬಿಎ ಅಧಿಕಾರಿಗಳು ಸಮರ್ಪಕ ಮಾಹಿತಿ ನೀಡಿ ವಿಶ್ವಾಸ ಮೂಡಿಸಿದ ಪರಿಣಾಮ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸ್ವಯಂಪ್ರೇರಿತರಾಗಿ ಭಾಗವಹಿಸಿದ್ದಾರೆ ಎನ್ನಲಾಗಿದೆ.ನಗರದ ಜನತೆಗೆ ಹಾಗೂ ಗಣತಿ ಕಾರ್ಯದಲ್ಲಿ ತೊಡಗಿದ್ದ ಸಿಬ್ಬಂದಿ, ಅಧಿಕಾರಿಗಳಿಗೆ ಜಿಬಿಎ ಹಿರಿಯ ಅಧಿಕಾರಿಗಳು ಧನ್ಯವಾದ ತಿಳಿಸಿದ್ದಾರೆ.

# ಮೂರು ದಿನ ಭಾರಿ ಮಳೆ ಸಾಧ್ಯತೆ, ಬೆಂ.ನಗರ ಗ್ರಾಮಾಂತರದಲ್ಲಿ ಯೆಲ್ಲೋ ಅಲರ್ಟ್ ಘೋಷಣೆ

**ಬೆಂಗಳೂರು, ಮೇ 15:** ರಾಜಧಾನಿ ಬೆಂಗಳೂರು ಸೇರಿ ರಾಜ್ಯದಾದ್ಯಂತ ಮುಂದಿನ ಮೂರು ದಿನಗಳ ಕಾಲ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಮುಂದಿನ ಮೂರು ದಿನಗಳ ಅವಧಿಗೆ 'ಯಲ್ಲೋ ಅಲರ್ಟ್' ಘೋಷಿಸಲಾಗಿದೆ. ಹವಾಮಾನ ಇಲಾಖೆಯ ತಜ್ಞರಾದ ಸಿ. ಎಸ್. ಪಾಟೀಲ್ ಅವರು ಈ ಕುರಿತು ಅಧಿಕೃತ ಮಾಹಿತಿ ಹಂಚಿಕೊಂಡಿದ್ದಾರೆ.

ರಾಜ್ಯದ ಕರಾವಳಿ ತೀರ ಮತ್ತು ಉತ್ತರ ಒಳನಾಡಿನ ಭಾಗಗಳಲ್ಲಿ ವಾಯುಭಾರ ಕುಸಿತ ಅಥವಾ ಹವಾಮಾನ ವೈಪರೀತ್ಯದ ಹಿನ್ನೆಲೆಯಲ್ಲಿ ವ್ಯಾಪಕ ಮಳೆಯಾಗುವ ಮುನ್ಸೂಚನೆ ಇದೆ. ಕರಾವಳಿಯ ಜಿಲ್ಲೆಗಳಲ್ಲಿ ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಸಾಧ್ಯತೆ ಇದ್ದು, ಮೀನುಗಾರರು ಮತ್ತು ಕರಾವಳಿ ನಿವಾಸಿಗಳು ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ. ಉತ್ತರ ಒಳನಾಡಿನ ಹಲವು ಜಿಲ್ಲೆಗಳಲ್ಲೂ ಮಳೆಯ ತೀವ್ರತೆ ಹೆಚ್ಚಿರಲಿದೆ ಎಂದು ಇಲಾಖೆ ತಿಳಿಸಿದೆ.

ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲದೆ, ದಕ್ಷಿಣ ಒಳನಾಡಿನ ಪ್ರಮುಖ ಜಿಲ್ಲೆಗಳಾದ ಚಾಮರಾಜನಗರ, ಚಿಕ್ಕಬಳ್ಳಾಪುರ, ಕೋಲಾರ, ಮೈಸೂರು, ತುಮಕೂರು, ಮಂಡ್ಯ ಮತ್ತು ರಾಮನಗರ (ಬೆಂಗಳೂರು ದಕ್ಷಿಣ ಭಾಗ ಒಳಗೊಂಡಂತೆ) ಜಿಲ್ಲೆಗಳಲ್ಲೂ ಮುಂದಿನ ಕೆಲವು ದಿನಗಳ ಕಾಲ ಉತ್ತಮ ಮಳೆಯಾಗಲಿದೆ. ಮಳೆಯ ಜೊತೆಗೆ ಗುಡುಗು ಮತ್ತು ಸಿಡಿಲಿನ ಆರ್ಭಟವೂ ಇರಲಿದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವುದು ಅಗತ್ಯವಾಗಿದೆ.

ಮಲೆನಾಡು ಮತ್ತು ಕರಾವಳಿ ಭಾಗದ ಜಿಲ್ಲೆಗಳಾದ ಚಿಕ್ಕಮಗಳೂರು, ಹಾಸನ, ಕೊಡಗು, ಶಿವಮೊಗ್ಗ, ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲೂ ವರುಣನ ಅಬ್ಬರ ಜೋರಾಗಿರಲಿದೆ. ಮಲೆನಾಡಿನ ಘಟ್ಟ ಪ್ರದೇಶಗಳಲ್ಲಿ ಮಳೆಯಿಂದಾಗಿ ರಸ್ತೆ ಸಂಚಾರಕ್ಕೆ ಅಡಚಣೆಯಾಗದಂತೆ ಸ್ಥಳೀಯ ಆಡಳಿತಗಳು ಅಲರ್ಟ್ ಆಗಿವೆ. ಇದರೊಂದಿಗೆ ಮಧ್ಯ ಕರ್ನಾಟಕದ ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲೂ ಮಳೆಯಾಗುವ ಸಾಧ್ಯತೆ ದಟ್ಟವಾಗಿದೆ.ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಾದ ಗದಗ, ಯಾದಗಿರಿ, ರಾಯಚೂರು, ಬಾಗಲಕೋಟೆ, ಕೊಪ್ಪಳ, ಧಾರವಾಡ, ಬಳ್ಳಾರಿ, ವಿಜಯನಗರ ಹಾಗೂ ಹಾವೇರಿ ಜಿಲ್ಲೆಗಳಲ್ಲೂ ಮುಂದಿನ ಮೂರು ದಿನಗಳ ಕಾಲ ಸಾಧಾರಣದಿಂದ ಭಾರಿ ಮಳೆಯಾಗಲಿದೆ ಎಂದು ಸಿ. ಎಸ್. ಪಾಟೀಲ್ ಅವರು ಸ್ಪಷ್ಟಪಡಿಸಿದ್ದಾರೆ. ಒಟ್ಟಾರೆಯಾಗಿ ಇಡೀ ರಾಜ್ಯಾದ್ಯಂತ ಮುಂಗಾರು ಚುರುಕುಗೊಂಡಿದ್ದು, ರೈತರಲ್ಲಿ ಹರ್ಷ ಮೂಡಿಸಿದೆ.

# ಚುನಾವಣೆ ಬೆನ್ನಲ್ಲೇ ಪೆಟ್ರೋಲ್–ಡೀಸೆಲ್ ದರ ಏರಿಕೆ
## ಕೇಂದ್ರ ಸರ್ಕಾರದ ಜನದ್ರೋಹಕ್ಕೆ ಸಿಪಿಐಎಂ ಖಂಡನೆ

**ಬೆಂಗಳೂರು, ಮೇ 15:** ಪಂಚ ರಾಜ್ಯಗಳ ಚುನಾವಣೆಯಲ್ಲಿ ಸಾಕಷ್ಟು ದಾಸ್ತಾನಿದೆ, ಜನ ಗಾಬರಿಗೊಳ್ಳಬೇಡಿ ಎಂದು ಯಾವ ಎಗ್ಗು ಸಿಗ್ಗಿಲ್ಲದೆ ಹೇಳುತ್ತಿದ್ದ ಮೋದಿ ಸರ್ಕಾರ, ಫಲಿತಾಂಶ ಬಂದೊಡನೆಯೇ ಪೆಟ್ರೋಲ್–ಡೀಸೆಲ್ ದರ ಏರಿಸಿ ಜನರ ಬೆನ್ನು ಮುರಿಯುವ ಕೆಲಸ ಮಾಡಿದೆ. ಇದಕ್ಕಿಂತ ದೊಡ್ಡ ಜನವಿರೋಧಿ ನಡೆ ಬೇರೆ ಇಲ್ಲ ಎಂದು ಸಿಪಿಐ(ಎಂ) ರಾಜ್ಯ ಸಮಿತಿ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

"ಅಮೆರಿಕಾ–ಇಸ್ರೇಲ್ ಸಾಮ್ರಾಜ್ಯಶಾಹಿಗಳ ದುರಾಕ್ರಮಣದಿಂದ ಹಲವೆಡೆ ಬಿಕ್ಕಟ್ಟು ಸೃಷ್ಟಿಯಾಗಿದೆ. ವಿವೇಕಯುತ ನಡೆಯೆಂದರೆ ಈ ಯುದ್ಧೋನ್ಮಾದಗಳ ವಿರುದ್ಧ ಇತರ ರಾಷ್ಟ್ರಗಳೊಂದಿಗೆ ಕೈಜೋಡಿಸಿ ಯುದ್ಧ ನಿಲ್ಲಿಸಲು ಪ್ರಯತ್ನಿಸುವುದಾಗಿತ್ತು. ಆದರೆ ಮೋದಿಯವರು ಅಮೆರಿಕಾದ ಹಿಂಬಾಲಕ ನಾಯಕನಾಗಿ, ಇಸ್ರೇಲ್ 'ತಂದೆ ರಾಷ್ಟ್ರ' ಎಂಬ ಅಸಂಬದ್ಧ ಜಪ ಮಾಡಿ, ನೇತನ್ಯಾಹುವನ್ನು ತಬ್ಬಿಕೊಂಡು ಹಾಸ್ಯಾಸ್ಪದರಾಗಿದ್ದಾರೆ ಎಂದು ಸಿಪಿಐಎಂ ರಾಜ್ಯ ಕಾರ್ಯದರ್ಶಿ ಡಾ.ಕೆ. ಪ್ರಕಾಶ್ ಟೀಕಿಸಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಇದು ಜಾಗತಿಕವಾಗಿ ದಕ್ಷಿಣದ ದೇಶಗಳ ನಾಯಕತ್ವಕ್ಕೆ ಕಳಂಕ" ತಂದಿದೆ. "ಇತರ ಅನೇಕ ದೇಶಗಳು ತಮ್ಮ ನಾಗರಿಕರ ಹಿತರಕ್ಷಣೆಗಾಗಿ ಪೆಟ್ರೋಲಿಯಂ ಉತ್ಪನ್ನಗಳ ಬೆಲೆ ನಿಯಂತ್ರಣ ಕ್ರಮಗಳನ್ನು ಕೈಗೊಂಡಿವೆ. ಆದರೆ ಭಾರತದಲ್ಲಿ ಅಂತಹ ಕ್ರಮ ಕೈಗೊಳ್ಳದೇ, ದುಡಿಯುವ ಜನರ ಮತ್ತು ಜನಸಾಮಾನ್ಯರ ಬದುಕಿನ ಮೇಲೆ ಹೊರೆ ಹೆಚ್ಚಿಸುವುದೇ ಕೇಂದ್ರದ ಬಿ.ಜೆ.ಪಿ ನೇತೃತ್ವದ ಮೋದಿ ಸರ್ಕಾರದ ಉದ್ದೇಶವಾಗಿದೆ ಎಂದಿದ್ದಾರೆ.

ಜನಹಿತಕ್ಕಿಂತ ಬಿಜೆಪಿ ಗೆ ಮತ್ತೆ ಮತ್ತೆ ಚುನಾವಣೆ ಗೆಲ್ಲುವುದೇ ಮುಖ್ಯ ಎಂಬುದು ಮತ್ತೊಮ್ಮೆ ರುಜುವಾತಾಗಿದೆ" "ಜನರಿಗೆ ಮಿತವ್ಯಯದ ಪಾಠ ಮಾಡಿದ ಮೋದಿ, ಮರುದಿನವೇ ರೋಡ್ ಶೋ ಮತ್ತು ಏರೋ ಶೋಗಳಲ್ಲಿ ಪಾಲ್ಗೊಂಡು ದೇಶದ ಜನರನ್ನು ಅವಹೇಳನ ಮಾಡುತ್ತಿದ್ದಾರೆ. ದರ ಏರಿಕೆ ಮಾಡುವ ಬದಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿಧಿಸುವ ತೆರಿಗೆಗಳನ್ನು ಕಡಿತಗೊಳಿಸಬೇಕಾಗಿತ್ತು ಎಂದು ಹೇಳಿದ್ದಾರೆ.


ಕೆ.ಪಿ.ಸಿ.ಸಿ ಅಧ್ಯಕ್ಷರು ಹಾಗೂ ಕರ್ನಾಟಕ ಸರ್ಕಾರದ
ಮಾನ್ಯ ಉಪಮುಖ್ಯಮಂತ್ರಿಗಳು, ಬ್ರ್ಯಾಂಡ್ ಬೆಂಗಳೂರಿನ ಹರಿಕಾರರಾದ
ಸನ್ಮಾನ್ಯ ಶ್ರೀ ಡಿ.ಕೆ. ಶಿವಕುಮಾರ್ ರವರಿಗೆ
ಹುಟ್ಟುಹಬ್ಬದ ಹಾರ್ದಿಕ ಶುಭಾಶಯಗಳು
ಶ್ರೀ ಎ.ಸಿ. ಶ್ರೀನಿವಾಸ್‌ರವರು
ಶಾಸಕರು, ಪುಲಕೇಶಿನಗರ ವಿಧಾನಸಭಾ ಕ್ಷೇತ್ರ
ಶುಭಕೋರುವವರು
ಪುಲಿಕೇಶಿನಗರ ವಿಧಾನಸಭಾ ಕ್ಷೇತ್ರದ ಜನತೆ
ಹಾಗೂ ಎ.ಸಿ. ಶ್ರೀನಿವಾಸ್ ಅಭಿಮಾನಿಗಳ ಬಳಗ

# ಇರಾನ್–ಯುಎಸ್ ಬಿಕ್ಕಟ್ಟು ಪರಿಹಾರಕ್ಕೆ ನವದೆಹಲಿ ಉತ್ತಮ ಸಂಧಾನಕಾರ: ರಷ್ಯಾ ವಿದೇಶಾಂಗ ಸಚಿವ ಲಾವ್ರೊವ್

**ನವದೆಹಲಿ, ಮೇ 15:** ಮಧ್ಯಪ್ರಾಚ್ಯದ ಬಿಕ್ಕಟ್ಟಿನ ನಡುವೆಯೂ ರಷ್ಯಾ ಭಾರತಕ್ಕೆ ತೈಲ ಪೂರೈಕೆಯನ್ನು ಹೆಚ್ಚಿಸಿದೆ ಎಂದು ರಷ್ಯಾದ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್ ತಿಳಿಸಿದ್ದಾರೆ. ಅಷ್ಟೇ ಅಲ್ಲದೆ, ಇರಾನ್ ಮತ್ತು ಅಮೆರಿಕ ನಡುವಿನ ಯುದ್ಧದಲ್ಲಿ ಭಾರತವು ಅತ್ಯುತ್ತಮ ಸಂಧಾನಕಾರನ ಪಾತ್ರ ವಹಿಸಬಲ್ಲದು, ಏಕೆಂದರೆ ಅದಕ್ಕೆ ಅಪಾರ ರಾಜತಾಂತ್ರಿಕ ಅನುಭವ ಮತ್ತು ಪ್ರಭಾವವಿದೆ ಎಂದು ಸಲಹೆ ನೀಡಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯಲ್ಲಿ ಪಾಲ್ಗೊಂಡ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದು ರಹಸ್ಯ ಮಾಹಿತಿಯಲ್ಲ; ಜಾಗತಿಕ ಮಾಧ್ಯಮಗಳಲ್ಲಿ ಇದು ಪ್ರಕಟವಾಗಿದೆ. ಭಾರತಕ್ಕೆ ತೈಲ ಪೂರೈಕೆ ಹೆಚ್ಚಾಗಿರುವುದನ್ನು ಇದು ತೋರಿಸುತ್ತದೆ. ಇದು ನಮ್ಮ ಮೇಲೆ ಅವಲಂಬಿತವಾಗಿಲ್ಲ, ಬದಲಿಗೆ ಹೆಚ್ಚಿನ ಇಂಧನ ಪೂರೈಕೆಗಾಗಿ ಭಾರತವು ನೀಡುವ ಬೇಡಿಕೆಯನ್ನು ಅವಲಂಬಿಸಿರುತ್ತದೆ. ನಾವು ಈ ಪ್ರಕ್ರಿಯೆಯನ್ನು ಮುಂದುವರಿಸುತ್ತಿದ್ದೇವೆ ಎಂದರು.

ಇರಾನ್–ಅಮೆರಿಕ ಯುದ್ಧದ ಕಾರಣದಿಂದಾಗಿ ಹಾರ್ಮುಜ್ ಜಲಸಂಧಿ ಮುಚ್ಚಲ್ಪಟ್ಟಿದ್ದು, ಜಾಗತಿಕ ಇಂಧನ



ಮಾರುಕಟ್ಟೆಯಲ್ಲಿ ಬಿಕ್ಕಟ್ಟು ಸೃಷ್ಟಿಯಾಗಿದೆ. ಈ ಹಿನ್ನೆಲೆಯಲ್ಲಿ ರಷ್ಯಾದ ತೈಲ ಆಮದಿನ ಮೇಲಿನ ವಿನಾಯಿತಿ ವಿಸ್ತರಿಸುವಂತೆ ಭಾರತವು ಅಮೆರಿಕವನ್ನು ಕೋರಿರುವ ಬೆನ್ನಲ್ಲೇ ಲಾವ್ರೊವ್ ಅವರ ಈ ಹೇಳಿಕೆ ಬಂದಿದೆ.

ಪ್ರಸ್ತುತ ಅಮೆರಿಕ ನೀಡಿರುವ ವಿನಾಯಿತಿಯು ಮೇ 16 ರವರೆಗೆ ಮಾತ್ರ ಚಾಲ್ತಿಯಲ್ಲಿದೆ. ಉಕ್ರೇನ್ ಸಂಘರ್ಷಕ್ಕೆ ರಷ್ಯಾ ಈ ಹಣವನ್ನು ಬಳಸುತ್ತಿದೆ ಎಂದು ಆರೋಪಿಸಿರುವ ಅಮೆರಿಕ, ರಷ್ಯಾದಿಂದ ರಿಯಾಯಿತಿ ದರದಲ್ಲಿ ತೈಲ ಖರೀದಿಸುವುದನ್ನು ಕಡಿಮೆ ಮಾಡುವಂತೆ ಭಾರತಕ್ಕೆ ಸೂಚಿಸಿದೆ.

ಕ್ಲೆಪ್ಲರ್ ಅಂಕಿಅಂಶಗಳ ಪ್ರಕಾರ, ರಷ್ಯಾದಿಂದ ಭಾರತದ ತೈಲ ಆಮದು ಸಾರ್ವಕಾಲಿಕ ಗರಿಷ್ಠ ಮಟ್ಟವನ್ನು ತಲುಪಿದ್ದು, 226ರ ಮೇ ಮೊದಲಾರ್ಧದಲ್ಲಿ ದಿನಕ್ಕೆ 2.3 ಮಿಲಿಯನ್ ಬ್ಯಾರೆಲ್‌ಗಳಿಗೆ ಏರಿಕೆಯಾಗಿದೆ. ಇದರೊಂದಿಗೆ ರಷ್ಯಾ ಭಾರತದ ಅಗ್ರ ತೈಲ ಪೂರೈಕೆದಾರ ರಾಷ್ಟ್ರವಾಗಿದೆ. ಪರ್ಷಿಯನ್ ಕೊಲ್ಲಿಯ ಸುತ್ತಮುತ್ತಲಿನ ಇಂಧನ ಪೂರೈಕೆ ವ್ಯತ್ಯಯದಿಂದಾಗಿ, ಮಧ್ಯಪ್ರಾಚ್ಯ ರಾಷ್ಟ್ರಗಳಿಂದ ಭಾರತದ ಕಚ್ಚಾ ತೈಲ ಆಮದು ಶೇ.61ರಷ್ಟು ಕುಸಿದಿದೆ.

## ಭಾರತ ಮಧ್ಯಸ್ಥಿಕೆಗೆ ಉತ್ತಮ ರಾಷ್ಟ್ರ

**ಅಮೆರಿಕ–ಇರಾನ್ ಯುದ್ಧದಲ್ಲಿ ಪಾಕಿಸ್ತಾನ ಮಧ್ಯಸ್ಥಿಕೆ ವಹಿಸುವ ಕುರಿತ ಪ್ರಶ್ನೆಗೆ ಉತ್ತರಿಸಿದ ರಷ್ಯಾ ವಿದೇಶಾಂಗ ಸಚಿವರು "ಇರಾನ್ ಮತ್ತು ಅಮೆರಿಕ ನಡುವೆ ಮಾತುಕತೆ ನಡೆಸಿ ಬಿಕ್ಕಟ್ಟು ಬಗೆಹರಿಸಲು ಪಾಕಿಸ್ತಾನ ಸಹಾಯ ಮಾಡುತ್ತಿರುವುದನ್ನು ನೀವು ನೋಡಬಹುದು. ಆದರೆ ದೀರ್ಘಕಾಲೀನ ಸಂಧಾನಕಾರನ ಬಗ್ಗೆ ಮಾತನಾಡುವುದಾದರೆ, ಭಾರತವು ತನ್ನ ಅಪಾರ ರಾಜತಾಂತ್ರಿಕ ಅನುಭವ, ಅಧಿಕಾರ ಮತ್ತು ಪ್ರಭಾವದಿಂದಾಗಿ ಈ ಪಾತ್ರವನ್ನು ಅತ್ಯುತ್ತಮವಾಗಿ ನಿರ್ವಹಿಸಬಲ್ಲದು," ಎಂದರು.**

**ಇದೇ ವರ್ಷದ ಕೊನೆಯಲ್ಲಿ ನಡೆಯಲಿರುವ ವಾರ್ಷಿಕ ದ್ವಿಪಕ್ಷೀಯ ಶೃಂಗಸಭೆಯ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ರಷ್ಯಾಕ್ಕೆ ಭೇಟಿ ನೀಡಲಿದ್ದಾರೆ. ಈ ಭೇಟಿಗಾಗಿ ಸಿದ್ಧತೆ ನಡೆಸುತ್ತಿದ್ದೇವೆ," ಎಂದು ಲಾವ್ರೊವ್ ಹೇಳಿದರು. ಅಲ್ಲದೆ, ಈ ವರ್ಷದ ಕೊನೆಯಲ್ಲಿ ದೆಹಲಿಯಲ್ಲಿ ನಡೆಯಲಿರುವ ಬ್ರಿಕ್ಸ್ ನಾಯಕರ ಶೃಂಗಸಭೆಗೆ ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಭೇಟಿ ನೀಡುವ ಸಾಧ್ಯತೆಯಿದೆ ಎಂದು ಅವರು ಗಮನಿಸಿದರು.**

# ಪೆಟ್ರೋಲ್–ಡೀಸೆಲ್ ಬೆಲೆ ಏರಿಕೆ ಸಮರ್ಥಿಸಿಕೊಂಡ ಸಚಿವ ರಿಜಿಜು



**ನವದೆಹಲಿ, ಮೇ 15:** ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷ ಮತ್ತು ಹೊರ್ಮುಜ್ ಜಲಸಂಧಿ ನಿರ್ಬಂಧದಿಂದಾಗಿ ತೈಲ ಬಿಕ್ಕಟ್ಟಿನ ಹಿನ್ನೆಲೆ ಶುಕ್ರವಾರ(ಮೇ 15) ಭಾರತದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಲೀಟರ್‌ಗೆ ತಲಾ 3 ರೂ. ಹೆಚ್ಚಿಸಿದ್ದನ್ನು ಸಮರ್ಥಿಸಿಕೊಂಡಿರುವ ಕೇಂದ್ರ ಸಚಿವ ಕಿರಣ್ ರಿಜಿಜು, ಶೇ.20 ರಿಂದ ಸುಮಾರು ಶೇ.100 ವರೆಗಿನ ಏರಿಕೆಯನ್ನು ಕಂಡ ವಿದೇಶಗಳಿಗೆ ಹೋಲಿಸಿದರೆ ನಮ್ಮದು ಕಡಿಮೆ ಎಂದು ಹೇಳಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಪಶ್ಚಿಮ ಏಷ್ಯಾ ಸಂಘರ್ಷದ ಬಳಿಕ ಜಗತ್ತು ಹೆಚ್ಚುತ್ತಿರುವ ಇಂಧನ ಬೆಲೆಗಳನ್ನು ಎದುರಿಸುತ್ತಿದ್ದಾಗ, ಭಾರತವು ಪ್ರತ್ಯೇಕವಾಗಿ ನಿಂತಿತು. ಹಲವಾರು ದೇಶಗಳು ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಶೇ.20 ರಿಂದ ಸುಮಾರು ಶೇ.100 ವರೆಗಿನ ಏರಿಕೆಯನ್ನು ಕಂಡರೆ, ಭಾರತವು ಪೆಟ್ರೋಲ್‌ಗೆ ಕೇವಲ +3.2% ಮತ್ತು ಡೀಸೆಲ್‌ಗೆ +3.4% ಗೆ ಹೆಚ್ಚಳವನ್ನು ಸೀಮಿತಗೊಳಿಸಿದೆ ಎಂದಿದ್ದಾರೆ.

ಮುಂದುವರೆದು, ಬ್ರೆಂಟ್ ಕಚ್ಚಾ ತೈಲವು ಬ್ಯಾರೆಲ್‌ಗೆ $100 ದಾಟಿದರೂ ಮತ್ತು ಜಾಗತಿಕ ಮಾರುಕಟ್ಟೆಗಳು ಅಸ್ಥಿರವಾಗಿದ್ದರೂ ಸಹ, ಭಾರತದ ಸಾರ್ವಜನಿಕ ವಲಯದ ತೈಲ ಕಂಪನಿಗಳು ನಾಗರಿಕರನ್ನು ಹಣದುಬ್ಬರ ಮತ್ತು ಆರ್ಥಿಕ ಒತ್ತಡದಿಂದ ರಕ್ಷಿಸಲು ವಾರಗಳವರೆಗೆ ಭಾರಿ ನಷ್ಟವನ್ನು ಭರಿಸಿಕೊಂಡಿವೆ. ಇದು ಜವಾಬ್ದಾರಿಯುತ ಆಡಳಿತ, ಜನ ಮೊದಲು ಎಂಬ ನಾಯಕತ್ವ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ಭಾರತವು ಆರ್ಥಿಕ ಸ್ಥಿರತೆಯನ್ನು ಸಾರ್ವಜನಿಕ ಕಲ್ಯಾಣದೊಂದಿಗೆ ಸಮತೋಲನಗೊಳಿಸುವುದನ್ನು ಮುಂದುವರಿಸಿದೆ ಎಂದಿದ್ದಾರೆ.

ಅಂಕಿಅಂಶಗಳ ಪ್ರಕಾರ, ಮಲೇಷ್ಯಾ ಪೆಟ್ರೋಲ್ ಬೆಲೆಯಲ್ಲಿ ಶೇ.89.7 ಹೆಚ್ಚಳ ಮತ್ತು ಡೀಸೆಲ್ ಬೆಲೆಯಲ್ಲಿ ಶೇ.112.7 ಹೆಚ್ಚಳವನ್ನು ದಾಖಲಿಸಿದೆ. ಅಮೆರಿಕದಲ್ಲಿ ಪೆಟ್ರೋಲ್ ಬೆಲೆಯಲ್ಲಿ ಶೇ.44 ಮತ್ತು ಡೀಸೆಲ್ ಶೇ.48.1 ಏರಿಕೆಯಾಗಿದೆ. ಅದೇ ರೀತಿ ಚೀನಾದಲ್ಲಿ ಪೆಟ್ರೋಲ್ ಬೆಲೆಯಲ್ಲಿ ಶೇ.21.7 ಮತ್ತು ಡೀಸೆಲ್ ಬೆಲೆಯಲ್ಲಿ 23.7% ಏರಿಕೆಯಾಗಿದೆ ಎಂದು ತಿಳಿಸಿದ್ದಾರೆ.




**ಆಂಧ್ರಪ್ರದೇಶದ ಪುಟ್ಟಪರ್ತಿಯಲ್ಲಿ ಎಎಂಸಿಎಯ ಕೋರ್ ಇಂಟಿಗ್ರೇಷನ್ ಮತ್ತು ಫ್ಲೈಟ್ ಟೆಸ್ಟಿಂಗ್ ಸೆಂಟರ್ ಮತ್ತು ನೌಕಾ ವ್ಯವಸ್ಥೆಗಳ ಉತ್ಪಾದನಾ ಸೌಲಭ್ಯದ ಶಿಲಾನ್ಯಾಸ ಸಮಾರಂಭದಲ್ಲಿ ಭಾಗವಹಿಸಿದ್ದ ಸದಸ್ಯರೊಂದಿಗೆ ಸಮೂಹ ಛಾಯಾಚಿತ್ರದಲ್ಲಿ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್.**

# ಭೋಜಶಾಲಾ ಇನ್ನು ದೇವಸ್ಥಾನ: ಮಧ್ಯಪ್ರದೇಶ ಹೈಕೋರ್ಟ್ ಐತಿಹಾಸಿಕ ತೀರ್ಪು

**ಭೋಪಾಲ್, ಮೇ 15:** ಮಧ್ಯಪ್ರದೇಶದ ಧಾರ್ ಜಿಲ್ಲೆಯಲ್ಲಿ ದಶಕಗಳಿಂದ ವಿವಾದದ ಕೇಂದ್ರವಾಗಿದ್ದ ಭೋಜಶಾಲಾ–ಕಮಲ್ ಮೌಲಾ ಮಸೀದಿ ಸಂಕೀರ್ಣಕ್ಕೆ ಸಂಬಂಧಿಸಿದಂತೆ ಮಧ್ಯಪ್ರದೇಶ ಹೈಕೋರ್ಟ್ ಐತಿಹಾಸಿಕ ತೀರ್ಪು ನೀಡಿದ್ದು, ಭೋಜಶಾಲಾ ಆವರಣವನ್ನು ದೇವಸ್ಥಾನ ಎಂದು ಘೋಷಿಸಿದೆ.

ಹೈಕೋರ್ಟ್‌ನ ಇಂದೋರ್ ಪೀಠವು ಈ ಸಂಕೀರ್ಣದಲ್ಲಿ ಪೂಜೆ ಸಲ್ಲಿಸಲು ಹಿಂದೂಗಳಿಗೆ ಸಂಪೂರ್ಣ ಹಕ್ಕಿದೆ ಎಂದು ಎತ್ತಿಹಿಡಿದಿದೆ. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ನಡೆಸಿದ ವೈಜ್ಞಾನಿಕ ಸಮೀಕ್ಷೆಯ ವರದಿಯನ್ನು ಆಧರಿಸಿ ನ್ಯಾಯಾಲಯವು ಈ ನಿರ್ಧಾರಕ್ಕೆ ಬಂದಿದೆ. ಸಮೀಕ್ಷೆಯ ವರದಿಯು ಈ ಸ್ಥಳವು ಮೂಲತಃ ದೇವಸ್ಥಾನವಾಗಿತ್ತು ಎಂಬುದನ್ನು ಸಾಕ್ಷ್ಯಾಧಾರಗಳೊಂದಿಗೆ ದೃಢಪಡಿಸಿತ್ತು.

ನ್ಯಾಯಮೂರ್ತಿಗಳಾದ ವಿಜಯ್ ಕುಮಾರ್ ಶುಕ್ಲಾ ಮತ್ತು ಅಲೋಕ್ ಅವಸ್ತಿ ಅವರನ್ನೊಳಗೊಂಡ ವಿಭಾಗೀಯ ಪೀಠವು ಈ ಐತಿಹಾಸಿಕ ತೀರ್ಪನ್ನು ನೀಡಿದೆ. ಮೇ 12 ರಂದು ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ಇಂದು ಪ್ರಕಟಿಸಲಾಗಿದೆ. ವಿವಾದಿತ ಇಡೀ ಸಂಕೀರ್ಣವು ಮೂಲತಃ ವಾಗ್ದೇವಿ (ಸರಸ್ವತಿ ದೇವಸ್ಥಾನ) ಮತ್ತು ರಾಜ ಭೋಜ ಸ್ಥಾಪಿಸಿದ್ದ ಸಂಸ್ಕೃತ ಅಧ್ಯಯನ



ಕೇಂದ್ರವಾಗಿತ್ತು ಎಂದು ಹೈಕೋರ್ಟ್ ಸ್ಪಷ್ಟವಾಗಿ ಹೇಳಿದೆ.

ಪ್ರಸ್ತುತ ಇರುವ ಮಸೀದಿ ರಚನೆಯನ್ನು ಹಳೆಯ ದೇವಸ್ಥಾನದ ಅವಶೇಷಗಳು ಮತ್ತು ಸ್ತಂಭಗಳನ್ನು ಬಳಸಿ ಮರುನಿರ್ಮಾಣ ಮಾಡಲಾಗಿದೆ. ಸಮೀಕ್ಷೆಯಲ್ಲಿ ಪತ್ತೆಯಾದ ಪರಮಾರ ರಾಜರ ಕಾಲದ ಸಂಸ್ಕೃತ ಮತ್ತು ಪ್ರಾಕೃತ ಶಾಸನಗಳು, ಕೆತ್ತನೆಗಳು, ಹಾಗೂ ಬ್ರಹ್ಮ, ಗಣೇಶ ಸೇರಿದಂತೆ 94ಕ್ಕೂ ಹೆಚ್ಚು ಹಿಂದೂ ದೇವತೆಗಳ ಭಿನ್ನವಾಗಿರುವ ವಿಗ್ರಹಗಳು ಈ ಸ್ಥಳವು ದೇವಸ್ಥಾನವಾಗಿತ್ತು ಎಂಬುದನ್ನು ದೃಢಪಡಿಸುತ್ತದೆ ಎಂದು ತಿಳಿಸಿದೆ.

ಪ್ರಸ್ತುತ ಇರುವ ಕಮಲ್ ಮೌಲಾ ಮಸೀದಿಯನ್ನು ಮುಸ್ಲಿಂ ಆಡಳಿತಗಾರರ ಕಾಲದಲ್ಲಿ ಪೂರ್ವ ಅಸ್ತಿತ್ವದಲ್ಲಿದ್ದ ಹಿಂದೂ ದೇವಸ್ಥಾನದ ಸ್ತಂಭಗಳು, ಕಲ್ಲುಗಳು ಮತ್ತು ಅವಶೇಷಗಳನ್ನು ಬಳಸಿ ನಿರ್ಮಿಸಲಾಗಿದೆ ಎಂದು ನ್ಯಾಯಾಲಯ ಹೇಳಿದೆ. ಎಎಸ್ಐ ಸಮೀಕ್ಷೆಯು ಏಕಪಕ್ಷೀಯವಾಗಿದೆ ಮತ್ತು ಮುಸ್ಲಿಂ ಅರ್ಜಿದಾರರ ಹಕ್ಕನ್ನು ಕಡೆಗಣಿಸಲಾಗಿದೆ ಎಂಬ ಕಮಲ್ ಮೌಲಾ ಮಸೀದಿ ಸಮಿತಿಯ ವಾದಗಳನ್ನು ಹೈಕೋರ್ಟ್ ತಿರಸ್ಕರಿಸಿದೆ.

ಧಾರ್ಮಿಕ ಸ್ಥಳಗಳ ಸಂರಕ್ಷಣೆ ಮತ್ತು ಭಕ್ತರಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದು ಸರ್ಕಾರದ ಸಾಂವಿಧಾನಿಕ ಜವಾಬ್ದಾರಿಯಾಗಿದೆ ಎಂದು ನ್ಯಾಯಾಲಯ ತೀರ್ಪಿನಲ್ಲಿ ಉಲ್ಲೇಖಿಸಿದೆ. ಭೋಜಶಾಲಾ ಸಂಕೀರ್ಣವು 11ನೇ ಶತಮಾನದಲ್ಲಿ ಸರಸ್ವತಿ ದೇವಿಯ ದೇವಾಲಯವಾಗಿತ್ತು ಎಂದು ಹಿಂದೂಗಳು ಹೇಳಿದರೆ ಮುಸ್ಲಿಮರು ಇದನ್ನು ಕಮಲ್ ಮೌಲಾ ಮಸೀದಿ ಎಂದು ಕರೆಯುತ್ತಿದ್ದರು.

ಕಳೆದ 21 ವರ್ಷಗಳಿಂದ ಭೋಜಶಾಲೆಯಲ್ಲಿ ಪ್ರತಿ ಮಂಗಳವಾರ ಹಿಂದೂಗಳು ಪೂಜೆ ಸಲ್ಲಿಸಿದರೆ, ಶುಕ್ರವಾರದಂದು ಮುಸ್ಲಿಮರು ನಮಾಜ್ ಆಚರಿಸುತ್ತಿದ್ದರು. ಈ ಸಂಬಂಧ ಹಿಂದೂ ಫ್ರಂಟ್ ಫಾರ್ ಜಸ್ಟಿಸ್ ಸಂಘಟನೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿ ವೈಜ್ಞಾನಿಕ ಸಮೀಕ್ಷೆಗೆ ಮನವಿ ಮಾಡಿತ್ತು. ಅದರಂತೆ ಹೈಕೋರ್ಟ್ ಎಎಸ್ಐಗೆ ಸಮೀಕ್ಷೆ ನಡೆಸುವಂತೆ ಆದೇಶಿಸಿತ್ತು. ಸಮೀಕ್ಷೆಯ ವರದಿ ಸಲ್ಲಿಕೆಯಾದ ಬಳಿಕ ಕೋರ್ಟ್ ಈ ಪ್ರಕರಣದ ವಿಚಾರಣೆ ಆರಂಭಿಸಿತ್ತು.

ಮಾಳವ ಪ್ರದೇಶವನ್ನು ಆಳುತ್ತಿದ್ದ ರಾಜ ಭೋಜನು 1034 ರಲ್ಲಿ ಇಲ್ಲಿ ಸಂಸ್ಕೃತ ಅಧ್ಯಯನ ಕೇಂದ್ರ ಮತ್ತು ಸರಸ್ವತಿ ದೇವಸ್ಥಾನವನ್ನು ನಿರ್ಮಿಸಿದ್ದ. ಆದರೆ ನಂತರದ ಮುಸ್ಲಿಂ ರಾಜರು ಇದನ್ನು ಮಸೀದಿಯಾಗಿ ಪರಿವರ್ತಿಸಿದ್ದರು ಎಂದು ಹಿಂದೂಗಳು ವಾದಿಸಿದ್ದರು.

# ಸನಾತನ ಧರ್ಮ ನಿರ್ಮೂಲನೆ ಹೇಳಿಕೆಗೆ ಉದಯನಿಧಿ ಸ್ಪಷ್ಟನೆ

**ಚೆನ್ನೈ, ಮೇ 15:** ತಮಿಳುನಾಡು ವಿಧಾನಸಭೆಯಲ್ಲಿ ಸನಾತನ ಧರ್ಮ ನಿರ್ಮೂಲನೆಯಾಗಬೇಕು ಎಂದು ಹೇಳಿಕೆ ನೀಡಿ ಮತ್ತೆ ವಿವಾದ ಹುಟ್ಟುಹಾಕಿದ್ದ ಡಿಎಂಕೆ ನಾಯಕ ಉದಯನಿಧಿ ಸ್ಟಾಲಿನ್, ತೀವ್ರ ವಿರೋಧ ವ್ಯಕ್ತವಾಗುತ್ತಿದ್ದಂತೆ ಜನರನ್ನು ಮೇಲ್ಜಾತಿ ಮತ್ತು ಕೆಳಜಾತಿಗಳಾಗಿ ವಿಭಜಿಸುವ ವ್ಯವಸ್ಥೆಯನ್ನು ನಿರ್ಮೂಲನೆ ಮಾಡಬೇಕು ಎನ್ನುವುದು ನನ್ನ ಮಾತಿನ ಉದ್ದೇಶವಾಗಿತ್ತು ಎಂದು ಸ್ಪಷ್ಟೀಕರಣ ನೀಡಿದ್ದಾರೆ.

ಈ ಕುರಿತು ಪೋಸ್ಟ್ ಮಾಡಿರುವ ಅವರು, ತಮಿಳುನಾಡು ವಿಧಾನಸಭೆಯಲ್ಲಿ ನಾನು ಮಾತನಾಡುವಾಗ, ಜನರನ್ನು ವಿಭಜಿಸುವ ಜಾತಿ ವ್ಯವಸ್ಥೆಯನ್ನು ರದ್ದುಗೊಳಿಸಬೇಕು ಎಂದು ಹೇಳಿದ್ದೆ. ಇದಕ್ಕಾಗಿ ಕೆಲವರು ನನ್ನನ್ನು ಟೀಕಿಸುತ್ತಿದ್ದಾರೆ. ಆದರೆ ನಾನು ಭಯಪಡುವ ವ್ಯಕ್ತಿಯಲ್ಲ. ವಿರೋಧದಿಂದ ದ್ರಾವಿಡ ಚಳವಳಿ ಹೊರಹೊಮ್ಮಿತು. ಆ ಅರ್ಥದಲ್ಲಿ, ನಾನು ಒಂದು ಸಣ್ಣ ವಿವರಣೆಯನ್ನು ನೀಡಲು ಬಯಸುತ್ತೇನೆ. ಜಾತಿ ವ್ಯವಸ್ಥೆಯನ್ನು ರದ್ದುಗೊಳಿಸಬೇಕು ಎಂದು ನಾನು ಹೇಳಿದಾಗ, ಯಾರೂ ದೇವಸ್ಥಾನಕ್ಕೆ ಹೋಗಬಾರದು ಎಂದಲ್ಲ. ದೇವಾಲಯದಲ್ಲಿ ಮಾತ್ರವಲ್ಲದೆ ಸಮಾಜದಲ್ಲಿಯೂ ಎಲ್ಲರಿಗೂ ಸಮಾನ ಹಕ್ಕುಗಳಿರಬೇಕು ಎಂದರ್ಥ. ಈ ಅರ್ಥದಲ್ಲಿ ನಾನು ಮಾತನಾಡಿದ್ದೆ. ಜಾತಿ ವ್ಯವಸ್ಥೆ ರದ್ದುಗೊಳಿಸಬೇಕು ಎಂದು ಹೇಳಿದ್ದೆ ಎಂದಿದ್ದಾರೆ.

ಮುಂದುವರೆದು ಪೆರಿಯಾರ್, ಅಂಬೇಡ್ಕರ್, ಅಣ್ಣಾ ಹಾಗೂ ಕಲೈನಾರ್ ಅವರು ಹೇಳಿದ ತತ್ವಗಳ ಬಗ್ಗೆಯೂ ನಾನು ಮಾತನಾಡಿದೆ. ನಾವು ಯಾರ ದೇವರ ನಂಬಿಕೆಗೂ ವಿರುದ್ಧವಾಗಿಲ್ಲ. ಆದರೆ ಅಸಮಾನತೆ ಮತ್ತು ದಬ್ಬಾಳಿಕೆಯನ್ನು ಬಲವಾಗಿ ವಿರೋಧಿಸುತ್ತೇವೆ ಎಂದು ಹೇಳಿದ್ದಾರೆ.

ಮಂಗಳವಾರ ತಮಿಳುನಾಡು ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕನಾಗಿ ಮಾಡಿದ ತಮ್ಮ ಮೊದಲ ಭಾಷಣದಲ್ಲೇ, ತಮಿಳು ತಾಯಿಗೆ ವಂದಿಸಿ, ಜನರನ್ನು ವಿಭಜಿ ಸನಾತನ ಧರ್ಮವನ್ನು ಖಂಡಿತವಾಗಿ ನಿರ್ಮೂಲನೆ ಮಾಡಬೇಕು ಎಂದಿದ್ದರು. 2023ರಲ್ಲೂ ಇದೇ ರೀತಿ ಹೇಳಿಕೆ ದೇಶಾದ್ಯಂತ ದೊಡ್ಡ ಮಟ್ಟದ ಚರ್ಚೆಗೆ ನಾಂದಿ ಹಾಡಿದ್ದರು.

## 2025ರ ನೀಟ್ ಪರೀಕ್ಷೆಯಲ್ಲಿ ಒಂದೇ ಕುಟುಂಬದ ಐವರು ಪಾಸ್

# ಪ್ರಶ್ನೆಪತ್ರಿಕೆ ಸೋರಿಕೆ ಕೇಸಲ್ಲಿ ಮೂವರು ಅರೆಸ್ಟ್

**ಜೈಪುರ, ಮೇ 15:** 2025ರಲ್ಲಿ ನೀಟ್ ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದ ಒಂದೇ ಕುಟುಂಬದ ಐವರು ಈಗ ಪ್ರಶ್ನೆಪತ್ರಿಕೆ ಸೋರಿಕೆ ಸೋರಿಕೆ ಪ್ರಕರಣದಲ್ಲಿ ಆರೋಪಿಗಳಾಗಿದ್ದಾರೆ. ನೀಟ್ ಪರೀಕ್ಷೆ ತೇರ್ಗಡೆಯಾಗಿದ್ದ ಒಂದು ವರ್ಷದ ಬಳಿಕ ಹಗರಣದಲ್ಲಿ ದಿನೇಶ್ ಮತ್ತು ಆತನ ಸಹೋದರ ಮಂಗಿಲಾಲ್, ಸೋದರಳಿಯ ವಿಕಾಸ್‌ನನ್ನು ಬಂಧಿಸಲಾಗಿದೆ.

ಬಿವಾಲ್ ಕುಟುಂಬದವರು ನಿಜಕ್ಕೂ ಪರೀಕ್ಷೆಯಲ್ಲಿ ಪಾಸ್ ಆಗಿದ್ದರೇ ಅಥವಾ ವೈದ್ಯಕೀಯ ಕಾಲೇಜುಗಳಲ್ಲಿ ಸೀಟುಗಳನ್ನು ಪಡೆಯಲು ನೀಟ್ ಪತ್ರಿಕೆ ಸೋರಿಕೆ ಜಾಲವನ್ನು ಬಳಸಿದ್ದರೇ ಎಂಬ ಬಗ್ಗೆ ತನಿಖೆ ನಡೆಸಲಾಗುತ್ತಿದೆ. ಏಕೆಂದರೆ, ಪರೀಕ್ಷೆಯಲ್ಲಿ ಉತ್ತೀರ್ಣರಾದ ಎಲ್ಲರೂ 10 ಮತ್ತು 12ನೇ ತರಗತಿಯಲ್ಲಿ ಸರಾಸರಿ ಶ್ರೇಣಿಗಳನ್ನು ಗಳಿಸಿದ್ದಾರೆ.

ನೀಟ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಸವಾಯಿ ಮಾಧೋಪುರ್ ವೈದ್ಯಕೀಯ ಕಾಲೇಜಿನಲ್ಲಿ ಸೀಟು ಪಡೆದ ಮಂಗಿಲಾಲ್ ಅವರ ಮಗ ವಿಕಾಸ್, 10 ನೇ ತರಗತಿಯಲ್ಲಿ ಶೇ.63 ಮತ್ತು 12 ನೇ ತರಗತಿಯಲ್ಲಿ ಶೇ.55 ಅಂಕಗಳನ್ನು ಗಳಿಸಿದ್ದ. ನೀಟ್ 2024 ರಲ್ಲಿ, 720ಕ್ಕೆ ಕೇವಲ 270 ಅಂಕಗಳನ್ನು ಗಳಿಸಿದ್ದ. ಸಿಕಾರ್‌ನ ಕೋಚಿಂಗ್ ಸಂಸ್ಥೆಯಲ್ಲಿ ನಡೆದ 46 ಪರೀಕ್ಷೆಗಳಲ್ಲಿ ಆತನ ಸರಾಸರಿ ಅಂಕಗಳು 384 ಆಗಿತ್ತು.

ಇದರ ಹೊರತಾಗಿಯೂ, ನೀಟ್ 2025ರಲ್ಲಿ 85.11% ಅಂಕಗಳನ್ನು ಗಳಿಸಿದ್ದ. ದೌಸಾ ವೈದ್ಯಕೀಯ ಕಾಲೇಜಿನಲ್ಲಿ ಪ್ರವೇಶ ಪಡೆದ ಮಂಗಿಲಾಲ್ ಅವರ ಮಗಳು ಪ್ರಗತಿ, 10ನೇ ತರಗತಿಯಲ್ಲಿ ಶೇ.69 ಮತ್ತು 12ನೇ ತರಗತಿಯಲ್ಲಿ ಶೇ.91 ಅಂಕಗಳನ್ನು ಗಳಿಸಿದ್ದಳು. ನೀಟ್ 2024ರಲ್ಲಿ 332 ಅಂಕಗಳನ್ನು ಗಳಿಸಿದ್ದಳು. ತರಬೇತಿ ಪರೀಕ್ಷೆಯಲ್ಲಿ ಆಕೆಯ ಸರಾಸರಿ 302 ರಷ್ಟಿತ್ತು. ಪ್ರಗತಿ ನೀಟ್ 2025 ರಲ್ಲಿ 89.08% ಅಂಕಗಳೊಂದಿಗೆ ಪ್ರವೇಶ ಪಡೆಯುವಲ್ಲಿ ಯಶಸ್ವಿಯಾಗಿದ್ದಳು.

ದಿನೇಶ್ ಮಗಳು ಗುಂಜನ್ 10ನೇ ತರಗತಿಯಲ್ಲಿ ಶೇ.86 ಮತ್ತು 12ನೇ ತರಗತಿಯಲ್ಲಿ ಶೇ.70 ಅಂಕಗಳನ್ನು ಗಳಿಸಿದ್ದಳು. ಓಇಇಖ 2024 ರಲ್ಲಿ 355 ಅಂಕಗಳನ್ನು



ಗಳಿಸಿದ್ದಳು. ತರಬೇತಿ ಪರೀಕ್ಷೆಯಲ್ಲಿ ಸರಾಸರಿ 320 ಮತ್ತು 342ರ ನಡುವೆ ಇತ್ತು. ಆದಾಗ್ಯೂ, ನೀಟ್–2025 ರಲ್ಲಿ ಆಕೆ ವಾರಣಾಸಿಯ ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ ಪ್ರವೇಶ ಪಡೆದಳು.

ಬಿವಾಲ್ ಅವರ ಮೂರನೇ ಸಹೋದರ ಘನಶ್ಯಾಮ್ ಪುತ್ರಿ ಸಾನಿಯಾ ಮುಂಬೈನ ವೈದ್ಯಕೀಯ ಕಾಲೇಜಿನಲ್ಲಿ ಪ್ರವೇಶ ಪಡೆದಿದ್ದಾಳೆ. ಆಕೆ 10ನೇ ತರಗತಿಯಲ್ಲಿ ಶೇ.63 ಮತ್ತು 12 ನೇ ತರಗತಿಯಲ್ಲಿ ಶೇ.89 ಅಂಕಗಳನ್ನು ಗಳಿಸಿದ್ದಳು. ಸಾನಿಯಾ ನೀಟ್ 2024 ರಲ್ಲಿ 360 ಅಂಕಗಳನ್ನು ಪಡೆದಿದ್ದಳು. ನೀಟ್ 2025ರಲ್ಲಿ ಆಕೆ 94.07% ಅಂಕಗಳನ್ನು ಪಡೆದಳು. ಘನಶ್ಯಾಮ್ ಇನ್ನೊಬ್ಬ ಮಗಳು ಪಾಲಕ್, 10ನೇ ತರಗತಿಯಲ್ಲಿ ಶೇ.93 ಮತ್ತು 12 ನೇ ತರಗತಿಯಲ್ಲಿ ಶೇ.89 ಅಂಕಗಳನ್ನು ಗಳಿಸಿದ್ದಳು. ನೀಟ್ 2024 ರಲ್ಲಿ 512 ಅಂಕಗಳನ್ನು ಗಳಿಸಿದ್ದಳು. ನೀಟ್ 2025ರಲ್ಲಿ, ಆಕೆ 98.61% ಅಂಕಗಳನ್ನು ಗಳಿಸಿ, ಜೈಪುರದ ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ ಪ್ರವೇಶವನ್ನು ಪಡೆದಿದ್ದಳು.

ನೀಟ್ 2025 ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾದ ಬಗ್ಗೆ ಯಾವುದೇ ಅಧಿಕೃತ ವರದಿಗಳಿಲ್ಲ. ಆದರೆ, ಹಗರಣಕ್ಕೆ ಸಂಬಂಧಿಸಿದ ಹಲವಾರು ಹೇಳಿಕೆಗಳು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡಿವೆ. ಆದಾಗ್ಯೂ, ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಮತ್ತು ಸೈಬರ್ ಏಜೆನ್ಸಿಗಳು ಈ ಹೇಳಿಕೆಗಳನ್ನು ಹಿಂದೆ ಸುಳ್ಳೆಂದು ತಳ್ಳಿಹಾಕಿದ್ದವು.

# ಉನ್ನಾಂವ್ ಪ್ರಕರಣ: ಕುಲದೀಪ್ ಜೀವಾವಧಿ ಶಿಕ್ಷೆ ಅಮಾನತು ಆದೇಶ ರದ್ದು

**ನವದೆಹಲಿ, ಮೇ 15:** 2017ರ ಉನ್ನಾಂವ್ ಅತ್ಯಾಚಾರ ಪ್ರಕರಣದಲ್ಲಿ ಅಪರಾಧಿಯಾಗಿರುವ ಮಾಜಿ ಬಿಜೆಪಿ ಶಾಸಕ ಕುಲದೀಪ್ ಸಿಂಗ್ ಸೆಂಗರ್‌ಗೆ ಜೀವಾವಧಿ ಶಿಕ್ಷೆ ಅಮಾನತುಗೊಳಿಸಿದ ದೆಹಲಿ ಹೈಕೋರ್ಟ್ ಆದೇಶವನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿದೆ.



2017ರ ಉನ್ನಾಂವ್ ಪ್ರಕರಣವು ಭಾರತದ ನ್ಯಾಯಾಂಗ ಇತಿಹಾಸದಲ್ಲಿ ಅತಿ ಹೆಚ್ಚು ಚರ್ಚೆಗೆ ಗ್ರಾಸವಾದ ಅಪರಾಧ ಪ್ರಕರಣಗಳಲ್ಲಿ ಒಂದಾಗಿದೆ. ಉತ್ತರ ಪ್ರದೇಶದ ಉನ್ನಾಂವ್ದ 17 ವರ್ಷದ ಅಪ್ರಾಪ್ತ ಬಾಲಕಿಯನ್ನು 2017ರ ಜೂನ್ 4ರಂದು ಅಂದಿನ ಬಿಜೆಪಿ ಶಾಸಕ ಕುಲದೀಪ್ ಸಿಂಗ್ ಸೆಂಗರ್ ಅಪಹರಿಸಿ ಅತ್ಯಾಚಾರ ಮಾಡಿದ್ದು, ಕೆಲಸ ಕೊಡಿಸುವ ನೆಪದಲ್ಲಿ ಬಾಲಕಿಯನ್ನು ಸೆಂಗರ್ ಮನೆಗೆ ಕರೆದೊಯ್ಯಲಾಗಿತ್ತು.

ಅಷ್ಟು ಮಾತ್ರವಲ್ಲದೆ ತನ್ನ ಮಗಳಿಗೆ ನ್ಯಾಯಕ್ಕಾಗಿ ಹೋರಾಡುತ್ತಿದ್ದ ಸಂತ್ರಸ್ತೆಯ ತಂದೆಯನ್ನು ಕುಲದೀಪ್ ಸೆಂಗಾರ್ನ ಸಹೋದರ ಅತುಲ್ ಸಿಂಗ್ ಮತ್ತು ಇತರರು 2018ರ ಏಪ್ರಿಲ್‌ನಲ್ಲಿ ತೀವ್ರವಾಗಿ ಥಳಿಸಿದ್ದರು. ಪೊಲೀಸರು ಸಂತ್ರಸ್ತೆಯ ತಂದೆಯನ್ನೇ ಅಕ್ರಮ ಶಸ್ತ್ರಾಸ್ತ್ರ ಹೊಂದಿದ್ದ ಆರೋಪದಲ್ಲಿ ಬಂಧಿಸಿದ್ದರು. 2018ರ ಏಪ್ರಿಲ್ 8ರಂದು ಸಂತ್ರಸ್ತೆ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ನಿವಾಸದ ಮುಂದೆ ಆತ್ಮಹತ್ಯೆಗೆ ಪ್ರಯತ್ನಿಸಿದ ನಂತರ ಪ್ರಕರಣ ರಾಷ್ಟ್ರಮಟ್ಟದ ಗಮನ ಸೆಳೆದಿತ್ತು. ಇದಾದ ಮರುದಿನವೇ ಸಂತ್ರಸ್ತೆಯ ತಂದೆ ಪೊಲೀಸ್ ಕಸ್ಟಡಿಯಲ್ಲಿದ್ದಾಗಲೇ ಗಂಭೀರ ಗಾಯಗಳಿಂದ ಮೃತಪಟ್ಟಿದ್ದರು.

ಅದಾದ ಬಳಿಕ 2019ರ ಜುಲೈ 28ರಂದು ಸಂತ್ರಸ್ತೆಯ ಸಂಬಂಧಿಕರು ಮತ್ತು ವಕೀಲರು ಪ್ರಯಾಣಿಸುತ್ತಿದ್ದ ಕಾರಿಗೆ ರಾಯಬರೇಲಿಯಲ್ಲಿ ಟ್ರಕ್ ಡಿಕ್ಕಿ ಹೊಡೆದಿತ್ತು. ಈ ಘಟನೆಯಲ್ಲಿ ಸಂತ್ರಸ್ತೆಯ ಇಬ್ಬರು ಮಹಿಳಾ ಸಂಬಂಧಿಕರು ಸಾವನ್ನಪ್ಪಿದರು ಮತ್ತು ಸಂತ್ರಸ್ತೆ ಹಾಗೂ ವಕೀಲರು ಗಂಭೀರವಾಗಿ ಗಾಯಗೊಂಡಿದ್ದರು. ಈ ಎಲ್ಲ ಘಟನೆಗಳು ಕುಲದೀಪ್ ಸಿಂಗ್ ಸಂತ್ರಸ್ತೆಯ ಹತ್ಯೆಗೂ ಸಂಚು ಮಾಡುತ್ತಿರುವ ಸಂಶಯ ಹುಟ್ಟಿಸಿತ್ತು. ಈ ಪ್ರಕರಣದಲ್ಲಿ 2019ರ ಡಿಸೆಂಬರ್ 20ರಂದು ದೆಹಲಿಯ ತೀಸ್ ಹಜಾರಿ ನ್ಯಾಯಾಲಯವು ಕುಲದೀಪ್ ಸಿಂಗ್ ಸೆಂಗರ್ ಅಪರಾಧಿ ಎಂದು ಘೋಷಿಸಿ, ಜೀವಾವಧಿ ಶಿಕ್ಷೆ ಮತ್ತು 25 ಲಕ್ಷ ರೂಪಾಯಿ ದಂಡ ವಿಧಿಸಿತ್ತು. ಹಾಗೆಯೇ ಸಂತ್ರಸ್ತೆಯ ತಂದೆಯ ಸಾವಿನ ಪ್ರಕರಣದಲ್ಲಿ 2020ರ ಮಾರ್ಚ್‌ನಲ್ಲಿ ಸೆಂಗರ್ ಸೇರಿದಂತೆ ಏಳು ಜನರಿಗೆ 10 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿತ್ತು.

ಆದರೆ ಕುಲದೀಪ್ ಸಲ್ಲಿಸಿರುವ ಮೇಲ್ಮನವಿ ವಿಚಾರಣೆಯನ್ನು ನಡೆಸಿದ ದೆಹಲಿ ಹೈಕೋರ್ಟ್ ಮೇಲ್ಮನವಿ ವಿಚಾರಣೆಯ ಸಮಯದಲ್ಲಿ ಶಿಕ್ಷೆಯನ್ನು ಅಮಾನತುಗೊಳಿಸಿತ್ತು. ಸೆಂಗರ್ 15 ಲಕ್ಷ ರೂ.ಗಳ ವೈಯಕ್ತಿಕ ಬಾಂಡ್ ಒದಗಿಸಬೇಕು. ಸಂತ್ರಸ್ತೆಯ ನಿವಾಸದ 5 ಕಿ.ಮೀ ವ್ಯಾಪ್ತಿಯೊಳಗೆ ಪ್ರವೇಶಿಸಬಾರದು ಮತ್ತು ಸಂತ್ರಸ್ತೆ ಅಥವಾ ಆಕೆಯ ತಾಯಿಯನ್ನು ಯಾವುದೇ ರೀತಿಯಲ್ಲಿ ಸಂಪರ್ಕಿಸಬಾರದು ಎಂದು ಹೇಳಿ ಜಾಮೀನು ನೀಡಿತ್ತು. ಇದೀಗ ಸುಪ್ರೀಂ ಕೋರ್ಟ್ ದೆಹಲಿ ಹೈಕೋರ್ಟ್‌ನ ಈ ಆದೇಶವನ್ನು ರದ್ದುಗೊಳಿಸಿದೆ.

# ಟೆಕ್ನೋವರ್ಸ್ ಹ್ಯಾಕಥಾನ್‌ಗೆ ತೆರೆ ಚೆನ್ನೈನ ತಂಡಕ್ಕೆ ಪ್ರಥಮ ಸ್ಥಾನ

**ಪುಣೆ, ಮೇ 15:** ಭವಿಷ್ಯದ ಕೃತಕ ಬುದ್ಧಿಮತ್ತೆ (ಎಐ) ತಜ್ಞರನ್ನು ಪ್ರೋತ್ಸಾಹಿಸುವ ಹಾಗೂ ಬೆಳೆಸುವ ನಿಟ್ಟಿನಲ್ಲಿ ಪ್ರಮುಖ ಐಟಿ ದಿಗ್ಗಜ ಸಂಸ್ಥೆ ಕಾಗ್ನಿಜೆಂಟ್ 'ಟೆಕ್ನೋವರ್ಸ್ ಹ್ಯಾಕಥಾನ್ 2026' ಆಯೋಜಿಸಿತ್ತು. ಪುಣೆಯ ಕ್ಯಾಂಪಸ್‌ನಲ್ಲಿ ನಡೆದ ಅದ್ದೂರಿ ಫೈನಲ್ಸ್‌ನೊಂದಿಗೆ ಈ ಹ್ಯಾಕಥಾನ್ ಮುಕ್ತಾಯಗೊಂಡಿದೆ.

ಈ ಪ್ರತಿಷ್ಠಿತ ಸ್ಪರ್ಧೆಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ಚೆನ್ನೈನ 'ಚೆನ್ನೈ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ'ಯ 'ಟೀಮ್ ಏರೋಫೈಟಾ' ತಂಡವು ಪ್ರಥಮ ಸ್ಥಾನ ಪಡೆದು 3,00,000 ರೂ. ಬಹುಮಾನವನ್ನು ತನ್ನದಾಗಿಸಿಕೊಂಡಿತು. 'ಟೆಕ್ನೋ ಮೈನ್ ಸಾಲ್ಟ್ ಲೇಕ್' ಕಾಲೇಜಿನ 'ಟೀಮ್ ಆಲ್ಗೊರಿದಮ್ಸ್' ದ್ವಿತೀಯ ಸ್ಥಾನ ಪಡೆದು 2,00,000 ರೂ. ನಗದು ಬಹುಮಾನ ಪಡೆದರೆ, ಕೊಯಮತ್ತೂರಿನ 'ಕಾರುಣ್ಯ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಸೈನ್ಸಸ್'ನ 'ಟೀಮ್ ದೇವ್‌ಟ್ರಾನಿಕ್ಸ್' ತೃತೀಯ ಸ್ಥಾನದೊಂದಿಗೆ 1,00,000 ರೂ. ನಗದು ಬಹುಮಾನವನ್ನು ತನ್ನದಾಗಿಸಿಕೊಂಡಿತು.

ದೇಶಾದ್ಯಂತ ತಂತ್ರಜ್ಞಾನ ಕೌಶಲ್ಯವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಕಾಗ್ನಿಜೆಂಟ್ ಹಮ್ಮಿಕೊಂಡಿದ್ದ ಈ ಹ್ಯಾಕಥಾನ್‌ನಲ್ಲಿ ಭಾರತದ 160ಕ್ಕೂ ಹೆಚ್ಚು ನಗರಗಳ ಐಐಟಿ, ಎನ್‌ಐಟಿ ಹಾಗೂ ಐಐಐಟಿ ಸೇರಿದಂತೆ 450ಕ್ಕೂ ಹೆಚ್ಚು ಪ್ರತಿಷ್ಠಿತ ಎಂಜಿನಿಯರಿಂಗ್ ಕಾಲೇಜುಗಳ ಬರೋಬ್ಬರಿ 22,000ಕ್ಕೂ ಅಧಿಕ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ತಂತ್ರಜ್ಞಾನ ಕ್ಷೇತ್ರದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸುವ ಉದ್ದೇಶದಿಂದ, ಪ್ರತಿ 4 ಸದಸ್ಯರ ತಂಡದಲ್ಲಿ ಕನಿಷ್ಠ ಇಬ್ಬರು ಮಹಿಳೆಯರು ಇರಲೇಬೇಕು ಎಂಬ ನಿಯಮವನ್ನು ಕಾಗ್ನಿಜೆಂಟ್ ರೂಪಿಸಿತ್ತು. ಆದರೆ ನಿರೀಕ್ಷೆ ಮೀರಿ ಒಟ್ಟು ಸ್ಪರ್ಧಿಗಳಲ್ಲಿ ಶೇ. 62ರಷ್ಟು ಮಹಿಳೆಯರೇ ಆಗಿದ್ದರು. ಅಷ್ಟೇ ಅಲ್ಲದೆ, ಭಾಗವಹಿಸಿದ್ದ 5,600 ತಂಡಗಳ ಪೈಕಿ 1,100 ಕ್ಕೂ ಹೆಚ್ಚು ತಂಡಗಳು ಸಂಪೂರ್ಣವಾಗಿ ಮಹಿಳೆಯರಿಂದಲೇ ಕೂಡಿದ್ದವು.ಹೈದರಾಬಾದ್, ಚೆನ್ನೈ, ಬೆಂಗಳೂರು, ಕೊಯಮತ್ತೂರು ಹಾಗೂ ಪುಣೆ ನಗರಗಳಿಂದ ಅತಿ ಹೆಚ್ಚು ವಿದ್ಯಾರ್ಥಿಗಳು ಈ ಹ್ಯಾಕಥಾನ್‌ನಲ್ಲಿ ಪಾಲ್ಗೊಂಡಿದ್ದರು.

# ಎಸ್‌ಐಆರ್ ಪ್ರಕ್ರಿಯೆ ಸಂಪೂರ್ಣವಾಗಿ ಪಕ್ಷಪಾತದಿಂದ ಕೂಡಿದೆ

**ನವದೆಹಲಿ, ಮೇ 15:** ಚುನಾವಣಾ ವ್ಯವಸ್ಥೆಯಲ್ಲಿ ನಿರ್ವಹಿಸಲಾಗುತ್ತಿರುವ ಎಸ್‌ಐಆರ್ ಪ್ರಕ್ರಿಯೆಯು ಸಂಪೂರ್ಣವಾಗಿ ಪಕ್ಷಪಾತದಿಂದ ಕೂಡಿದೆ. ಇದು ದೇಶದ ಪ್ರಜಾಪ್ರಭುತ್ವದ ಮೂಲ ಆಶಯಗಳಿಗೆ ಹಾಗೂ ಚುನಾವಣಾ ಪಾರದರ್ಶಕತೆಗೆ ತೀವ್ರ ಧಕ್ಕೆ ತರಲಿದೆ ಎಂದು ಮಾಜಿ ಚುನಾವಣಾ ಆಯುಕ್ತರು, ನಿವೃತ್ತ ಹಿರಿಯ ಆಡಳಿತಗಾರರು ಹಾಗೂ ಪ್ರಮುಖ ಸಾಮಾಜಿಕ ಹೋರಾಟಗಾರರು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ.

ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗಳು ಭಾರತೀಯ ಪ್ರಜಾಪ್ರಭುತ್ವದ ಜೀವಾಳವಾಗಿವೆ. ಆದರೆ, ಪ್ರಸ್ತುತ ಜಾರಿಯಲ್ಲಿರುವ ಖಐಖ ಪ್ರಕ್ರಿಯೆಯು ನಿಷ್ಪಕ್ಷಪಾತವಾಗಿಲ್ಲ. ಇದು ಆಡಳಿತಾರೂಢ ವ್ಯವಸ್ಥೆಗೆ ಅನುಕೂಲ ಮಾಡಿಕೊಡುವಂತಹ ಹಾಗೂ ವಿರೋಧ ಪಕ್ಷಗಳಿಗೆ ಹಿನ್ನಡೆ ಉಂಟುಮಾಡುವಂತಹ ಗಂಭೀರ ಲೋಪಗಳನ್ನು ಒಳಗೊಂಡಿದೆ ಎಂದು ತಜ್ಞರ ಸಮೂಹವು ಎಚ್ಚರಿಕೆ ನೀಡಿದೆ.

ಭಾರತದಂತಹ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ 90 ಕೋಟಿಗೂ ಅಧಿಕ ನೋಂದಾಯಿತ ಮತದಾರರಿದ್ದಾರೆ. ಇಂತಹ ಬೃಹತ್ ಚುನಾವಣಾ ಪ್ರಕ್ರಿಯೆಯಲ್ಲಿ ಯಾವುದೇ ಹೊಸ ವ್ಯವಸ್ಥೆ ಅಥವಾ ತಂತ್ರಜ್ಞಾನವನ್ನು ಅಳವಡಿಸುವಾಗ ನೂರಕ್ಕೆ ನೂರರಷ್ಟು ಪಾರದರ್ಶಕತೆ ಕಾಯ್ದುಕೊಳ್ಳುವುದು ಸಂವಿಧಾನದ 324ನೇ ವಿಧಿಯ ಪ್ರಕಾರ ಚುನಾವಣಾ ಆಯೋಗದ ಆದ್ಯ ಕರ್ತವ್ಯವಾಗಿದೆ. ಆದರೆ, ಎಸ್‌ಐಆರ್ ಪ್ರಕ್ರಿಯೆಯ ಅನುಷ್ಠಾನದಲ್ಲಿ ಎಲ್ಲ ಪಾಲುದಾರರೊಂದಿಗೆ ಸಮರ್ಪಕ ಚರ್ಚೆ ನಡೆಸಿಲ್ಲ ಎಂಬುದು ಆಡಳಿತಗಾರರ ಪ್ರಮುಖ ಆರೋಪವಾಗಿದೆ.

ಈ ಪ್ರಕ್ರಿಯೆಯಲ್ಲಿನ ದತ್ತಾಂಶ ನಿರ್ವಹಣೆ ಹಾಗೂ ವಿಶ್ಲೇಷಣಾ ವಿಧಾನಗಳು ನಿರ್ದಿಷ್ಟ ಗುರಿಯೊಂದಿಗೆ ಕೆಲಸ ಮಾಡುತ್ತಿರುವ ಅನುಮಾನಗಳನ್ನು ಹುಟ್ಟುಹಾಕಿವೆ. ಇದು ಚುನಾವಣಾ ಫಲಿತಾಂಶದ ಮೇಲೆ ನೇರ ಅಥವಾ ಪರೋಕ್ಷ ಪ್ರಭಾವ ಬೀರುವ ಅಪಾಯವಿದೆ ಎಂದು ನಿವೃತ್ತ ಹಿರಿಯ ಅಧಿಕಾರಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

ಸಾರ್ವಜನಿಕ ಹಿತಾಸಕ್ತಿ ಮತ್ತು ಸಾಂವಿಧಾನಿಕ ಮೌಲ್ಯಗಳನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ, ದೋಷಪೂರಿತವಾಗಿರುವ ಈ ಪ್ರಕ್ರಿಯೆಯನ್ನು ತಕ್ಷಣವೇ ತಡೆಹಿಡಿಯಬೇಕು. ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳು, ತಂತ್ರಜ್ಞಾನ ತಜ್ಞರು ಹಾಗೂ ಪ್ರತಿಪಕ್ಷಗಳ ಪ್ರತಿನಿಧಿಗಳನ್ನೊಳಗೊಂಡ ಸ್ವತಂತ್ರ ಸಮಿತಿಯ ಮೂಲಕ ಎಸ್‌ಐಆರ್ ಪ್ರಕ್ರಿಯೆಯ ಸಮಗ್ರ ಮತ್ತು ಕೂಲಂಕಷ ಪರಿಶೀಲನೆ ನಡೆಯಬೇಕು ಎಂದು ಸಾಮಾಜಿಕ ಹೋರಾಟಗಾರರು ಆಗ್ರಹಿಸಿದ್ದಾರೆ. ಯಾವುದೇ ಪ್ರಕ್ರಿಯೆಯು ಜನಸಾಮಾನ್ಯರ ಹಾಗೂ ವಿರೋಧ ಪಕ್ಷಗಳ ವಿಶ್ವಾಸವನ್ನು ಕಳೆದುಕೊಂಡರೆ, ಅದು ಇಡೀ ಚುನಾವಣಾ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಹುಸಿಗೊಳಿಸುತ್ತದೆ. ಹೀಗಾಗಿ, ಚುನಾವಣಾ ಆಯೋಗವು ತನ್ನ ಸಾಂವಿಧಾನಿಕ ಮತ್ತು ನಿಷ್ಪಕ್ಷಪಾತ ನಿಲುವನ್ನು ಸಾಬೀತುಪಡಿಸಲು ಈ ವಿಚಾರದಲ್ಲಿ ಕೂಡಲೇ ಮಧ್ಯಪ್ರವೇಶಿಸಿ, ಎಲ್ಲ ಅನುಮಾನಗಳನ್ನು ಬಗೆಹರಿಸಬೇಕು ಎಂಬುದು ತಜ್ಞರ ಒಕ್ಕೊರಲ ಒತ್ತಾಯವಾಗಿದೆ.


ರಾಜ್ಯದ ಮಾನ್ಯ ಉಪಮುಖ್ಯಮಂತ್ರಿಗಳಾದ
ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ
ಜನ್ಮದಿನದ ಶುಭಾಶಯಗಳು
YES ಡಿಕೆಎಸ್
Fearless.
Unstoppable.
ಶುಭಕೋರುವವರು: ಮೊಹಮ್ಮದ್ ನಲಪಾಡ್